ಸಂಪುಟ: 14 Volume ಸಂಚಿಕೆ: 63 Issue ಪುಟಗಳು 08 Pages ಗುರುವಾರ 11 ಜೂನ್ 2026 ₹4 PRGINO.120927 (RNINO:KARKAN/2011/48371) BDR/054/2026-2027 mallammanudi@gmail.com www.mallammanudi.in 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ನಿನ್ನನ್ನು ಪೀಡಿಸುವ ಸಂಕಟಗಳನ್ನು ನಗುನಗುತ್ತಾ ನಾಶಪಡಿಸು.

– ಸ್ವಾಮಿ ವಿವೇಕಾನಂದ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ




ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯದ ನಾನಾ ಭಾಗದಿಂದ ಬಂದಿದ್ದ ಪಕ್ಷದ ಕಾರ್ಯಕರ್ತರು, ಮುಖಂಡರನ್ನು ಭೇಟಿಯಾದರು. ಸಚಿವರಾದ ಡಾ. ಶರಣ ಪ್ರಕಾಶ್ ಪಾಟೀಲ್ ಹಾಗೂ ಶಾಸಕರು ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.



ಎಐಸಿಸಿ ಕಾರ್ಯದರ್ಶಿ, ರಾಜ್ಯ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ ಸೂರಜ್ ಹೆಗ್ಡೆ ಅವರಿಗೆ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಅಂತಿಮ ನಮನ ಸಲ್ಲಿಸಿದ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾಜರಿದ್ದು ತಾವೂ ಅಂತಿಮ ಗೌರವ ಸಲ್ಲಿಸಿದರು.



ಸಿಎಂ ಡಿ ಕೆ ಶಿವಕುಮಾರ್ ಅವರು ದೆಹಲಿಯಲ್ಲಿನ ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಕಚೇರಿಗೆ ಬುಧವಾರ ಸೌಜನ್ಯದ ಭೇಟಿ ನೀಡಿದ್ದರು. ರಾಷ್ಟ್ರೀಯ ಅಧ್ಯಕ್ಷೆ ಅಲಕಾ ಲಂಬಾ, ಪ್ರಧಾನ ಕಾರ್ಯದರ್ಶಿಗಳಾದ ಕಮಲಾಕ್ಷಿ ರಾಜಣ್ಣ, ಶಿಲ್ಪಿ ಆರೋರಾ ಮತ್ತಿತರರು ಉಪಸ್ಥಿತರಿದ್ದರು.



ಪೀಣ್ಯ ದಾಸರಹಳ್ಳಿ: ಕ್ಷೇತ್ರದ ಮಾಜಿ ಶಾಸಕ ಆರ್. ಮಂಜುನಾಥ್ ಅವರು ನೂತನ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ದಾಸರಹಳ್ಳಿ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಮತ್ತು ಇನ್ನಿತರ ವಿಷಯಗಳ ಕುರಿತು ಮಾತುಕತೆ ನಡೆಸಿದರು ನಂತರ ಮಾಜಿ ಶಾಸಕ ಆರ್ ಮಂಜುನಾಥ್ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ಶಾಲು ಹೊದಿಸಿ ಫಲಪುಷ್ಪ ದೊಂದಿಗೆ ಗೌರವಿಸಿ ಅಭಿನಂದಿಸಿದರು.

## 25 ಕೆ.ಜಿ ಗಾಂಜಾ ವಶ, ಮೂವರ ಬಂಧನ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ನಗರದ ವಿವಿಧ ಪ್ರದೇಶಗಳಲ್ಲಿ ಪ್ರತ್ಯೇಕವಾಗಿ ನಡೆಸಿದ ದಾಳಿಗಳಲ್ಲಿ ಅಕ್ರಮವಾಗಿ ಮಾರಾಟ ಮಾಡುತ್ತಿದ್ದ ಸುಮಾರು 25 ಕೆ.ಜಿ ಗಾಂಜಾವನ್ನು ವಶಪಡಿಸಿಕೊಂಡು ಮೂವರನ್ನು ಬಂಧಿಸಿರುವ ಘಟನೆ ಬುಧವಾರ ಬೆಳಕಿಗೆ ಬಂದಿದೆ.

ನಗರದ ಇರಾನಿ ಗಲ್ಲಿಗೆ ಹೋಗುವ ಕಚ್ಚಾ ರಸ್ತೆಯ ರೈಲ್ವೆ ಟ್ರ್ಯಾಕ್ ಸಮೀಪ ಅಕ್ರಮವಾಗಿ ಗಾಂಜಾ ಮಾರಾಟ ನಡೆಯುತ್ತಿರುವ ಕುರಿತು ದೊರೆತ ಖಚಿತ ಮಾಹಿತಿಯ ಮೇರೆಗೆ ಗಾಂಧಿಗಂಜ್ ಪೊಲೀಸ್ ಠಾಣೆ ಪೊಲೀಸರು ದಾಳಿ ನಡೆಸಿದರು. ಈ ವೇಳೆ ಗಾಂಜಾ ಮಾರಾಟ ಮಾಡುತ್ತಿದ್ದ ಮಹಿಳೆಯೊಬ್ಬರನ್ನು ಬಂಧಿಸಿ, ಆಕೆಯ ಬಳಿಯಿಂದ ಸುಮಾರು 16 ಕೆ.ಜಿ ಗಾಂಜಾ ವಶಪಡಿಸಿಕೊಂಡಿದ್ದಾರೆ. ಜಪ್ತಿ ಮಾಡಲಾದ ಗಾಂಜಾದ ಮೌಲ್ಯ ಸುಮಾರು 8 ಲಕ್ಷ ರೂ. ಎಂದು ಅಂದಾಜಿಸಲಾಗಿದೆ. ಇನ್ನೊಂದು ಪ್ರಕರಣದಲ್ಲಿ ನಗರದ ಮಕ್ಕುಮಜೀ ಕಾಲೋನಿಯ ಇರಾನಿ ಗಲ್ಲಿಗೆ ಹೋಗುವ ರಸ್ತೆಯಲ್ಲಿ ಮಹಿಳೆಯೊಬ್ಬರು ಹಾಗೂ ಪುರುಷನೊಬ್ಬ ಆಟೋದಲ್ಲಿ ಗಾಂಜಾ ಸಾಗಿಸಿ ಮಾರಾಟಕ್ಕೆ ತೆಗೆದುಕೊಂಡು ಹೋಗುತ್ತಿರುವ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಪೊಲೀಸರು ದಾಳಿ ನಡೆಸಿದರು. ಈ ವೇಳೆ ಆರೋಪಿಗಳಿಂದ ಸುಮಾರು 9 ಕೆ.ಜಿ ಗಾಂಜಾವನ್ನು ವಶಪಡಿಸಿಕೊಂಡು ಇಬ್ಬರನ್ನು ಬಂಧಿಸಿದ್ದಾರೆ. ಇದರ ಮೌಲ್ಯ ಸುಮಾರು 4.50 ಲಕ್ಷ ರೂ. ಎಂದು ತಿಳಿದುಬಂದಿದೆ.

## ಕೆಐಎಡಿಬಿ ಸಂಪೂರ್ಣ ಡಿಜಿಟಲೀಕರಣ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಲಿಯ (ಕೆಐಎಡಿಬಿ) ಮೂಲಕ ನಡೆಯುವ ಭೂಸ್ವಾಧೀನ ಮತ್ತು ನಿವೇಶನ ಮಂಜೂರಾತಿಯವರೆಗಿನ ಪ್ರತಿಯೊಂದು ಪ್ರಕ್ರಿಯೆಯೂ ಇನ್ನು ಮುಂದೆ ಡಿಜಿಟಲ್ ರೂಪದಲ್ಲಿ ನಡೆಯಲಿದೆ. ಇದರಿಂದ ರೈತರು ಮತ್ತು ಉದ್ಯಮಿಗಳು ಸೇರಿದಂತೆ ಎಲ್ಲರಿಗೂ ಅನುಕೂಲವಾಗಲಿದೆ. ಈ ಸಂಬಂಧದ ಕೆಲಸಗಳನ್ನು ಮುಂದಿನ ನೂರು ದಿನಗಳಲ್ಲಿ ಮುಗಿಸಬೇಕು ಎಂದು ಬೃಹತ್ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ನೂತನ ಸರಕಾರ ಅಸ್ತಿತ್ವಕ್ಕೆ ಬಂದ ಬಳಿಕ ಅವರು ಖನಿಜ ಭವನದಲ್ಲಿ ಬುಧವಾರ ತಮ್ಮ ಇಲಾಖೆಯ ಎರಡನೇ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ಸಭೆಯಲ್ಲಿ ಅವರು ನೂರು ದಿನಗಳಲ್ಲಿ ಮಾಡಬೇಕಾದ ಕೆಲಸಗಳೇನೇನು ಎಂದು ಸ್ಪಷ್ಟಪಡಿಸಿದರು.

ಸಭೆಯ ಬಗ್ಗೆ ಮಾತನಾಡಿದ ಅವರು, ಸರಕಾರದ ಇ–ಗವರ್ನೆನ್ಸ್ ಇಲಾಖೆಯು ಏಕೀಕೃತ ಭೂ ನಿರ್ವಹಣಾ ವ್ಯವಸ್ಥೆಯನ್ನು ಹೊಂದಿದೆ. ಇದರ ಅಡಿಯಲ್ಲೇ ಈಗ ರಾಜ್ಯದ ಹಳೆಯ ಮತ್ತು ಹೊಸ ಕೈಗಾರಿಕಾ ಪ್ರದೇಶಗಳಲ್ಲಿನ ನಿವೇಶನಗಳ ಪ್ರತಿಯೊಂದು ವಿವರವನ್ನೂ ಡಿಜಿಟಲೀಕರಣ ಮಾಡಲಾಗುವುದು. ಇದರಲ್ಲಿ ಪ್ರತೀ ನಿವೇಶನಕ್ಕೆ ಸಂಬಂಧಿಸಿದಂತೆಯೂ ಒಟ್ಟು 77 ಕಾಲಂಗಳಲ್ಲಿ ಮಾಹಿತಿ ಇರಲಿದೆ ಎಂದಿದ್ದಾರೆ.

# ಸಂಪುಟ ಡಿಕೆಶಿ ಸಂಕಟ

## ಮುಖ್ಯಮಂತ್ರಿಯಾದ ಬಳಿಕ ಮೊದಲ ಬಾರಿಗೆ ದೆಹಲಿಗೆ ಡಿ.ಕೆ.ಶಿವಕುಮಾರ್ | ವರಿಷ್ಠರ ಬಳಿ ಚರ್ಚೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ರಾಜಕೀಯದಲ್ಲಿ ಖಾತೆ ಹಂಚಿಕೆ–ಆಕಾಂಕ್ಷಿಗಳ ಅಸಮಾಧಾನ ಇದೀಗ ಚರ್ಚೆಗೆ ಗ್ರಾಸವಾಗಿದೆ. ಸಂಪುಟ ವಿಸ್ತರಣೆ ಕುರಿತಂತೆ ಸಿಎಂ ಡಿ.ಕೆ. ಶಿವಕುಮಾರ್ ಅವರು ಕಾಂಗ್ರೆಸ್ ಹೈಕಮಾಂಡ್ ಜೊತೆ ಸಮಾಲೋಚನೆ ನಡೆಸಿದ್ದಾರೆ. ಸಿಎಂ ಆಗಿ ಪ್ರಮಾಣವಚನ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ಹೈಕಮಾಂಡ್ ಭೇಟಿಗಾಗಿ ಮುಖ್ಯಮಂತ್ರಿ ದೆಹಲಿಗೆ ತೆರಳಿದ್ದಾರೆ. ಹೈಕಮಾಂಡ್ ನಾಯಕರಿಗೆ ಡಿಕೆಶಿ ತಮ್ಮನ್ನು ಸಿಎಂ ಹುದ್ದೆ ಕೊಟ್ಟಿದ್ದಕ್ಕಾಗಿ ಧನ್ಯವಾದ ಸಮರ್ಪಣೆ ಮಾಡಲಿದ್ದಾರೆ.

**ವಿವಿಧ ಕಚೇರಿಗೆ ಭೇಟಿ:** ಬುಧವಾರ ಬೆಳಗ್ಗೆ ಬೆಂಗಳೂರಿನಿಂದ ದೆಹಲಿಗೆ ತೆರಳಿದ ಮುಖ್ಯಮಂತ್ರಿ ಅವರು, ಎಐಸಿಸಿ ಕಚೇರಿಗೆ ಭೇಟಿ ನೀಡಿದ್ದಾರೆ. ಬಳಿಕ ಯುವ ಕಾಂಗ್ರೆಸ್ ಕಚೇರಿ, ಅಖಿಲ ಭಾರತ ಮಹಿಳಾ ಕಾಂಗ್ರೆಸ್ ಸೇರಿ ಇತರೆ ಕಚೇರಿಗಳಿಗೂ ಸಿಎಂ ಡಿಕೆಶಿ ಭೇಟಿ ನೀಡಿದ್ದಾರೆ.

**ಕೆಲವರಿಂದ ಬೇಸರ ವ್ಯಕ್ತ:** ಸಚಿವ ಕೃಷ್ಣಭೈರೇಗೌಡ ಸೇರಿದಂತೆ ಕೆಲವು ಸಚಿವರು ಹಂಚಿಕೆ ಮಾಡಿರುವ ಖಾತೆ ಬಗ್ಗೆ ಅಸಮಾಧಾನ ಹೊರಹಾಕಿದ್ದಾರೆ. ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರ ಖಾತೆ ಅಸಮಾಧಾನಕ್ಕೆ ತೆರೆ ಬಿದ್ದ ನಂತರವೂ ಕೆಲವು ಸಚಿವರು ಖಾತೆ ಹಂಚಿಕೆ ಕುರಿತಂತೆ ತಮ್ಮ ಬೇಸರ ವ್ಯಕ್ತಪಡಿಸಿದ್ದಾರೆ.

### 20 ಸಚಿವ ಸ್ಥಾನ ಕುರಿತು..!

ಈಗಾಗಲೇ ಕೃಷ್ಣಭೈರೇಗೌಡ ಅವರು ದೆಹಲಿಯಲ್ಲಿ ಬೀಡುಬಿಟ್ಟು ಖಾತೆ ಕ್ಯಾತೆ ತೆಗೆದಿದ್ದಾರೆ ಎನ್ನಲಾಗಿದೆ. ಇದರ ಬೆನ್ನಲ್ಲೇ ದೆಹಲಿಗೆ ತೆರಳಿರುವ ಸಿಎಂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸುರ್ಜೇವಾಲ, ವೇಣುಗೋಪಾಲ್ ಅವರನ್ನು ಭೇಟಿ ಮಾಡಿ ಖಾತೆ ಹಂಚಿಕೆಯ ಗೊಂದಲ ಬಗೆಹರಿಸುವುದು ಹಾಗೂ ಬಾಕಿ ಉಳಿದಿರುವ 20 ಸಚಿವ ಸ್ಥಾನಗಳನ್ನು ಯಾರ್ಯಾರಿಗೆ ನೀಡಬೇಕು ಎಂಬ ಪ್ರಾಥಮಿಕ ಚರ್ಚೆ ನಡೆಸಿದ್ದಾರೆ.



### ಡಿಸಿಎಂ ಪರಂ ದೆಹಲಿಗೆ

ಮುಖ್ಯಮಂತ್ರಿ ದಿಲ್ಲಿಗೆ ಇಳಿದ ಬೆನ್ನಲ್ಲೇ ಡಿಸಿಎಂ ಪರಮೇಶ್ವರ್ ಕೂಡಾ ದೆಹಲಿಗೆ ಆಗಮಿಸಿದ್ದಾರೆ. ಇಂದು ಮಧ್ಯಾಹ್ನ ದೆಹಲಿಗೆ ತೆರಳಿದ್ದು, ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಪ್ರಮಾಣವಚನದ ಸ್ವೀಕಾರದ ಅನಂತರ ಆಗಿರುವ ಬೆಳವಣಿಗೆ, ಸಂಪುಟ ವಿಸ್ತರಣೆ ಮಾಡುವ ಅನಿವಾರ್ಯತೆ, ಅದರಿಂದ ಎದುರಾಗುವ ಸವಾಲುಗಳ ಕುರಿತಂತೆ ಹೈಕಮಾಂಡ್ ನಾಯಕರೊಂದಿಗೆ ಸಮಾಲೋಚನೆ ನಡೆಸುವ ಸಾಧ್ಯತೆಯೂ ಇವೆ ಎಂದಿದೆ ಮೂಲ.



ಸಂಪುಟ ವಿಸ್ತರಣೆ ವೇಳೆ ತಮಗೆ ಸಚಿವ ಸ್ಥಾನ ನೀಡಬೇಕೆಂದು ಹಲವು ನಾಯಕರು ಬೇಡಿಕೆ ಇಡುವುದು ಸಹಜ. ಯಾರನ್ನು ಸಚಿವರನ್ನಾಗಿ ಮಾಡಬೇಕು, ಯಾರಿಗೆ ಯಾವ ಖಾತೆ ನೀಡಬೇಕು ಎಂಬುದು ಹೈಕಮಾಂಡ್ ಗೆ ಚೆನ್ನಾಗಿ ತಿಳಿದಿದೆ. ರಾಜ್ಯಸಭೆ ಹಾಗೂ ವಿಧಾನ ಪರಿಷತ್ ಚುನಾವಣಾ ಪ್ರಕ್ರಿಯೆ ಪೂರ್ಣಗೊಂಡ ನಂತರ ಈ ಬಗ್ಗೆ ಹೈಕಮಾಂಡ್ ನಿರ್ಧಾರ ಕೈಗೊಳ್ಳುವ ನಿರೀಕ್ಷೆ ಇದೆ.

–ಮಧು ಬಂಗಾರಪ್ಪ, ಮಾಜಿ ಶಿಕ್ಷಣ ಸಚಿವ


### ಸಚಿವ ಪದವಿ ಆಕಾಂಕ್ಷಿಗಳ ದಂಡು

ಹಿರಿಯ ಶಾಸಕರು, ಮಾಜಿ ಸಚಿವರು ಹಾಗೂ ಮೊದಲ ಬಾರಿಗೆ ಆಯ್ಕೆಯಾಗಿರುವ ಶಾಸಕರೂ ಕೂಡಾ ಸಚಿವ ಸ್ಥಾನ ನೀಡುವಂತೆ ಬೇಡಿಕೆ ಇಟ್ಟಿದ್ದಾರೆ. ಸಚಿವ ಸ್ಥಾನಕ್ಕಾಗಿ ವರಿಷ್ಠರ ಮೇಲೆ ಒತ್ತಡ, ಶಿಫಾರಸು ಮಾಡತೊಡಗಿದ್ದಾರೆ. ಸಚಿವಾಕಾಂಕ್ಷಿ ಶಾಸಕರು ದೆಹಲಿಗೆ ಆಗಮಿಸಿದ್ದು, ಹೈಕಮಾಂಡ್ ನಾಯಕರ ಮನವೊಲಿಕೆ ಹಾಗೂ ಒತ್ತಡ ತಂತ್ರವನ್ನು ಅನುಸರಿಸುತ್ತಿದ್ದಾರೆ.

## ತಹಸೀಲ್ದಾರ ಕಚೇರಿಯ ಸಿಬ್ಬಂದಿಗಳ ನಿರ್ಲಕ್ಷ್ಯ: ಪರದಾಡುತ್ತಿರುವ ಅಮಾಯಕರು

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ತಹಸೀಲ್ದಾರ ಕಚೇರಿಯಲ್ಲಿ ಕೆಲವು ಸಿಬ್ಬಂದಿಗಳ ಕೆಲಸದ ನಿರ್ಲಕ್ಷ್ಯದಿಂದ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂಬ ಆರೋಪಗಳು ಕೇಳಿಬರುತ್ತಿವೆ. ವಿವಿಧ ದಾಖಲೆಗಳು, ಆದಾಯ ಪ್ರಮಾಣಪತ್ರ, ಜಾತಿ ಪ್ರಮಾಣಪತ್ರ, ಪಹಣಿ ತಿದ್ದುಪಡಿ ಸೇರಿದಂತೆ ಹಲವಾರು ಕೆಲಸಗಳಿಗಾಗಿ ಕಚೇರಿಗೆ ಬರುವ ಜನರು ದಿನಗಟ್ಟಲೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಸಾರ್ವಜನಿಕರು ದೂರಿದ್ದಾರೆ. ಕಚೇರಿಯಲ್ಲಿ ಅರ್ಜಿಗಳ ವಿಲೇವಾರಿ ವಿಳಂಬವಾಗುತ್ತಿರುವುದರಿಂದ ಗ್ರಾಮೀಣ ಪ್ರದೇಶದ ಬಡವರು, ರೈತರು, ವಿದ್ಯಾರ್ಥಿಗಳು ಹಾಗೂ ವೃದ್ಧರು ಹೆಚ್ಚಿನ ಸಂಕಷ್ಟಕ್ಕೆ ಒಳಗಾಗುತ್ತಿದ್ದಾರೆ. ಅನೇಕರು ಒಂದೇ ಕೆಲಸಕ್ಕಾಗಿ ಹಲವಾರು ಬಾರಿ ಕಚೇರಿಗೆ ಭೇಟಿ ನೀಡಬೇಕಾಗುತ್ತಿದ್ದು, ಸಮಯ ಹಾಗೂ ಹಣ ಎರಡೂ



### ಕಳೆದ ಒಂದು ವರ್ಷದಿಂದ, ಡಿ.ಸಿ ಕಚೇರಿ, ಎ.ಸಿ ಕಚೇರಿ, ಹುಮನಾಬಾದ್ ತಹಸೀಲ್ದಾರ ಕಚೇರಿಗೆ ಅಲೆದಾಡಿ ಸುಸ್ತಾದ ಅಮಾಯಕಿ

ವ್ಯರ್ಥವಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಕೆಲ ಸಿಬ್ಬಂದಿಗಳು ನಿರ್ಲಕ್ಷ್ಯ ಧೋರಣೆ ತೋರುತ್ತಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ. ಇದರಿಂದ ಜನರಲ್ಲಿ ಆಡಳಿತ ವ್ಯವಸ್ಥೆಯ ಬಗ್ಗೆ ಬೇಸರ ಹೆಚ್ಚಾಗುತ್ತಿದೆ. ಜಿಲ್ಲಾಡಳಿತ ಹಾಗೂ ಸಂಬಂಧಿತ ಅಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ಕಚೇರಿಯ ಕಾರ್ಯವೈಖರಿಯನ್ನು ಪರಿಶೀಲಿಸಬೇಕು ಎಂದು ನಾಗರಿಕರು ಒತ್ತಾಯಿಸಿದ್ದಾರೆ.

# ಪಾಲಿಕೆಯ ಅವೈಜ್ಞಾನಿಕ ಡ್ರೈನೇಜ್ ಬಳ್ಳಾರಿ ಜನರ ಆವಾಜ್

• ಎಂ. ಜಂಬುನಾಥ, ಬಳ್ಳಾರಿ

ಮಹಾನಗರ ಪಾಲಿಕೆ ವ್ಯಾಪ್ತಿಯ ಅನೇಕ ವಾರ್ಡ್‌ಗಳಲ್ಲಿ ಡ್ರೈನೇಜ್ ದುರಸ್ತಿ, ಅಂಡರ್ ಡ್ರೈನೇಜ್, ವಿವಿಧ ಅಭಿವೃದ್ಧಿ ಕಾಮಗಾರಿಗಳು ಅವೈಜ್ಞಾನಿಕವಾಗಿದ್ದು ಇದರ ವಿರುದ್ಧ ಇಲ್ಲಿನ ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಳಪೆ ಕಾಮಗಾರಿ ಹಾಗೂ ಸಮರ್ಪಕ ಯೋಜನೆ ಇಲ್ಲದೆ ಚರಂಡಿ ಕಾಮಾಗರಿ ನಡೆಸಲಾಗುತ್ತಿದೆ ಎಂದು ಸ್ಥಳೀಯರು ದೂರಿದ್ದಾರೆ.

**ಕೆಲವೇ ದಿನಗದಲ್ಲಿ ಕುಸಿತ:** ನಗರದ ಹಲವೆಡೆ ಡ್ರೈನೇಜ್ ಕಾಮಗಾರಿಗಳನ್ನು ಆರಂಭಿಸಿ ಮಧ್ಯದಲ್ಲೇ ಬಿಟ್ಟಿರುವುದು, ಕೆಲ ಕಡೆ ಹೊಸದಾಗಿ ಹಾಕಿದ ಚರಂಡಿಗಳು ಕೆಲವೇ ದಿನಗಳಲ್ಲಿ ಕುಸಿದು ಹೋಗಿರುವುದು, ಮಳೆ ಬಂದಾಗ ನೀರು ಸರಿಯಾಗಿ ಹರಿಯದೇ ರಸ್ತೆಗಳ ಮೇಲೆ ನಿಂತುಕೊಳ್ಳುತ್ತಿರುವುದು ಜನರ ಸಂಕಷ್ಟವನ್ನು ಹೆಚ್ಚಿಸಿದೆ. ಇದರಿಂದ ವಾಹನ ಸವಾರರು ಹಾಗೂ ಪಾದಚಾರಿಗಳು ಪ್ರತಿದಿನ ತೊಂದರೆ ಅನುಭವಿಸುತ್ತಿದ್ದಾರೆ.

**ಸ್ಥಳೀಯ ನಿವಾಸಿಗಳ ಗೋಳು:** ಸಾರ್ವಜನಿಕರ ಪ್ರಕಾರ, ಡ್ರೈನೇಜ್ ಕಾಮಗಾರಿಗಳ ವೇಳೆ ತಾಂತ್ರಿಕ ನಿಯಮಗಳನ್ನು ಪಾಲಿಸಲಾಗುತ್ತಿಲ್ಲ. ಸರಿಯಾದ ಇಳಿಜಾರು ವ್ಯವಸ್ಥೆ ಇಲ್ಲದೇ ಚರಂಡಿ ನಿರ್ಮಾಣ ಮಾಡಿರುವುದರಿಂದ ಮಲಿನ ನೀರು ಹರಿಯದೇ ನಿಲ್ಲುತ್ತದೆ. ಕೆಲವು ವಾರ್ಡ್‌ಗಳಲ್ಲಿ ಚರಂಡಿಗಳ ಮೇಲೆ ಸರಿಯಾದ ಮುಚ್ಚಳಗಳನ್ನು ಅಳವಡಿಸದೇ ಇರುವುದರಿಂದ ಅಪಘಾತದ ಭೀತಿ ಹೆಚ್ಚಾಗಿದೆ ಎಂದು ನಿವಾಸಿಗಳು ದೂರಿದ್ದಾರೆ.

### ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾರ್ವಜನಿಕರ ಹಿಡಿಶಾಪ

ಬಳ್ಳಾರಿ ಮಹಾನಗರ ಪಾಲಿಕೆ ಸಂಬಂಧಪಟ್ಟ ಅಧಿಕಾರಿಗಳ ಮೇಲೂ ಗಂಭೀರ ಆರೋಪಗಳು ಕೇಳಿಬರುತ್ತಿವೆ. ಕಾಮಗಾರಿಗಳ ಮೇಲ್ವಿಚಾರಣೆ ಸರಿಯಾಗಿ ನಡೆಯದೇ ಇರುವುದರಿಂದ ಗುತ್ತಿಗೆದಾರರು ಮನಬಂದಂತೆ ಕೆಲಸ ಮಾಡುತ್ತಿದ್ದಾರೆ ಎಂದು ಸಾರ್ವಜನಿಕರು ಹಿಡಿಶಾಪ ಹಾಕುತ್ತಿದ್ದಾರೆ. ಸ್ಥಳ ಪರಿಶೀಲನೆ, ಗುಣಮಟ್ಟ ತಪಾಸಣೆ ಮತ್ತು ಸಮಸ್ಯೆಗಳ ತ್ವರಿತ ಪರಿಹಾರದಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ ಎನ್ನಲಾಗಿದೆ.

ಪಾಲಿಕೆ ಫಜೀತಿ



### ಪಾಲಿಕೆ ಸದಸ್ಯರ ವಿರುದ್ಧ ಸಾರ್ವಜನಿಕರ ಆಕ್ರೋಶ

ನಗರದ ಹಲವು ವಾರ್ಡ್ ನಿವಾಸಿಗಳು, ಸಮಸ್ಯೆ ಬಗ್ಗೆ ಅನೇಕ ಬಾರಿ ದೂರು ನೀಡಿದರೂ ಮಹಾನಗರ ಪಾಲಿಕೆ ಸದಸ್ಯರು ಸ್ಪಂದಿಸುತ್ತಿಲ್ಲ. ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಬದಲು ನಿರ್ಲಕ್ಷ್ಯ ತೋರುತ್ತಿದ್ದಾರೆ" ಎಂದು ಆರೋಪಿಸಿದ್ದಾರೆ. ಚುನಾವಣೆ ಸಂದರ್ಭದಲ್ಲಿ ಮಾತ್ರ ಭರವಸೆ ನೀಡುವ ಜನಪ್ರತಿನಿಧಿಗಳು ಈಗ 'ನಿದ್ರಾ ವ್ಯವಸ್ಥೆಯಲ್ಲಿ' ಇದ್ದಾರೆ ಎಂದು ಸಾರ್ವಜನಿಕರು ಕಿಡಿಕಾರಿದ್ದಾರೆ.

ನಗರದ 34ನೇ ವಾರ್ಡ್ ತಿಲಕ್ ನಗರದಲ್ಲಿ ನಾನು ಮಹಾನಗರ ಪಾಲಿಕೆ ಸದಸ್ಯ ಆಗಕಿಂತ ಮುಂದೆ ಆ ಪ್ರದೇಶದಲ್ಲಿ ಪ್ಲಾನಿಂಗ್ ಇಲ್ಲದೆ ಡ್ರೈನೇಜ್ ಕಾಮಗಾರಿಗಳನ್ನು ನಡೆಸಿದ್ದಾರೆ. ಎರಡು ದಿನ ಹಿಂದೆ ಆ ಪ್ರದೇಶಕ್ಕೆ ಭೇಟಿಕೊಟ್ಟು ಸಂಬಂಧಪಟ್ಟ ಅಧಿಕಾರಿಗಳನ್ನು ಕರೆಸಿಕೊಂಡು ಜೆಸಿಬಿ ಯಿಂದ ಮಳೆ ನೀರು ಹಾಗೂ ಚರಂಡಿ ನೀರನ್ನು ನಿಲ್ಲಿಸುವುದಕ್ಕೆ ಪ್ರಯತ್ನಿಸಿದ್ದೇವೆ. ಮತ್ತು ಸೊಳ್ಳೆಯಿಂದ ಸಾರ್ವಜನಿಕರ ರಕ್ಷಣೆಗಾಗಿ ಫಾಗಿಂಗ್ ಮಾಡಿಸಿದ್ದೇನೆ.

–ರಾಜೇಶ್ವರಿ ಸುಬ್ಬರಾಯುಡು, ಮಹಾನಗರ ಪಾಲಿಕೆ ಸದಸ್ಯ

33ನೇ ವಾರ್ಡ್ ಕುವೆಂಪು ನಗರ ಹಾಗೂ ವಿನಾಯಕ ನಗರ ಮತ್ತು ಅಲ್ಲಿಪುರ ಚರಂಡಿ ನೀರಿನ ಶಾಶ್ವಿತ ಪರಿಹಾರಕ್ಕಾಗಿ ವೆಟ್ ವೆಲ್ ಕಾಮಗಾರಿಯನ್ನು ಶೀಘ್ರದಲ್ಲೇ ಪ್ರಾರಂಭ ಮಾಡುತ್ತೇವೆ ವಿಷ್ಣುವರ್ಧನ್ ಪಾರ್ಕ್ ನಲ್ಲಿ ಮಳೆ ನೀರು ಹಾಗೂ ಚರಂಡಿ ನೀರನ್ನು ತಳಿಸುವುದಕ್ಕೆ ಸಂಬಂಧಪಟ್ಟ ಮಹಾನಗರ ಪಾಲಿಕೆ ಸಿಬ್ಬಂದಿಯನ್ನು ಕರೆದುಕೊಂಡು ಹೋದರೆ ಆ ಪ್ರದೇಶದ ಸಾರ್ವಜನಿಕರು ಸಹಕರ ಮಾಡುತ್ತಿಲ್ಲ.

–ಜಾನಕಿ, ಮಹಾನಗರ ಪಾಲಿಕೆ ಸದಸ್ಯೆ

ಮಹಾನಗರ ಪಾಲಿಕೆ ವ್ಯಾಪ್ತಿ ಒಳಗಡೆ ಬರುವ ವಿವಿಧ ವಾರ್ಡುಗಳಿಂದ ಚರಂಡಿ ಸಮಸ್ಯ ಮುಂತಾದ ಸಮಸ್ಯೆಗಳ ಬಗ್ಗೆ ದೂರುಗಳು ಬರದು ಸರ್ವಸಾಮಾನ್ಯ ಆದರೆ ಸಂಬಂಧಪಟ್ಟ ಅಧಿಕಾರಿಗಳ ಜೊತೆ ಕರೆಸಿ ಚರ್ಚಿಸಿ ಪರಿಸ್ಕರಿಸುವುದಕ್ಕೆ ಕಳುಹಿಸಿ ಕೊಟ್ಟಿರುತ್ತೇವೆ ಆದರೆ ಕೆಲವು ವಾರ್ಡ್ ಸದಸ್ಯರು ನಮ್ಮ ಗಮನಕ್ಕೆ ಇಲ್ಲದೆ ಕಳುಹಿಸಬೇಡಿ ಎಂದು ಫೋನ್ ಕರೆಗಳನ್ನು ಮಾಡುತ್ತಾರೆ. ಆದರೆ ಮಹಾಪೌರರಾಗಿ ಸಾರ್ವಜನಿಕರ ಸಮಸ್ಯೆಗಳು ಪರಿಹರಿಸುವುದಕ್ಕೆ ನಮ್ಮ ಕರ್ತವ್ಯ.

–ಪೂಜಾರಿ ಗಾದೆಪ್ಪ, ಮಹಾನಗರ ಪಾಲಿಕೆ ಮಹಾಪೌರರು

## Ujjwala Yojana ಸಬ್ಸಿಡಿ ಕಡಿತ: ಬಡ ಕುಟುಂಬಗಳನ್ನು ಮತ್ತೆ ಸೌದೆ ಒಲೆಯತ್ತ 'ತಳ್ಳುತ್ತಿದ್ದಾರೆ': ರಾಹುಲ್ ಆರೋಪ..!

## ಆಕಾಲಿಕ ಮಳೆಗೆ ಹಾನಿಯಾದ ತೋಟಗಾರಿಕೆ ಬೆಳೆಗಳಿಗೆ ತಕ್ಷಣ ಪರಿಹಾರ ಒದಗಿಸಬೇಕು

ರಾಜ್ಯದಲ್ಲಿ ಇತ್ತೀಚೆಗೆ ಸುರಿದ ಆಕಾಲಿಕ ಮಳೆಯಿಂದ ತೋಟಗಾರಿಕೆ ಬೆಳೆಗಳು ತೀವ್ರ ಹಾನಿಗೊಳಗಾಗಿವೆ. ದ್ರಾಕ್ಷಿ, ದಾಳಿಂಬೆ, ಮಾವು, ಬಾಳೆ, ತರಕಾರಿ ಹಾಗೂ ಹೂವಿನ ಬೆಳೆಗಳನ್ನು ಬೆಳೆದ ರೈತರು ಅಪಾರ ನಷ್ಟ ಅನುಭವಿಸುತ್ತಿದ್ದಾರೆ. ಬೆಳೆ ಕಟಾವಿನ ಹಂತದಲ್ಲಿದ್ದಾಗ ಸುರಿದ ಮಳೆಯಿಂದ ರೈತರ ನಿರೀಕ್ಷೆಗಳು ಭಗ್ನಗೊಂಡಿವೆ.

### ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ತೋಟಗಾರಿಕೆ ಬೆಳೆಗಳು ಹೆಚ್ಚಿನ ಬಂಡವಾಳ ಮತ್ತು ನಿರಂತರ ಆರೈಕೆಯನ್ನು ಬೇಡುವುದರಿಂದ ಹಾನಿಯಾದಾಗ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಾರೆ. ಸಾಲ ಮಾಡಿ ಬೆಳೆ ಬೆಳೆದ ಅನೇಕ ರೈತರು ಈಗ ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ. ಆದ್ದರಿಂದ ಸರ್ಕಾರ ಮತ್ತು ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಹಾನಿಗೊಳಗಾದ ಪ್ರದೇಶಗಳಿಗೆ ಭೇಟಿ ನೀಡಿ ಸಮೀಕ್ಷೆ ನಡೆಸಬೇಕು.

ಬೆಳೆ ಹಾನಿಯ ಅಂದಾಜು ವರದಿಯನ್ನು ಶೀಘ್ರವಾಗಿ ಸಿದ್ಧಪಡಿಸಿ ರೈತರಿಗೆ ಸಮರ್ಪಕ ಪರಿಹಾರ ವಿತರಿಸಬೇಕು. ಪರಿಹಾರ ವಿತರಣೆಯಲ್ಲಿ ವಿಳಂಬವಾಗದಂತೆ ಕ್ರಮ ಕೈಗೊಳ್ಳುವುದು ಅತ್ಯಗತ್ಯ. ಜೊತೆಗೆ ರೈತರಿಗೆ ಬೆಳೆ ವಿಮೆ ಸೌಲಭ್ಯಗಳ ಲಾಭ ಕೂಡ ತ್ವರಿತವಾಗಿ ದೊರೆಯುವಂತೆ ಸರ್ಕಾರ ಕ್ರಮವಹಿಸಬೇಕು.

ರೈತರು ದೇಶದ ಬೆನ್ನೆಲುಬಾಗಿದ್ದು, ಅವರ ಸಂಕಷ್ಟದ ಸಮಯದಲ್ಲಿ ಸರ್ಕಾರ ನೆರವಿಗೆ ನಿಲ್ಲುವುದು ಕರ್ತವ್ಯವಾಗಿದೆ. ಆಕಾಲಿಕ ಮಳೆಯಿಂದ ಹಾನಿಗೊಳಗಾದ ತೋಟಗಾರಿಕೆ ಬೆಳೆಗಳಿಗೆ ತಕ್ಷಣ ಪರಿಹಾರ ಒದಗಿಸಿ ರೈತರ ಬದುಕಿಗೆ ಆಸರೆಯಾಗಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.



## ರಾಜಕೀಯ ಇತಿಹಾಸದಲ್ಲಿ ಸುವರ್ಣ ಅಧ್ಯಾಯ ಬರೆದ ಮೋದಿ



**ಬೀದರ್:** ವಿಶ್ವದ ಗಮನ ಸೆಳೆದ ದೂರದೃಷ್ಟಿಯ ನಾಯಕತ್ವದ ಪ್ರತೀಕವಾದ ಸನ್ಮಾನ್ಯ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಭಾರತದ ಪ್ರಧಾನಿಯಾಗಿ 12 ವರ್ಷಗಳ ಯಶಸ್ವಿ ಆಡಳಿತವನ್ನು ಪೂರೈಸಿರುವುದು ದೇಶದ ರಾಜಕೀಯ ಇತಿಹಾಸದಲ್ಲಿ ಮಹತ್ವದ ಮೈಲಿಗಲ್ಲಾಗಿದೆ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಮನ್ನಾಎಖೇಳ್ಳಿ ಗ್ರಾಮದ ಸುಪ್ರಸಿದ್ಧ ಶ್ರೀ ಶಿವನ ದೇವಾಲಯದಲ್ಲಿ ಬಿಜೆಪಿ ಬೀದರ್ ದಕ್ಷಿಣ ಮಂಡಲ ವತಿಯಿಂದ ಹಮ್ಮಿಕೊಂಡಿದ್ದ ವಿಶೇಷ ಪೂಜೆ ಕಾರ್ಯಕ್ರಮದಲ್ಲಿ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರು ಕಳೆದ 12 ವರ್ಷಗಳಲ್ಲಿ ಮೂಲಸೌಕರ್ಯ, ಆರ್ಥಿಕತೆ, ಡಿಜಿಟಲ್ ಕ್ರಾಂತಿ, ರಾಷ್ಟ್ರೀಯ ಭದ್ರತೆ, ಮಹಿಳಾ ಸಬಲೀಕರಣ, ರೈತರ ಕಲ್ಯಾಣ, ಬಡವರ ಅಭಿವೃದ್ಧಿ ಹಾಗೂ ಜಾಗತಿಕ ಮಟ್ಟದಲ್ಲಿ ಭಾರತದ ಗೌರವವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಹಲವು ಐತಿಹಾಸಿಕ ನಿರ್ಧಾರಗಳನ್ನು ಕೈಗೊಂಡಿದ್ದಾರೆ. "ವಿಕಸಿತ ಭಾರತ"ದ ಕನಸನ್ನು ನನಸಾಗಿಸುವ ದಿಕ್ಕಿನಲ್ಲಿ ದೇಶವನ್ನು ದೃಢವಾಗಿ ಮುನ್ನಡೆಸುತ್ತಿದ್ದಾರೆ ಎಂದು ಹೇಳಿದರು.

ಈ ಐತಿಹಾಸಿಕ ಸಾಧನೆಯ ಸ್ಮರಣಾರ್ಥ ಹಾಗೂ ದೇಶದ ಸುಭಿಕ್ಷತೆ ಮತ್ತು ಲೋಕಕಲ್ಯಾಣಕ್ಕಾಗಿ ಮನ್ನಾಎಖೇಳ್ಳಿ ಗ್ರಾಮದ ಪವಿತ್ರ ಶಿವನ ಮಂದಿರದಲ್ಲಿ ಕ್ಷೇತ್ರದ ಮುಖಂಡರು, ಕಾರ್ಯಕರ್ತರು, ಪಕ್ಷದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಒಗ್ಗೂಡಿ ವಿಶೇಷ ಪೂಜೆ, ಮಹಾಮಂಗಳಾರತಿ ಮತ್ತು ಪುಷ್ಪ ನಮನ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ದೇವಸ್ಥಾನದ ಆವರಣದಲ್ಲಿ ಸ್ವಚ್ಛತಾ ಅಭಿಯಾನ ನಡೆಸಿ ಪರಿಸರ ಸಂರಕ್ಷಣೆ ಮತ್ತು ಸೇವಾ ಮನೋಭಾವವನ್ನು ಸಾರಲಾಯಿತು.

ದೇಶದ ಏಕತೆ, ಸಮೃದ್ಧಿ ಹಾಗೂ ಜನಕಲ್ಯಾಣಕ್ಕಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಭಾರತವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುತ್ತಿರುವ ಗೌರವಾನ್ವಿತ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರಿಗೆ ಭಗವಂತ ಶಿವನು ಉತ್ತಮ ಆಯುರಾರೋಗ್ಯ, ದೀರ್ಘಾಯುಷ್ಯ, ಅಚಲ ಮನೋಬಲ ಹಾಗೂ ಇನ್ನಷ್ಟು ಶಕ್ತಿ–ಸಾಮರ್ಥ್ಯವನ್ನು ಕರುಣಿಸಲಿ ಎಂದು ಪ್ರಾರ್ಥಿಸಲಾಯಿತು.

"ಸೇವೆಯೇ ಸಂಕಲ್ಪ–ರಾಷ್ಟ್ರವೇ ಪ್ರಥಮ" ಎಂಬ ಧ್ಯೇಯದೊಂದಿಗೆ ದೇಶದ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತ ಇನ್ನಷ್ಟು ವೈಭವದ ಶಿಖರ ತಲುಪಲಿ ಎಂಬುದು ಎಲ್ಲರ ಆಶಯವಾಗಿದೆ ಎಂದು ಹಾರೈಸಿದರು. ಈ ಸಂದರ್ಭದಲ್ಲಿ ಪಕ್ಷದ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ರಾಜ್ಯ, ಜಿಲ್ಲಾ, ಮಂಡಲ ಪದಾಧಿಕಾರಿಗಳು, ಕಾರ್ಯಕರ್ತರು ಮತ್ತು ಅಭಿಮಾನಿಗಳು ಉಪಸ್ಥಿತರಿದ್ದರು.

# ಮಾಶಾಸನಕ್ಕೆ ಪರಿಗಣಿಸುವ ವಯಸ್ಸು ಇಳಿಸಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್




ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಡಿಯಲ್ಲಿ ಕಲಾವಿದರಿಗೆ ನೀಡಲಾಗುವ ಮಾಶಾಸನ ಸೌಲಭ್ಯಕ್ಕೆ ಪ್ರಸ್ತುತ ನಿಗದಿಪಡಿಸಿರುವ 58 ವರ್ಷ ವಯೋಮಿತಿಯನ್ನು ಕಡಿತಗೊಳಿಸಿ 40 ವರ್ಷಕ್ಕೆ ಇಳಿಸಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಕರಾದಸಂಸ) ರಾಜ್ಯ ಸಂಘಟನಾ ಸಂಚಾಲಕ ಮಾರುತಿ ಬೌದ್ಧೆ ಸರ್ಕಾರವನ್ನು ಆಗ್ರಹಿಸಿದರು.

ನಗರದ ಡಾ. ಚೆನ್ನಬಸವಪಟ್ಟದೇವರು ರಂಗಮಂದಿರದಲ್ಲಿ ಚಿಗುರು ಸೋಷಿಯಲ್ ಮತ್ತು ಕಲ್ಚರಲ್ ಟ್ರಸ್ಟ್ ತಡಪಳ್ಳಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಪ್ರೊ. ಬಿ. ಕೃಷ್ಣಪ್ಪ ಅವರ ಜಯಂತ್ಯೋತ್ಸವ ಅಂಗವಾಗಿ ನಡೆದ ಜನಪರ ಸಂಗೀತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲಾ ಪ್ರಕಾರದ ಕಲೆಗಳನ್ನು ಪ್ರದರ್ಶಿಸುವ ಕಲಾವಿದರಿಗೆ ಮಾಶಾಸನ ಪಡೆಯಲು 58 ವರ್ಷ ವಯಸ್ಸು ಕಡ್ಡಾಯಗೊಳಿಸಿರುವುದು ಅವೈಜ್ಞಾನಿಕ ಕ್ರಮವಾಗಿದೆ. ಅನೇಕ ಕಲಾವಿದರು ಆ ವಯಸ್ಸಿಗೆ ತಲುಪುವ ಮುನ್ನವೇ ಅನಾರೋಗ್ಯಕ್ಕೆ ತುತ್ತಾಗುತ್ತಾರೆ. ಕೆಲವರು ವಯೋಸಹಜ ಕಾರಣಗಳಿಂದ ಮೃತಪಟ್ಟಿರುವ ಉದಾಹರಣೆಗಳೂ ಇವೆ. ಆದ್ದರಿಂದ ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಮಾಶಾಸನಕ್ಕೆ ಅರ್ಹತೆ ಪಡೆಯುವ ವಯೋಮಿತಿಯನ್ನು 58ರಿಂದ 40 ವರ್ಷಕ್ಕೆ ಇಳಿಸುವ ಮೂಲಕ ಕಲಾವಿದರನ್ನು ಗೌರವಿಸಿ ಅವರಿಗೆ ಆರ್ಥಿಕ ಭದ್ರತೆ ಒದಗಿಸಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಗುರು ಟ್ರಸ್ಟ್ ಅಧ್ಯಕ್ಷ ಶಿವರಾಜ ತಡಪಳ್ಳಿ ವಹಿಸಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಸಿದ್ರಾಮ ಶಿಂದೆ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಹಿರಿಯ ಕಲಾವಿದ ಹಾಗೂ ಹೋರಾಟಗಾರ ಬಕ್ಕಪ್ಪಾ ದಂಡಿನ್ ಅವರು ಪ್ರೊ. ಬಿ. ಕೃಷ್ಣಪ್ಪ ಅವರ ಜೀವನ ಚರಿತ್ರೆಯನ್ನು ಪರಿಚಯಿಸಿದರು. ಕರ್ನಾಟಕ ಗಡಿ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಸಂಜೀವಕುಮಾರ ಅತಿವಾಳೆ ಹಾಗೂ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೊನಾರೆ ಅವರು ಮಾತನಾಡಿದರು.

ಹಿರಿಯ ಕಲಾವಿದ ಶಂಭುಲಿಂಗ ವಾಲ್ದೊಡ್ಡಿ ಅವರು ವಿವಿಧ ಜನಪದ ಗೀತೆಗಳನ್ನು ಹಾಡುವ ಮೂಲಕ ಕಲಾವಿದರನ್ನು ರಂಜಿಸಿದರು ಹಾಗೂ ಹುರಿದುಂಬಿಸಿದರು.

ಕಾರ್ಯಕ್ರಮದಲ್ಲಿ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಅಂಬೇಡ್ಕರ್) ರಾಜ್ಯ ಸಂಯೋಜಕ ಮಹೇಶ ಗೋರನಾಳಕರ್, ಭೀಮ ಶಕ್ತಿ ಡಿ.ಎಸ್.ಎಸ್. ಜಿಲ್ಲಾಧ್ಯಕ್ಷ ಮುಖೇಶ್ ರಾಯ್, ಕಿರಣ ಬೆಲ್ದಾಳೆ, ದೇವಿದಾಸ ಚಿಮಕೊಡೆ, ರಾಮಣ್ಣ ಅಮಲಾಪೂರ, ಕು. ಸುರೇಖಾ, ಪ್ರಕಾಶ ಡೊಳೆ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದರು.

ಸುಮಾರು 16 ಕಲಾತಂಡಗಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟವು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಕಲಾವಿದರು, ವಿಕಲಚೇತನರು ಹಾಗೂ ಸರ್ಕಾರಿ ಸೇವೆಯಿಂದ ನಿವೃತ್ತರಾದ ಸಿಬ್ಬಂದಿಯನ್ನು ಸನ್ಮಾನಿಸಿ ಗೌರವಿಸಲಾಯಿತು.

ಸಾಂಸ್ಕೃತಿಕ ಕಲಾವಿದರು, ಸಂಘ–ಸಂಸ್ಥೆಗಳ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು ಎಂದು ಟ್ರಸ್ಟ್ ಅಧ್ಯಕ್ಷ ಶಿವರಾಜ ತಡಪಳ್ಳಿ ಹಾಗೂ ಕಾರ್ಯದರ್ಶಿ ಸಂಗೀತಾ ಶಿವರಾಜ ತಡಪಳ್ಳಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ಜಾಗೃತಿ ಸಮಾವೇಶಕ್ಕೆ ಸಚಿವರಿಗೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಇದೇ ಜೂನ್ 19 ರಂದು ನಡೆಯಲಿರುವ ಕನ್ನಡ ಸೇನೆ ಕರ್ನಾಟಕ ವತಿಯಿಂದ 2ನೇ ರಾಜ್ಯಮಟ್ಟದ ಗಡಿನಾಡು ಕನ್ನಡ ಜಾಗೃತಿ ಸಮಾವೇಶಕ್ಕೆ ಮುಖ್ಯ ಅತಿಥಿಯಾಗಿ ಆಗಮಿಸುವಂತೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಹಾಗೂ ಮಾಜಿ ಸಚಿವ ರಹೀಮ್ ಖಾನ್ ಅವರಿಗೆ ಬೆಂಗಳೂರಿನಲ್ಲಿ ಆಹ್ವಾನ ಪತ್ರಿಕೆ ನೀಡಿ ಆಹ್ವಾನಿಸಲಾಯಿತು.

ಈ ಸಂದರ್ಭದಲ್ಲಿ ಸಮಾವೇಶದ ಉದ್ದೇಶ, ಗಡಿನಾಡು ಭಾಗಗಳಲ್ಲಿ ಕನ್ನಡ ಭಾಷೆ, ಸಂಸ್ಕೃತಿ ಹಾಗೂ ಕನ್ನಡಿಗರ ಹಕ್ಕುಗಳ ಸಂರಕ್ಷಣೆ ಕುರಿತು ನಡೆಯಲಿರುವ ಕಾರ್ಯಕ್ರಮಗಳ ಬಗ್ಗೆ ಸಚಿವರಿಗೆ ಮಾಹಿತಿ ನೀಡಲಾಯಿತು ಕಾರ್ಯಕ್ರಮದಲ್ಲಿ ಭಾಗವಹಿಸಲು ಸಕಾರಾತ್ಮಕ ಸ್ಪಂದನೆ ವ್ಯಕ್ತಪಡಿಸಿದರು.

ಗಡಿನಾಡು ಕನ್ನಡ ಜಾಗೃತಿ ಸಮಾವೇಶವು



ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಮತ್ತು ಗಡಿಭಾಗದ ಕನ್ನಡಿಗರ ಸಮಸ್ಯೆಗಳ ಕುರಿತು ಚರ್ಚಿಸಲು ಮಹತ್ವದ ವೇದಿಕೆಯಾಗಿದ್ದು, ರಾಜ್ಯದ ವಿವಿಧ ಭಾಗಗಳಿಂದ ಕನ್ನಡಾಭಿಮಾನಿಗಳು, ಸಂಘಟನೆಗಳ ಪದಾಧಿಕಾರಿಗಳು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಡಾ.ರವಿಸ್ವಾಮಿ ನಿರ್ಣ ರಾಜ್ಯ ಉಪಾಧ್ಯಕ್ಷರು, ಸುಭಾಷ್ ಕೆನ್ನಡೆ ಜಿಲ್ಲಾಧ್ಯಕ್ಷರು, ರಾಜು ಮಂಗಲಪೇಟ್ ಬೀದರ್ ತಾಲೂಕ ಅಧ್ಯಕ್ಷರು, ಸೂರ್ಯಕಾಂತ್ ರಾಂಪುರ, ಉಪಾಧ್ಯಕ್ಷರು ಹಾಗೂ ತುಳಸಿ ಉಪಸ್ಥಿತರಿದ್ದರು.

## ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಯಲ್ಲಿ ಇದೇ 2026ರ ಜೂನ್ 12 ರಂದು ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಪ್ರಮಾಣ ವಚನ ಸ್ವೀಕರಿಸಬೇಕು ಎಂದು ಬೀದರ ಬಾಲಕಾರ್ಮಿಕ ಯೋಜನಾ ಸಂಘ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ತಿಳಿಸಿದ್ದಾರೆ.

ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನಾಚರಣೆ ಅಂಗವಾಗಿ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಅಂದು ತಮ್ಮ ಕಛೇರಿಯಲ್ಲಿ ಹಾಗೂ ತಮ್ಮ ಅಧೀನದಲ್ಲಿ ಬರುವ ಎಲ್ಲಾ ಕಛೇರಿಗಳಲ್ಲಿ ಬೆಳಿಗ್ಗೆ 11 ಗಂಟೆಗೆ ಪ್ರಮಾಣ ವಚನ ಸ್ವೀಕರಿಸಬೇಕು.

ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಪ್ರಮಾಣ ವಚನ ಬೋಧನೆಗೆ ಸೂಚಿಸಿದೆ.

ನಾನು ಸತ್ಯವಾಗಿ, ಪ್ರಾಮಾಣಿಕವಾಗಿ ಹಾಗೂ ಆತ್ಮಸಾಕ್ಷಿಯಾಗಿ ಪ್ರಮಾಣ ಮಾಡುವುದೇನೆಂದರೆ, ನಾನು ವಾಸಿಸುವ ಸುತ್ತಮುತ್ತಲಿನ ಪ್ರದೇಶ ಹಾಗೂ ನಾನು ಕೆಲಸ ಮಾಡುವ ಸ್ಥಳದಲ್ಲಿ ಯಾವುದೇ ಬಾಲಕಾರ್ಮಿಕರು ಕಂಡುಬಂದಲ್ಲಿ ನೇಮಿಸಿಕೊಂಡ ಮಾಲೀಕರು ಹಾಗೂ ಪೋಷಕರಿಗೆ ತಿಳುವಳಿಕೆ ಹೇಳಿ ಮಗುವನ್ನು ಶಾಲೆಗೆ ಸೇರಿಸುತ್ತೇನೆ.

ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ತೊಡಗಿಸಿಕೊಂಡು ತಯಾರಿಸಲ್ಪಟ್ಟ ಯಾವುದೇ ವಸ್ತುವನ್ನು ಉಪಯೋಗಿಸುವುದಿಲ್ಲ ಮತ್ತು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಸೇವೆಯನ್ನು ಪಡೆಯುವುದಿಲ್ಲವೆಂದು "ವಿಶ್ವ ಬಾಲಕಾರ್ಮಿಕ ಪದ್ದತಿ ವಿರೋಧಿ ದಿನ"ವಾದ ಇಂದು ಪಮಾಣ ಮಾಡುತ್ತೇನೆ. ಈ ಪ್ರಮಾಣ ವಚನ ಸ್ವೀಕರಿಸಬೇಕೆಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಗೀತ ಮನಸ್ಸಿಗೆ ನೆಮ್ಮದಿ ನೀಡುವ ಶಕ್ತಿ: ರೂಪಾ ಪಾಟೀಲ್

• ಮಲ್ಲಮ್ಮ ನುಡಿ ವಾರ್ತೆ ಬೀದರ್

ನಗರದ ಕಾಳಿಕಾ ದೇವಿ ಮಂದಿರದಲ್ಲಿ ರೂಪಾ ಕಲೆ ಸಾಹಿತ್ಯ ಮತ್ತು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಮಂಗಳವಾರ ಸಂಗೀತ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ವಿವಿಧ ಕಲಾವಿದರ ಗಾಯನ ಹಾಗೂ ವಾದ್ಯ ಸಂಗೀತದ ಮೂಲಕ ಸಂಗೀತಾಸಕ್ತರಿಗೆ ಮನರಂಜನೆ ನೀಡಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಟ್ರಸ್ಟ್ ಸಂಸ್ಥಾಪಕಿ ರೂಪಾ ಪಾಟೀಲ್, ಸಂಗೀತವು ಪ್ರತಿಯೊಬ್ಬರ ಮನಸ್ಸು ಮತ್ತು ಹೃದಯವನ್ನು ಪ್ರಫುಲ್ಲಗೊಳಿಸುವ ಶಕ್ತಿಯನ್ನು ಹೊಂದಿದೆ ಎಂದು ಹೇಳಿದರು. ಯೋಗದಿಂದ ಆರೋಗ್ಯ ಸುಧಾರಿಸುವಂತೆ ಸಂಗೀತವೂ ಮಾನಸಿಕ ಹಾಗೂ ದೈಹಿಕ ಆರೋಗ್ಯ ವೃದ್ಧಿಗೆ ಸಹಕಾರಿಯಾಗಿದೆ. ಸಂಗೀತವು ಸಾಗರದ ಅಲೆಗಳಂತೆ ಮನಸ್ಸಿಗೆ ಉಲ್ಲಾಸ ನೀಡುತ್ತದೆ. ಪ್ರತಿಯೊಬ್ಬರೂ ಸಂಗೀತವನ್ನು ತಮ್ಮ ಜೀವನದ ಒಂದು ಭಾಗವಾಗಿಸಿಕೊಳ್ಳಬೇಕು ಹಾಗೂ ವಾರಕ್ಕೊಮ್ಮೆ ಭಜನೆ ಅಥವಾ ಸಂಗೀತ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಎಲೆಮರೆಯ ಕಾಯಿಯಂತೆ ಇರುವ ಪ್ರತಿಭಾವಂತ ಕಲಾವಿದರನ್ನು ಗುರುತಿಸಿ ಅವರಿಗೆ ವೇದಿಕೆ ಒದಗಿಸುವುದು ಹಾಗೂ ಬೆಳೆಯಲು



ಪ್ರೋತ್ಸಾಹಿಸುವುದೇ ಟ್ರಸ್ಟ್‌ನ ಮುಖ್ಯ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ವಿಲಾಸ ಪಾಟೀಲ್, ಇಂತಹ ಸಂಗೀತ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದು ಅಭಿಪ್ರಾಯಪಟ್ಟರು. ಸಮಾಜಸೇವಾ ಮನೋಭಾವದೊಂದಿಗೆ ಕಲಾವಿದರಿಗೆ ಪ್ರೋತ್ಸಾಹ ನೀಡುತ್ತಿರುವ ರೂಪಾ ಪಾಟೀಲ್ ಅವರ ಕಾರ್ಯ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಇನ್ನೋರ್ವ ಅತಿಥಿ ವಿಠಲ್‌ರಾವ್ ಪಾಂಚಾಳ ಮಾತನಾಡಿ, ಸಂಗೀತ ಎಲ್ಲರಿಗೂ ಇಷ್ಟವಾದ ಕಲೆಯಾಗಿದೆ. ಆದ್ದರಿಂದ ಇಂತಹ ಕಾರ್ಯಕ್ರಮಗಳ ಆಯೋಜನೆ ಕಲಾ ಪ್ರೋತ್ಸಾಹಕ್ಕೆ ಪೂರಕವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಳಿಕಾ ದೇವಿ ಮಂದಿರದ ಉಪಾಧ್ಯಕ್ಷ ಈಶ್ವರ ವಿಶ್ವಕರ್ಮ ವಹಿಸಿದ್ದರು. ಕಲಾವಿದರ ಸುಮಧುರ ಗಾಯನ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ತಂದಿದ್ದು, ನೆರೆದಿದ್ದವರಿಗೆ ಸಂತಸ ಉಂಟುಮಾಡಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಗೋರಕ್‌ನಾಥ ವಿಶ್ವಕರ್ಮ ಹಾಗೂ ಸರಿತಾ ಪಾಂಚಾಳ ಅವರು ಶಾಸ್ತ್ರೀಯ ಸಂಗೀತ ಕಚೇರಿ ನಡೆಸಿಕೊಟ್ಟರು. ರಾಜು ಬಂಪಳ್ಳಿ ತಬಲಾ ಸಾಥ್ ನೀಡಿದರೆ, ಮನೋಜ್ ಭೋಸ್ಲೆ ಹಾರ್ಮೋನಿಯಂ ವಾದನದ ಮೂಲಕ ಸಹಕರಿಸಿದರು.

ಕಾರ್ಯಕ್ರಮವನ್ನು ವಿಜಯಕುಮಾರ್ ಪಾಂಚಾಳ ಅಚ್ಚುಕಟ್ಟಾಗಿ ನಿರೂಪಿಸಿದರು. ಸಿದ್ದು ಸಾಯಿ ನಾನಕೇರ್ ಸ್ವಾಗತಿಸಿದರು ಹಾಗೂ ಸಿಂಚನಾ ಪಾಟೀಲ್ ವಂದನಾರ್ಪಣೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಟ್ರಸ್ಟ್ ಕಾರ್ಯದರ್ಶಿ ಗೌರೀಶ್ ಪಾಟೀಲ್, ಕಾಳಿಕಾ ದೇವಿ ಮಂದಿರದ ಅರ್ಚಕರಾದ ಹನುಮಂತರಾವ್, ಬಕ್ಕಪ್ಪಾ, ನಾಗನಾಥ ಸುತಾರ, ಮಹೇಶ್, ಶಿವಾನಂದ, ಬಾಬುರಾವ್, ದಯಾನಂದ, ಸೂರ್ಯಕಾಂತ್, ಚಿದಾನಂದ, ಸೂರಣ್ಣ ವಿಶ್ವಕರ್ಮ, ರಮೇಶ್ ಸೋನಾರ್, ವಿಜಯಲಕ್ಷ್ಮಿ ಸೋನಾರ್, ಪ್ರದೀಪ್ ಪೋಲ, ಅಶೋಕ್ ಪಾಂಚಾಳ, ಸುಮನಬಾಯಿ ಪಾಂಚಾಳ, ಕಲಾವತಿ ಪಾಟೀಲ್, ವಿಜಯಲಕ್ಷ್ಮಿ ವಿಲಾಸ ಪಾಟೀಲ್ ಸೇರಿದಂತೆ ಅನೇಕ ಗಣ್ಯರು ಹಾಗೂ ಕಲಾಭಿಮಾನಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಂಗವಾಗಿ ವಿಜಯಲಕ್ಷ್ಮಿ ಪೋಲ ಅವರು ಪ್ರಸಾದದ ವ್ಯವಸ್ಥೆ ಮಾಡಿದ್ದರು. ಸಂಗೀತ, ಭಕ್ತಿ ಹಾಗೂ ಸಾಂಸ್ಕೃತಿಕ ಸೊಬಗಿನಿಂದ ಕೂಡಿದ ಈ ಕಾರ್ಯಕ್ರಮ ಕಲಾಭಿಮಾನಿಗಳಿಗೆ ಒಂದು ಸುಂದರ ಸಂಗೀತ ಸಂಜೆಯ ಅನುಭವ ನೀಡಿತು.

# ರಹೀಂ ಖಾನ್‌ಗೆ ಸಚಿವ ಸ್ಥಾನ ನೀಡುವಂತೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಉತ್ತರ ವಿಧಾನಸಭಾ ಕ್ಷೇತ್ರದ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಶಾಸಕ ರಹೀಂ ಖಾನ್ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡುವಂತೆ ಒತ್ತಾಯಿಸಿ ಬೀದರ ಉತ್ತರ ಕ್ಷೇತ್ರದ ಮಾಳೆಗಾಂವ ಹಾಗೂ ಜನವಾಡಾ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಕಾಂಗ್ರೆಸ್ ಕಾರ್ಯಕರ್ತರು ಬುಧವಾರ ಬೀದರ ನಗರದ ಕಾಂಗ್ರೆಸ್ ಕಚೇರಿಯಲ್ಲಿ ಮನವಿ ಸಲ್ಲಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷರ ಮೂಲಕ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹಾಗೂ ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ರವಾನಿಸಲಾಯಿತು. ಮನವಿಯಲ್ಲಿ ಬೀದರ ಜಿಲ್ಲೆಯ ಅಭಿವೃದ್ಧಿ, ಅಲ್ಪಸಂಖ್ಯಾತರ ಪ್ರತಿನಿಧಿತ್ವ ಹಾಗೂ ಕಾಂಗ್ರೆಸ್ ಪಕ್ಷದ ಸಂಘಟನೆಗೆ ರಹೀಂ ಖಾನ್ ಅವರ ಕೊಡುಗೆಯನ್ನು ಪರಿಗಣಿಸಿ ಸಚಿವ ಸ್ಥಾನ ನೀಡಬೇಕೆಂದು ಆಗ್ರಹಿಸಲಾಗಿದೆ.

ಕಾರ್ಯಕರ್ತರು ಮಾತನಾಡಿ, ರಹೀಂ ಖಾನ್ ಅವರು ಹಲವು ದಶಕಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ನಾಯಕರಾಗಿ ಕಾರ್ಯನಿರ್ವಹಿಸುತ್ತಿದ್ದು, ಬೀದರ ಜಿಲ್ಲೆಯ ಜನರ ಸಮಸ್ಯೆಗಳನ್ನು ವಿಧಾನಸಭೆಯಲ್ಲಿ ಸಮರ್ಥವಾಗಿ ಪ್ರಸ್ತಾಪಿಸುತ್ತಿದ್ದಾರೆ. ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ, ರೈತರ ಸಮಸ್ಯೆಗಳ ಪರಿಹಾರ,



ಯುವಕರಿಗೆ ಉದ್ಯೋಗಾವಕಾಶ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ಅವರು ನಿರಂತರವಾಗಿ ಹೋರಾಟ ನಡೆಸಿದ್ದಾರೆ ಎಂದು ತಿಳಿಸಿದರು.

ಜಿಲ್ಲೆಯ ರಾಜಕೀಯ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ಅಪಾರ ಅನುಭವ ಹೊಂದಿರುವ ರಹೀಂ ಖಾನ್ ಅವರಿಗೆ ಸಚಿವ ಸ್ಥಾನ ನೀಡುವುದರಿಂದ ಬೀದರ ಜಿಲ್ಲೆಯ ಅಭಿವೃದ್ಧಿಗೆ ಮತ್ತಷ್ಟು ವೇಗ ಸಿಗಲಿದ್ದು, ಉತ್ತರ ಕರ್ನಾಟಕ ಭಾಗದ ಜನರ ಆಶೋತ್ತರಗಳಿಗೆ ಸ್ಪಂದಿಸಿದಂತಾಗುತ್ತದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ನಂತರ ರಾಜ್ಯದ ವಿವಿಧ ಜಿಲ್ಲೆಗಳಿಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ನೀಡಲಾಗಿದೆ. ಆದರೆ ಬೀದರ ಜಿಲ್ಲೆಗೆ ಸಮರ್ಪಕ ಪ್ರಾತಿನಿಧ್ಯ ದೊರೆತಿಲ್ಲ ಎಂಬ ಅಭಿಪ್ರಾಯ ವ್ಯಕ್ತಪಡಿಸಿದ ಕಾರ್ಯಕರ್ತರು, ಮುಂಬರುವ ಸಚಿವ ಸಂಪುಟ ವಿಸ್ತರಣೆಯಲ್ಲಿ ರಹೀಂ ಖಾನ್ ಅವರಿಗೆ ಅವಕಾಶ ಕಲ್ಪಿಸುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾಜಿ ಎಪಿಎಂಸಿ ಅಧ್ಯಕ್ಷ ಸೂರ್ಯಕಾಂತ ಪಾಟೀಲ ಚಿಮಕೋಡ ಮಾತನಾಡಿ, "ರಹೀಂ ಖಾನ್ ಅವರು ಪಕ್ಷ ಸಂಘಟನೆಗಾಗಿ ಮತ್ತು ಜನಸೇವೆಗೆ ತಮ್ಮ ಜೀವನವನ್ನು ಮುಡಿಪಾಗಿಟ್ಟಿದ್ದಾರೆ. ಅವರ ಅನುಭವ ಮತ್ತು ನಾಯಕತ್ವವನ್ನು ರಾಜ್ಯ ಸರ್ಕಾರ ಸಚಿವ ಸಂಪುಟದಲ್ಲಿ ಬಳಸಿಕೊಳ್ಳಬೇಕು. ಇದರಿಂದ ಬೀದರ ಜಿಲ್ಲೆಗೆ ನ್ಯಾಯ ದೊರೆಯಲಿದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಿತೇಶ್ ಅಲಿಯಂಬರ, ಡಾ. ಕಾಮಶೆಟ್ಟಿ ಅಲಿಯಂಬರ, ರಾಜಕುಮಾರ ವೈಜಿನಾಥ ಪಾಟೀಲ, ಸಂಜು ಸಾಗರ ಚಿಮಕೋಡ, ಬಸವರಾಜ ಬುಯ್ಯಾ, ಸಂಜುಕುಮಾರ ಮರಖಲ್, ದೀಪಕ ಮರಖಲ್, ಸಂಪತ್ ಮಾಳೆಗಾಂವ, ನೀಲಕಂಠರಾವ ದೇಶಮುಖ ಯರನಳ್ಳಿ, ಶ್ರೀನಿವಾಸರೆಡ್ಡಿ ಚಿಲ್ಲರ್ಗಿ, ಜೈರಾಜ ಮಹಮೂದ್ ಚಿಲ್ಲರ್ಗಿ, ಪಂಡಿತ ವಿಳಾಸಪೂರ, ಧನರಾಜ ಚಾಂಬೋಳ, ಪರ್ವೇಜ್ ಪಟೇಲ್, ಮಾರುತೆಪ್ಪ ಕಂಗಟಿ, ದತ್ತು ನವಲಸಪೂರ, ಸಂಜು ಗಾದಗಿ, ಶಿವಕುಮಾರ ಒಡೆಯರ್ ಹಳೆಂಬುರ್, ವಿಜಯಕುಮಾರ ವಿಳಾಸಪೂರ, ಶಿವರಾಜ, ಗೋರಖ ರಾಜನಾಳ, ಅರ್ಜುನ ನಂದಗಾಂವ, ಅಶೋಕ ಚಿಮಕೋಡ, ಸಂತೋಷ ಚಿಮಕೋಡ, ಪರಮೇಶ ಬಂಪಳ್ಳಿ ಸೇರಿದಂತೆ ಅನೇಕ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪರಿಸರ ಗೀತೆ ಸ್ಪರ್ಧೆ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಮಕ್ಕಳಲ್ಲಿ ಅಡಗಿರುವ ಪ್ರತಿಭೆಯು ಹೊರಹೊಮ್ಮುವ ಪರಿಸರಗೀತೆಯಂತಹ ಸ್ಪರ್ಧೆಯು ಸಹಕಾರಿಯಾಗುತ್ತದೆ. ಜಾಗತಿಕ ತಾಪಮಾನ ಏರಿಕೆಯನ್ನು ತಡೆಗಟ್ಟಲು ಪರಿಸರ ಪೂರಕ ಚಟುವಟಿಕೆಗಳನ್ನು ನಾವೆಲ್ಲ ವ್ಯವಸ್ಥಿತವಾಗಿ ನಿರ್ವಹಿಸಬೇಕು ಎಂದು ಜೈಹಿಂದ್ ಹೈಸ್ಕೂಲ್ ಮುಖ್ಯಾಧ್ಯಾಪಕ ಪ್ರಭಾಕರ ಬಂಟ ಹೇಳಿದರು.


ಅರಣ್ಯ ಇಲಾಖೆ ಅಂಕೋಲಾ, ಸಂಗಮ ಸೇವಾ ಸಂಸ್ಥೆ ಅಂಕೋಲಾ ಹಾಗೂ ಜೈಹಿಂದ್ ಹೈಸ್ಕೂಲ್ ಇವರ ಆಶ್ರಯದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಏರ್ಪಡಿಸಲಾದ ಪರಿಸರ ಗೀತೆ ಸ್ಪರ್ಧೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ನಿರ್ಣಾಯಕರಾದ ಸಂಗೀತ ಶಿಕ್ಷಕಿ ಪ್ರವೀಣಾ ದೊಡ್ಮನಿ, ವಿನಯ ಪ್ರಭು ಉಪಸ್ಥಿತರಿದ್ದರು. ಸಂಗಮ ಸೇವಾ ಸಂಸ್ಥೆಯ ಅಧ್ಯಕ್ಷ ರವೀಂದ್ರ ಎನ್. ಶೆಟ್ಟಿ ಸ್ವಾಗತಿಸಿದರು. ತಿಮ್ಮಣ್ಣ ಭಟ್ ಬಿ. ನಿರ್ವಹಿಸಿದರು. ಜಯಾ ಗೌಡ ವಂದಿಸಿದರು.

ಬಹುಮಾನ: ಪರಿಸರ ಗೀತೆ ಸ್ಪರ್ಧೆಯಲ್ಲಿ ಅರ್ಪಿತಾ ಭಟ್ ಪ್ರಥಮ, ಆರ್ಯ ಶ್ರೀನಿವಾಸ ಶೆಟ್ಟಿ ದ್ವಿತೀಯ, ಅಸಿನಾ ಎಂ. ಖಾರ್ವಿ ತೃತೀಯ, ನಿತ್ಯಪ್ರಿಯ ಶ್ರೀನಿವಾಸ, ಮಾನ್ವಿ ರಾಮನಾಥ ಸಮಧಾನಕರ ಬಹುಮಾನ ಪಡೆದರು. ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ನೀಡಲಾಯಿತು.

## ಮೋದಿ ಅವರ ದೀರ್ಘಾಯುಷ್ಯಕ್ಕಾಗಿ ಬಿಜೆಪಿ ಕಾರ್ಯಕರ್ತರಿಂದ ವಿಶೇಷ ಪೂಜೆ


• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಪ್ರಧಾನಮಂತ್ರಿನರೇಂದ್ರಮೋದಿಅವರುದೇಶದ ಸೇವೆಯಲ್ಲಿ ಹೊಸ ಮೈಲಿಗಲ್ಲು ಸಾಧಿಸಿರುವ ಹಿನ್ನೆಲೆಯಲ್ಲಿ ಅವರ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ರಾಷ್ಟ್ರಸೇವೆಯ ಯಶಸ್ಸಿಗಾಗಿ ಭಾರತೀಯ ಜನತಾ ಪಕ್ಷದ ಮಂಡಲದ ವತಿಯಿಂದ ಭಾಲ್ಕೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ವಿವಿಧ ಸಾಮಾಜಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು.ಮಾಜಿ ಶಾಸಕ ಪ್ರಕಾಶ ಖಂಡ್ರೆ ಹಾಗೂ ಮಂಡಲ ಅಧ್ಯಕ್ಷ ವೀರಣ್ಣ ಕಾರಬಾರಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಿವಲಿಂಗಕ್ಕೆ ವಿಶೇಷ ಅಭಿಷೇಕ ಮತ್ತು ಪೂಜೆ ಸಲ್ಲಿಸಿ ದೇಶದ ಪ್ರಗತಿ ಹಾಗೂ ಪ್ರಧಾನಮಂತ್ರಿಯವರ ಆರೋಗ್ಯಕ್ಕಾಗಿ ಪ್ರಾರ್ಥನೆ ಸಲ್ಲಿಸಲಾಯಿತು. ಬಳಿಕ ಕಾರ್ಯಕರ್ತರಿಗೆ ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಲಾಯಿತು. ಇದೇ ಸಂದರ್ಭದಲ್ಲಿ ದೇವಸ್ಥಾನದ ಆವರಣದಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳುವ ಮೂಲಕ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಪರಿಸರ ಸಂರಕ್ಷಣೆಯ ಸಂದೇಶ ಸಾರುವ ಉದ್ದೇಶದಿಂದ 'ಏಕ್ ಪೇಡ್ ಮಾಂಕೆನಾಮ್' ಅಭಿಯಾನದಡಿ



ವಿವಿಧ ಜಾತಿಯ ಗಿಡಗಳನ್ನು ನೆಟ್ಟು ಅವುಗಳ ಪೋಷಣೆಯ ಸಂಕಲ್ಪ ಮಾಡಲಾಯಿತು.ಈ ವೇಳೆ ಮಾತನಾಡಿದ ಮಾಜಿ ಶಾಸಕ ಪ್ರಕಾಶ ಖಂಡ್ರೆ, ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತ ಜಾಗತಿಕ ಮಟ್ಟದಲ್ಲಿ ತನ್ನ ಪ್ರಭಾವವನ್ನು ಹೆಚ್ಚಿಸಿಕೊಂಡಿದ್ದು, ಅಭಿವೃದ್ಧಿಯ ಹೊಸ ಅಧ್ಯಾಯಗಳನ್ನು ಬರೆಯುತ್ತಿದೆ. ದೇಶದ ಸಮಗ್ರ ಅಭಿವೃದ್ಧಿಗೆ ಅವರ ಕೊಡುಗೆ ಅನನ್ಯವಾಗಿದ್ದು, ಅವರು ಇನ್ನಷ್ಟು ಕಾಲ ರಾಷ್ಟ್ರಸೇವೆ ಮಾಡಲು ದೇವರು ಶಕ್ತಿ ಮತ್ತು ಆರೋಗ್ಯ ನೀಡಲಿ ಎಂದು ಹಾರೈಸಿದರು.ಮಂಡಲ ಅಧ್ಯಕ್ಷ ವೀರಣ್ಣ ಕಾರಬಾರಿ ಮಾತನಾಡಿ, ಮೋದಿ ಅವರ ದೂರದೃಷ್ಟಿಯ ನಾಯಕತ್ವ ದೇಶವನ್ನು ಆತ್ಮವಿಶ್ವಾಸ ಮತ್ತು ಸ್ವಾಭಿಮಾನದ ಹಾದಿಯಲ್ಲಿ ಮುನ್ನಡೆಸಿದೆ. ವಿಕಸಿತ ಭಾರತದ ಕನಸು ಸಾಕಾರಗೊಳ್ಳಲು ಅವರ ನಾಯಕತ್ವ ಮತ್ತಷ್ಟು ಬಲಗೊಳ್ಳಲಿ ಎಂದು ಪ್ರಾರ್ಥಿಸಿದರು. ಕಾರ್ಯಕ್ರಮದಲ್ಲಿ ಶಿವರಾಜ ಗಂದಗೆ, ಚನ್ನಬಸವಣ್ಣ ಬಳತೆ, ಗೋವಿಂದರಾವ್ ಬಿರಾದಾರ್, ಕಿಶನರಾವ್ ಪಾಟೀಲ್, ಯಾದವರಾವ್ ಕನ್ಸೆ, ಜೈಭೀಮ್ ಬಂಧು, ವೆಂಕಟರಾವ್ ಲಾಳೆ, ಚನ್ನಬಸವ ಬಳತೆ, ಬಾಬುರಾವ್ ಧೂಪೆ, ಸಂಜೀವ್ ಸಿಂಧೆ, ದಿಲೀಪ್ ತೇಲಂಗ್, ಸಂಗಮೇಶ ಕಾರಾಮುಂಗೆ, ಪಾಂಡುರಂಗ ಕನ್ಸೆ, ಸಿದ್ದು ಕಾಡೋದೆ, ಚಂದ್ರಕಾಂತ ಬಿಗೆ, ವೈಶಾಲಿ ಬಿರಾದಾರ್, ಅರುಣಾ ಬಿರಾದಾರ್, ಪ್ರಿಯಾ ದೇಶಮುಖೆ, ಡಾ. ಜಗದೀಶ ಭೂರೆ, ನಾಗನಾಥ ಹುಣಜೆ, ಮನ್ಮಥ ಸ್ವಾಮಿ, ಓಂಕಾರ ಶಾರದಾ, ಸಂತೋಷ ಸೂರ್ಯವಂಶಿ, ಶಿವಕುಮಾರ ಮಲ್ಲಾಸುರೆ, ರಾಜಕುಮಾರ ಸೂರ್ಯವಂಶಿ ಸೇರಿದಂತೆ ಪಕ್ಷದ ಮುಖಂಡರು, ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು. ರೇವಣಸಿದ್ದ ಜಾಡರ್ ವಂದಿಸಿದರು.

# ಮೂರು ವರ್ಷದಿಂದ ಬತ್ತಿದ್ದ ಕೆರೆಗೆ ಜೀವಕಳೆ



> ಗ್ಯಾರೆಂಟಿಯೋಜನೆಗಳಿಂದ ರಾಜ್ಯದಲ್ಲಿ ಅನುದಾನದ ಕೊರತೆ ಉಂಟಾಗಿದ್ದು, 224 ಶಾಸಕರಿಗೆ ಅನುದಾನ ಬಾರದ ಪರಿಸ್ಥಿತಿ ಉಂಟಾಗಿದೆ. ಕಾಂಗ್ರೆಸ್‌ನಿಂದ 5-6 ಬಾರಿ ಗೆದ್ದಿರುವ ಶಾಸಕರು ಕೂಡ ಅನುದಾನ ಬಿಡುಗಡೆ ಆಗದ ಬಗ್ಗೆ ಬೇಸರ ಹೊಂದಿದ್ದಾರೆ. ಆದರೆ ಇದೀಗ ಹೊಸ ಸರ್ಕಾರ ರಚನೆಯಾಗಿದ್ದು, ಮುಖ್ಯಮಂತ್ರಿಗಳು ಸೇರಿದಂತೆ ಎಲ್ಲಾ ಸಚಿವರನ್ನು ಮತ್ತೊಮ್ಮೆ ಭೇಟಿಯಾಗಿ ಕ್ಷೇತ್ರದ ಅಭಿವೃದ್ಧಿಗಾಗಿ ಅನುದಾನ ನೀಡುವಂತೆ ಮನವಿ ಮಾಡುತ್ತೇನೆ.
>
> ಜಿ.ಡಿ. ಹರೀಶ್ ಗೌಡ, ಶಾಸಕ, ಹುಣಸೂರು.

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಮೂರು ವರ್ಷಗಳಿಂದ ಮಳೆಗಾಲ ಬಂದರೂ ನೀರು ಕಾಣದೆ ಬತ್ತಿ ನಿಂತಿದ್ದ ಸೋಮನಹಳ್ಳಿ ಹಾಗೂ ಮರದೂರು ಭಾಗದ ಕೆರೆಗಳು ಮತ್ತೆ ಜೀವ ಪಡೆಯುವ ಹಂತಕ್ಕೆ ಬಂದಿವೆ. ನೀರಿಗಾಗಿ ಪರದಾಡುತ್ತಿದ್ದ ಗ್ರಾಮಸ್ಥರ ಬಹುಕಾಲದ ಬೇಡಿಕೆಗೆ ಸ್ಪಂದಿಸಿದ ಶಾಸಕ ಜಿ.ಡಿ. ಹರೀಶ್ ಗೌಡ, 3 ಕೋಟಿ ವೆಚ್ಚದ ಪೈಪ್‌ಲೈನ್ ಕಾಮಗಾರಿಗೆ ಚಾಲನೆ ನೀಡುವ ಮೂಲಕ ಕೆರೆಗಳಿಗೆ ನೀರು ಹರಿಸುವ ಮಹತ್ವದ ಹೆಜ್ಜೆ ಇಟ್ಟಿದ್ದಾರೆ.

ಕೆರೆಗಳಲ್ಲಿ ನೀರು ಇಲ್ಲದ ಪರಿಣಾಮ ಈ ಭಾಗದ ಕೃಷಿ ಚಟುವಟಿಕೆಗಳು ಸಂಪೂರ್ಣ ಕುಂಠಿತಗೊಂಡಿದ್ದವು. ಅಂತರ್ಜಲಮಟ್ಟ ಕುಸಿದ ಪರಿಣಾಮ ರೈತರು, ಗ್ರಾಮಸ್ಥರು ಸಂಕಷ್ಟ ಅನುಭವಿಸುತ್ತಿದ್ದರು. ಈ ಸಂದರ್ಭದಲ್ಲಿ ನೀರು ತುಂಬಿಸುವ ಕಾಮಗಾರಿಗೆ ಚಾಲನೆ ದೊರೆತಿರುವುದು ಈ ಭಾಗದ ಜನರಲ್ಲಿ ಹೊಸ ಆಶಾಭಾವನೆ ಮೂಡಿಸಿದೆ. ಸೋಮನಹಳ್ಳಿ ಸೇರಿದಂತೆ ನಾಲ್ಕು ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಈ ಹಿಂದೆಯೇ ರೂಪಿಸಲಾಗಿತ್ತು. ಆದರೆ ಮೊದಲು ಅಳವಡಿಸಲಾಗಿದ್ದ ಪೈಪ್‌ಲೈನ್ ಪದೇ ಪದೆ ಹಾಳಾಗುತ್ತಿದ್ದ ಕಾರಣ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲು ಆಗಿರಲಿಲ್ಲ. ಪರಿಣಾಮವಾಗಿ ಕಳೆದ ಮೂರು ವರ್ಷಗಳಿಂದ ಕೆರೆಗಳು ನೀರಿಲ್ಲದೆ ಬತ್ತಿ ನಿಂತಿದ್ದವು.

ಈ ನಡುವೆ ಸಮಸ್ಯೆಯ ಗಂಭೀರತೆಯನ್ನು ಅರಿತ ಜಿ.ಡಿ. ಹರೀಶ್ ಗೌಡ ಅವರು ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿ, ಶಾಶ್ವತ ಪರಿಹಾರಕ್ಕೆ ಮುಂದಾದರು. ಸುಮಾರು 2.5 ಕಿಲೋಮೀಟರ್ ಉದ್ದದ ಎಂಎಸ್ ಪೈಪ್ ಅಳವಡಿಕೆಗೆ ಪ್ರಸ್ತಾವನೆ ಸಲ್ಲಿಸಿ ಸರ್ಕಾರದಿಂದ 3 ಕೋಟಿ ರೂ. ಅನುದಾನ ಮಂಜೂರು ಮಾಡಿಸಿಕೊಂಡರು. ಇದೀಗ ಕಾಮಗಾರಿ ಆರಂಭವಾಗಿದ್ದು, ಕಾಮಗಾರಿ ಪೂರ್ಣಗೊಂಡ ಬಳಿಕ ಕೆರೆಗಳಿಗೆ ನಿರಂತರವಾಗಿ ನೀರು ಹರಿಸುವ ವ್ಯವಸ್ಥೆ ಕಲ್ಪಿಸಲಾಗುತ್ತದೆ.

ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಜಿ.ಡಿ. ಹರೀಶ್ ಗೌಡ, ಕೆರೆಗಳು ತುಂಬಿದರೆ ರೈತರ ಬದುಕು ಹಸನಾಗುತ್ತದೆ. ಸುತ್ತಮುತ್ತಲಿನ ಹಳ್ಳಿಗಳ ಜಲಮಟ್ಟ ಹೆಚ್ಚಾಗುತ್ತದೆ. ಕೆರೆಗಳಿಗೆ ನೀರು ತುಂಬಿಸುವ ಕಾರ್ಯ ಆರಂಭವಾಗಿರುವುದರಿಂದ ಗ್ರಾಮಸ್ಥರಲ್ಲಿ ಸಂತಸ ಮನೆ ಮಾಡಿದೆ. ಹಲವು ವರ್ಷಗಳ ನಿರೀಕ್ಷೆ ಸಾಕಾರಗೊಳ್ಳುತ್ತಿರುವುದರಿಂದ ಈ ಭಾಗದ ರೈತರು, ಗ್ರಾಮಸ್ಥರಿಗೆ ಅನುಕೂಲವಾಗಲಿದೆ. ಕೆರೆಗಳು ಕೇವಲ ನೀರಿನ ಸಂಗ್ರಹಣಾ ತಾಣಗಳಲ್ಲ, ಗ್ರಾಮೀಣ ಬದುಕಿನ ಜೀವನಾಡಿಗಳಾಗಿವೆ. ಅಂತಹ ಜೀವನಾಡಿಗಳಿಗೆ ಮತ್ತೆ ನೀರು ಹರಿಸುವ ಪ್ರಯತ್ನಕ್ಕೆ ಚಾಲನೆ ದೊರೆತಿರುವುದು ಸೋಮನಹಳ್ಳಿ ಮತ್ತು ಮರದೂರು ಭಾಗದ ಜನರಿಗೆ ಹೊಸ ಭರವಸೆಯ ಬೆಳಕಾಗಿ ಪರಿಣಮಿಸಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಇಇ ರೇಣುಕಾಸ್ವಾಮಿ, ಪಿಡಿಒ ಮಹದೇವಸ್ವಾಮಿ, ಮುಖಂಡರಾದ ಕೆಂಗಯ್ಯ, ಶಿವಕುಮಾರ್, ಗೋವಿಂದೇಗೌಡ, ದಿನೇಶ್, ಗವಿನಾಯಕ, ರಾಜೇಶ್, ಲಿಂಗೇಗೌಡ ಇತರರು ಹಾಜರಿದ್ದರು.

### ವಿವಿಧ ಕಾಮಗಾರಿಗಳಿಗೆ ಚಾಲನೆ

ತಾಲೂಕಿನ ವಿವಿಧೆಡೆ ಹಲವು ಕಾಮಗಾರಿಗಳಿಗೆ ಶಾಸಕ ಜಿ.ಡಿ. ಹರೀಶ್ ಗೌಡ ಅವರು ಚಾಲನೆ ನೀಡಿದರು. ಪ್ರಮುಖವಾಗಿ ಬನ್ನಿಕುಪ್ಪೆ ಅಂಗನವಾಡಿ ಕೇಂದ್ರ, ಡ್ಡೇಗೌಡನ ಕೊಪ್ಪಲಿನ ಮುಖ್ಯರಸ್ತೆಯ ಚರಂಡಿ ನಿರ್ಮಾಣಕ್ಕೆ 25 ಲಕ್ಷ ಹಾಗೂ ಇದೇ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ 15 ಲಕ್ಷ ರೂ. ಮರಳಯ್ಯನಕೊಪ್ಪಲಿನ ಸಿಸಿ ರಸ್ತೆಗೆ 30 ಲಕ್ಷ, ಮಾದಳ್ಳಿ ಸಿಸಿ ರಸ್ತೆಗೆ 25 ಲಕ್ಷ, ಮೂಡಲಕೊಪ್ಪಲು ಸಿಸಿ ರಸ್ತೆಗೆ 30 ಲಕ್ಷ ಹಾಗೂ ಒಕ್ಕಲಿಗರ ಸಮುದಾಯ ಭವನಕ್ಕೆ --- ಲಕ್ಷ ರೂ. ಅನುದಾನ ಮಂಜೂರು ಮಾಡಿಸಿ, ಸದರಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕ್ಷೇತ್ರದ ಅಭಿವೃದ್ಧಿ ಮಾಡುವುದಷ್ಟೇ ನನಗೆ ಮುಖ್ಯವಾಗಿದ್ದು, ಇದರಲ್ಲಿ ರಾಜಕೀಯ ಮಾಡುವ ಯಾವ ಅಗತ್ಯವೂ ನನಗಿಲ್ಲ ಮತ್ತು ಅದನ್ನು ಮಾಡುವುದೂ ಇಲ್ಲ. ಹಲವು ವರ್ಷಗಳಿಂದ ಕ್ಷೇತ್ರದಲ್ಲಿ ಸಾಕಷ್ಟು ಕೆಲಸಗಳು ಆಗಬೇಕಿದೆ.ಎಂದರು.

## ಶಿಕ್ಷಕರ ಹಿತರಕ್ಷಣೆಗೆ ಸಂಘಗಳು ಹೆಚ್ಚು ಚುರುಕಾಗಬೇಕು



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಶಿಕ್ಷಕರ ಸಂಘಗಳು ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವ ಜವಾಬ್ದಾರಿಯುತ ವೇದಿಕೆಗಳಾಗಿ ಕಾರ್ಯನಿರ್ವಹಿಸಬೇಕಿದ್ದು, ಶಿಕ್ಷಕರ ಹಕ್ಕುಗಳು ಮತ್ತು ಕಲ್ಯಾಣಕ್ಕಾಗಿ ನಿರಂತರ ಹೋರಾಟ ನಡೆಸಬೇಕು ಎಂದು ಪತ್ರಾಂಕಿತ ವ್ಯವಸ್ಥಾಪಕ ಶಿವಕುಮಾರ ಪುಲಾರಿ ಹೇಳಿದರು.

ಪಟ್ಟಣದ ಬಿಆರ್‌ಸಿ ಕಚೇರಿಯಲ್ಲಿ ಪ್ರೌಢಶಾಲಾ ಶಿಕ್ಷಕರ ಸಂಘದ ವತಿಯಿಂದ ನಿವೃತ್ತ ಶಿಕ್ಷಕರು, ಬಡ್ತಿ ಹೊಂದಿದ ಅಧಿಕಾರಿಗಳು, ನೂತನವಾಗಿ ಆಯ್ಕೆಯಾದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ವಿವಿಧ ಸಂಘಟನೆಗಳ ಮುಖಂಡರಿಗೆ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಿಕ್ಷಕರ ಸೇವಾ ಭದ್ರತೆ, ವೃತ್ತಿಪರ ಗೌರವ ಮತ್ತು ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸಂಘಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಶಿಕ್ಷಕರು ಎದುರಿಸುತ್ತಿರುವ ಸಮಸ್ಯೆಗಳ ಪರಿಹಾರಕ್ಕೆ ಸಂಘಗಳು ಸದಾ ಮುಂಚೂಣಿಯಲ್ಲಿ ನಿಲ್ಲಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಪ್ರೌಢಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ದತ್ತಾತ್ರಿ ಕಾಟ್ಕರ್ ಮಾತನಾಡಿ, ಸಂಘದ ನಿರಂತರ ಪ್ರಯತ್ನಗಳಿಂದ ಅನೇಕ ಶಿಕ್ಷಕರಿಗೆ ಕಾಲಮಿತಿ ವೇತನ ಹೆಚ್ಚಳ, ಬಾಕಿ ವೇತನದ ಮಂಜೂರಾತಿ ಸೇರಿದಂತೆ ಹಲವು ಸೇವಾ ಸೌಲಭ್ಯಗಳು ದೊರೆತಿವೆ ಎಂದು ತಿಳಿಸಿದರು. ಮುಂದೆಯೂ ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕಾಗಿ ಸಂಘ ಬದ್ಧತೆಯಿಂದ ಕಾರ್ಯನಿರ್ವಹಿಸಲಿದೆ ಎಂದು ಹೇಳಿದರು.

ಸಭೆಯಲ್ಲಿ ಕೆಎಎಂಎಸ್ ???ಪ್‌ನ ತಾಂತ್ರಿಕ ದೋಷಗಳು, ಶಿಕ್ಷಕರ ವರ್ಗಾವಣೆ, ಪದೋನ್ನತಿ, ವೇತನ ಸಂಬಂಧಿತ ವಿಷಯಗಳು ಹಾಗೂ ಇತರೆ ಆಡಳಿತಾತ್ಮಕ ಸಮಸ್ಯೆಗಳ ಕುರಿತು ಚರ್ಚಿಸಿ, ಅವುಗಳ ಪರಿಹಾರಕ್ಕಾಗಿ ಸಂಬಂಧಿತ ಅಧಿಕಾರಿಗಳಿಗೆ ಮನವಿ ಸಲ್ಲಿಸುವ ತೀರ್ಮಾನ ಕೈಗೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ರಾಜಕುಮಾರ ಜೋಳದಾಪಕೆ, ಜಾಲಿಂದರ ಮೇತ್ರೆ, ಸಹದೇವ ಗೌಡಗಾಂವೆ, ಸಂತೋಷ ಮುದಾಳೆ, ನಿರಂಜಪ್ಪ ಪಾತ್ರೆ, ಬಸವರಾಜ ದಾನ, ರಾಮ ಬಾಣ, ಮಲ್ಲಿಕಾರ್ಜುನ ಕನ್ನಾಳೆ, ಅರ್ಜುನ ಸೂರ್ಯವಂಶಿ, ಸಂತೋಷ ವಾಡೆ, ಚಂದ್ರಕಾಂತ ತಾಳವಾಡೆ, ಸತ್ಯವಾನ ಕಾಂಬಳೆ, ಸುಧಾಕರ ಗಾಯಕವಾಡ, ಅನಿತಾ, ರತ್ನಮ್ಮ, ಅನ್ನಪೂರ್ಣಾ ಸೇರಿದಂತೆ ಶಿಕ್ಷಕರು, ಮುಖ್ಯಗುರುಗಳು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.ಮಲ್ಲಿಕಾರ್ಜುನ ಪಾಟೀಲ ಸ್ವಾಗತಿಸಿ, ಮಾರುತಿ ಸಗರ ಕಾರ್ಯಕ್ರಮ ನಿರೂಪಿಸಿದರು. ಸಂಜೀವಕುಮಾರ ಸಾವರೇ ವಂದಿಸಿದರು.

## ಪರಿಶ್ರಮದಿಂದ ಬದುಕು ರೂಪಿಸಿಕೊಳ್ಳಿ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ವಿದ್ಯಾರ್ಥಿಗಳು ವಿನಯ, ಸರಳತೆ ಮತ್ತು ಕಠಿಣ ಪರಿಶ್ರಮದಿಂದ ತಮ್ಮ ಬದುಕನ್ನು ರೂಪಿಸಿಕೊಳ್ಳಬೇಕು ಎಂದು ಹಿರೇಮಠ ಸಂಸ್ಥಾನದ ಕಾರ್ಯದರ್ಶಿ ಮಹಾಲಿಂಗ ಸ್ವಾಮೀಜಿ ಹೇಳಿದರು. ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಶನಿವಾರ ಆಯೋಜಿಸಿದ್ದ ತಳವಾಡ(ಕೆ) ಚನ್ನಬಸವೇಶ್ವರ ಗುರುಕುಲ ಪದವಿ ಕಾಲೇಜಿನ ಬಿಎಸ್ಸಿ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.ಪದವಿ ಶಿಕ್ಷಣದ ಜತೆಗೆ ವಿದ್ಯಾರ್ಥಿಗಳು ಬುದ್ಧಿವಂತಿಕೆ ಹಾಗೂ ಕೌಶಲ್ಯಗಳನ್ನು ಬೆಳೆಸಿಕೊಂಡು ಬದುಕಿನಲ್ಲಿ ಸಾಧನೆಗೈಯಬೇಕು ಎಂದು ತಿಳಿಸಿದರು.

ಸಂಸ್ಥೆಯ ಆಡಳಿತಾಧಿಕಾರಿ ಮೋಹನ ರೆಡ್ಡಿ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಪಿಯುಸಿ ವಿಭಾಗದ ಪ್ರಾಚಾರ್ಯ ಬಸವರಾಜ ಮೊಳಕೀರೆ, ಪ್ರಾಚಾರ್ಯರಾದ ಡಾ.ಕಿರಣ ಸಜ್ಜನಶೆಟ್ಟಿ, ಸುಧಾಕರ ಬಿರಾದಾರ್, ಪಾಂಡುರಂಗ ಕುಂಬಾರ, ಉಪನ್ಯಾಸಕರಾದ ಡಾ.ಪಲ್ಲವಿ ಪಾಟೀಲ್, ಎಸ್‌ಬಿಐ ಮುಖ್ಯ ವ್ಯವಸ್ಥಾಪಕ ವಿಕಾಸ, ರೋಹಿತ ಯಾದವ, ಮಾರ್ಥ ಅನ್ನಮಯ್ಯ ಸೇರಿದಂತೆ ಹಲವರು ಇದ್ದರು.ಗಣೇಶ ಸ್ವಾಮಿ ಸ್ವಾಗತಿಸಿದರು. ಭಾಗ್ಯಶ್ರೀ ಭೂರೆ, ವೈಷ್ಣವಿ ಖೆಳಗೆ ನಿರೂಪಿಸಿ, ವಂದಿಸಿದರು.

## ಆದರ್ಶ ವಿದ್ಯಾಲಯ ಪ್ರವೇಶಕ್ಕೆ 24 ರಂದು ಪರೀಕ್ಷೆ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು





ಸರ್ಕಾರಿ ಆದರ್ಶ ವಿದ್ಯಾಲಯ ಚಿಕ್ಕ ಹುಣಸೂರು ಹುಣಸೂರು ತಾಲೂಕಿನ ಶಾಲೆಯ 2026 27 ನೇ ಸಾಲಿನ 7ನೇ 8ನೇ 9ನೆಯ ತರಗತಿಯ ಖಾಲಿ ಇರುವ ಸ್ಥಾನಗಳಿಗೆ ಆಯ್ಕೆ ಪರೀಕ್ಷೆ ಮೂಲಕ ಭರ್ತಿ ಮಾಡಿಕೊಳ್ಳಬೇಕಾಗಿದೆ ಆಯ್ಕೆ ಪರೀಕ್ಷೆಯನ್ನು ದಿನಾಂಕ 24/6 2026 ರನ್ನು ಬುಧವಾರ ಬೆಳಗ್ಗೆ 10:30 ಕ್ಕೆ ಒಂದು ಗಂಟೆವರೆಗೆ ಸರ್ಕಾರಿ ಆದರ್ಶ ವಿದ್ಯಾಲಯ ಚಿಕ್ಕ ಹುಣಸೂರು ಶಾಲೆಯಲ್ಲಿ ನಡೆಸಲು ಉದ್ದೇಶಿಸಿದ್ದು ಹುಣಸೂರು ತಾಲೂಕಿನ ಆಶಕ್ತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಪ್ರವೇಶ ಪರೀಕ್ಷೆಯನ್ನು ಹಾಜರಾಗಲು ಸೂಚಿಸಿದ್ದು ಎಂದು ಶಿಕ್ಷಣಾಧಿಕಾರಿ ಕಾಳ ನಾಯಕ ತಿಳಿಸಿದ್ದಾರೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿ ಅರ್ಜಿ ಸಿಗರಿಸುವ ದಿನಾಂಕ ಜೂನ್ 5 ರಿಂದ ಕೊನೆಯ ದಿನಾಂಕ 23 ರವರೆಗೆ ನಿಗದಿ ಮಾಡಲಾಗಿದೆ ಹಾಗೂ ಪ್ರವೇಶ ಪರೀಕ್ಷೆ ನಡೆಯುವ ದಿನಾಂಕ 24.06.2026ರಂದು ಬುಧವಾರ ಬೆಳಿಗ್ಗೆ 10:30 ರಿಂದ 1 ಗಂಟೆವರೆಗೆ ಪರೀಕ್ಷೆ ನಡೆಯಲಿರುವ ಸ್ಥಳ ಸರ್ಕಾರಿ ಆದರ್ಶ ವಿದ್ಯಾಲಯ ಚಿಕ್ಕಹುಣಸೂರು ನಡೆದಿದೆ ಎಂದು ತಿಳಿಸಿದ್ದಾರೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅಗತ್ಯ ಇರುವ ದಾಖಲಗಳನ್ನು ವಿದ್ಯಾರ್ಥಿಯ ಇತ್ತೀಚಿನ ಭಾವಚಿತ್ರ ಎರಡು ವಿದ್ಯಾರ್ಥಿಯ ಎಸ್ ಎ ಟಿ ಎಸ್ ಸಂಖ್ಯೆ ಕಳೆದ ಸಾಲಿನ ಅಂಕೆ ಪಟ್ಟಿ ಪ್ರತಿ 1. ಚಾಲ್ತಿಯಲ್ಲಿರುವ ವಿದ್ಯಾರ್ಥಿಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ವಿದ್ಯಾರ್ಥಿ ಆಧಾರ್ ಕಾರ್ಡ್ ಚಾಲ್ತಿಯಲ್ಲಿರುವ ಪೋಷಕರ ಮೊಬೈಲ್ ಸಂಖ್ಯೆ ದಾಖಲೆಗಳನ್ನು ನೀಡಬೇಕು ಎಂದು ತಿಳಿಸಿದ್ದಾರೆ

ಹೆಚ್ಚಿನ ಮಾಹಿತಿಗೆ ಶಾಲೆಯ ಮುಖ್ಯ ಶಿಕ್ಷಕರನ್ನು ಚಂದ್ರ ಕುಮಾರ್ ಎಚ್ ಆರ್ ದೂರವಾಣಿ ಸಂಖ್ಯೆ 9449783750. ವಿನಯ್ ಚಂದ್ರು 8495907976. ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ

## ಲಿಂಗಸುಗೂರು ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಅಡಿಗಲ್ಲು

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಈ ಕೆಳ ಕಂಡ ಗ್ರಾಮಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ಖ.ಅ.ಇ.ಕ, ಖಿ.ಖ.ಇ.ಕ. ಯೋಜನೆ ಅಡಿಯಲ್ಲಿ 2.50 ಕೋಟಿ ರೂಪಾಯಿಯ ಅನುದಾನದಲ್ಲಿ ಚಿತ್ತಾಪುರ, ನಾಗರಹಾಳ, ಹಾಲಕವಟಗಿ, ಅಮದಿಹಾಳ್, ಗ್ರಾಮಗಳಲ್ಲಿ ಎಮ್. ಎಲ್. ಸಿ ಶರಣಗೌಡ ಪಾಟೀಲ್ ಬಯ್ಯಾಪುರ ಚಾಲನೆ ನೀಡಿದರು.ಕ್ಷೇತ್ರದ ಅಭಿವೃದ್ಧಿ ಎಂದರೆ ನಿರಂತರ ಪ್ರಗತಿಯತ್ತ ಪ್ರಯಾಣಿಸುತ್ತಿರುವ ಸ್ಥಳೀಯ ಸಮುದಾಯದ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಮತ್ತು ಮೂಲಸೌಕರ್ಯಗಳ ಸಕ್ರೀಯ ಬೆಳೆವಿಕೆಯನ್ನು. ಇದು ಸ್ಥಳೀಯ ಜನರಿಗೆ ಉತ್ತಮ ಜೀವನಮಟ್ಟವನ್ನು ಒದಗಿಸಲು ಸಹಾಯಕವಾಗಿದೆ. ಕ್ಷೇತ್ರದ ಅಭಿವೃದ್ಧಿಯು ಅನೇಕ ಅಂಶಗಳನ್ನು ಒಳಗೊಂಡಿದೆ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದ ಸಹಾಯ, ಜನರ ಬದ್ಧತೆ ಮತ್ತು ಸ್ಥಳೀಯ ನಾಯಕರ ಮಾರ್ಗದರ್ಶನ ಅತ್ಯಂತ ಮುಖ್ಯ

ಈ ವೇಳೆ ಶ್ರೀ ಭೂಪನಗೌಡ ಕರಡಕಲ್, ಪಾಮಯ್ಯ ಮುರಾರಿ, ಶ್ರೀ ಬಸವರಾಜಗೌಡ ಗಣೇಕಲ್, ಶ್ರೀ ಗುಂಡಪ್ಪ ನಾಯಕ್, ಶ್ರೀ ಸೋಮನಶೇಖರ್ ಐದನಾಳ, ಶ್ರೀ ಮಲ್ಲಣ್ಣ ನರಕಲದಿನ್ನಿ, ಶ್ರೀ ಹೊನ್ನಪ್ಪ ಮೇಟಿ, ಶ್ರೀ ಅನಿಷಾ ಪಾಶ, ಶ್ರೀ ಜಗದೀಶಗೌಡ ಹಾಲಭಾವಿ, ಶ್ರೀ ಪ್ರಕಾಶ್ ಕುರಿ, ಸಾಗರಗೌಡ , ಬಸಣ್ಣ ಜವಳಗೇರಿ, ಃ ಒ ಪಾಟೀಲ್, ಸಿದ್ದಪ್ಪ , ಶ್ರೀ ಚನ್ನಾರೆಡ್ಡಿ ಬಿರಾದರ್ ಒಐಅ ಆಪ್ತ ಸಹಾಯಕರು ಹಾಗೂ ಸ್ಥಳೀಯ ಮುಖಂಡರು, ಹಿರಿಯರು, ಯುವಕರು ಪಕ್ಷದ ಮುಖಂಡರು ಎಲ್ಲ ಸಮಸ್ತ ಜನತೆಯ ಜೊತೆಗೂಡಿ ಈ ಕಾರ್ಯವನ್ನು ನೆರವೇರಿಸಿದರು.

## ಜಾಹ್ನವಿ ಮೋರೆಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ & ಪರಿಶಿಷ್ಟವರ್ಗಗಳ ನೌಕರರ ಒಕ್ಕೂಟ (ರಿ) ಹಾಗೂ ಜಿಲ್ಲಾ ಘಟಕ ಉತ್ತರ ಕನ್ನಡದ ವತಿಯಿಂದ ಕಾರವಾರದಲ್ಲಿ ನಡೆದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಸುರೇಖಾ ಮತ್ತು ನಾನಾ ಮೋರೆ ದಂಪತಿಗಳ ಮಗಳಾದ ಜಾಹ್ನವಿ ನಾನಾ ಮೋರೆ ಇವಳು ಪ್ರಸಕ್ತ ಸಾಲಿನಲ್ಲಿ ಪಿಯುಸಿ ವಿಜ್ಞಾನ ವಿಭಾಗದಲ್ಲಿ 91.33 ಅಂಕ ಗಳಿಸಿದ ಹಿನ್ನೆಲೆಯಲ್ಲಿ ಸನ್ಮಾನಿಸಲಾಯಿತು.

### ನಗರಸಭೆ ಕಾರ್ಯಾಲಯ, ಯಾದಗಿರಿ

ಸಂ:ನಸಯಾ:ತಾಂತ್ರಿಕ ಶಾಖೆ:ಇ-ಟೆಂಡರ್:2026-27 ದಿನಾಂಕ:10-06-2026.

**ದ್ವೀ ಲಕೋಟೆಯ ಪದ್ಧತಿಯಲ್ಲಿ ಇ-ಪ್ರಕ್ಯೂರಮೆಂಟ್**

**ಅಲ್ಪಾವಧಿ ಟೆಂಡರ ಪ್ರಕಟಣೆ**

ಕರ್ನಾಟಕ ರಾಜ್ಯದ ರಾಜ್ಯಪಾಲರ ಪರವಾಗಿ ಯಾದಗಿರಿ ಜಿಲ್ಲೆಯ ಯಾದಗಿರಿ ನಗರಸಭೆಯ ಪೌರಾಯುಕ್ತರು ಇವರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಹಾಗೂ ನಿಯಮಗಳು 2000ರ ಇ-ಪ್ರಕ್ಯೂರಮೆಂಟ್ ಪದ್ಧತಿಯಲ್ಲಿ 2025-26ನೇ ಸಾಲಿನ ನಗರಸಭೆ ಅನುದಾನದಡಿಯಲ್ಲಿ ತೆಗೆದುಕೊಂಡಿರುವ ಕಾಮಗಾರಿಗೆ ಇ-ಪ್ರಕ್ಯೂರಮೆಂಟ್ ಪೋರ್ಟಲನಲ್ಲಿ ಟೆಂಡರ ಕರೆಯಲಾಗಿದ್ದು, ಇಪಕ್ಯೂರಮೆಂಟ್ ಪೋರ್ಟಲನಲ್ಲಿ ಲೋಕೋಪಯೋಗಿ ಮ್ಯಾನ್‌ಪವರ ಸಪ್ಲೆಯರ್/ಸರ್ವಿಸ್ Standard Tender Documentಗಳ ಅಡಿಯಲ್ಲಿ ಇ-ಟೆಂಡರನ್ನು ಆಹ್ವಾನಿಸಲಾಗಿದೆ. ಇ-ಪ್ರಕ್ಯೂರಮೆಂಟ್‌ನಲ್ಲಿ http://eproc.karnataka.gov.inರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ-ಲೈನ್ ಮೂಲಕ ಟೆಂಡರಗಳನ್ನು ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ವೆಬ್ ಸೈಟ್ www.yadgircity.mrc.gov.in ರಲ್ಲಿ ನೋಡಬಹುದು ಹಾಗೂ ತಾಂತ್ರಿಕ ಅಧಿಕಾರಿಗಳನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

**1) ಟೆಂಡರಗಳನ್ನು ಸಲ್ಲಿಸಲು ಪ್ರಾರಂಭ ದಿನಾಂಕ:** 11-06-2026 ರಂದು 10.30 ರಿಂದ **2) ಟೆಂಡರಗಳನ್ನು ಸಲ್ಲಿಸಲು ಕೊನೆಯ ದಿನಾಂಕ:** 25-06-2026 ರಂದು ಸಾಯಂಕಾಲ 5.30 ರವರೆಗೆ **3) ತಾಂತ್ರಿಕ ಬಿಡ್ ತೆರೆಯುವ ದಿನಾಂಕ:** 29-06-2026 ರಂದು ಬೆಳ್ಳಿಗ್ಗೆ 11.00 ಗಂಟೆಗೆ **4) ಆರ್ಥಿಕ ಬಿಡ್ ತೆರೆಯುವ ದಿನಾಂಕ:** 06-07-2026 ರಂದು ಬೆಳ್ಳಿಗ್ಗೆ 11.00 ಗಂಟೆಗೆ

**ಇಡೆಂಟ್ ನಂಬರ:** DMA/2026-27/SE8014. **ಕಾಮಗಾರಿಯ ವಿವರ:** PROVIDING MANPOWER SUPPLY (VALVEMAN) TO CMC YADGIR FOR THE YEAR 2026-27 (FOR 12 MONTHS) (CMC FUND FOR THE YEAR 2026-27.**ಟೆಂಡರ ಗಿಟ್ಟ ಮೊತ್ತ (ರೂ. ಲಕ್ಷಗಳಲ್ಲಿ):** 44,95,330/- **ಇಎಂಡಿ ಮೊತ್ತ (ರೂಗಳಲ್ಲಿ):** 89,900/-. **ಗುತ್ತಿಗೆದಾರರ ದರ್ಜೆ:** ಮ್ಯಾನ್ ಪವರ್ ಸಪ್ಲೈಯರ್/ಸರ್ವಿಸ್. **ಕಾಮಗಾರಿ ನಿರ್ವಹಿಸುವ ಕಾಲಾವಧಿ:** 12 MONTHS

ಸಹಿ/- ಪೌರಾಯುಕ್ತರು
ನಗರಸಭೆ ಯಾದಗಿರಿ

ವಾ.ಸಾ.ಸಂ.ಇ/ಯಾದಗಿರಿ/111/ಕೆ.ಎಸ್.ಎಂ.ಸಿ&ಎ/2026-27



ಬಸವಕಲ್ಯಾಣ:–ತಾಲೂಕಿನ ಹಣಮಂತವಾಡಿ ಗ್ರಾಮದ ವಕೀಲರಾದ ಪ್ರಕಾಶ ಟಿ. ಮಚಕುರಿ ಅವರು ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆ ವೀಕ್ಷಿಸುತಿರುವ ದೃಶ್ಯ ಕಾಣಬಹುದು.

# ಗಾಣಗಾಪೂರಕ್ಕೆ ಡಿ.ಸಿ. ಭೇಟಿ: ದತ್ತನ ಕ್ಷೇತ್ರದಲ್ಲಿನ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.10: ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ಮಂಗಳವಾರ ಜಿಲ್ಲೆಯ ಅಫಜಲಪೂರ ತಾಲೂಕಿನ ದತ್ತನ ಸುಕ್ಷೇತ್ರವಾದ ಐತಿಹಾಸಿಕ ದೇವಲ ಗಾಣಗಾಗಪುರ ಕ್ಷೇತ್ರಕ್ಕೆ ಭೇಟಿ ನೀಡಿ ದೇವಸ್ಥಾನ ಮತ್ತ ಅದರ ಸುತ್ತುಮುತ್ತಲು ನಡೆಯುತ್ತಿರುವ ವಿವಿಧ ಪ್ರವಾಸಿ ಮೂಲಸೌಕರ್ಯ ಹಾಗೂ ಅಭಿವೃದ್ಧಿ ಕಾಮಗಾರಿಗಳ ಕುರಿತು ಪರಿಶೀಲನೆ ನಡೆಸಿದರು.



ದತ್ತನ ಸನ್ನಿಧಾನಕ್ಕೆ ಭೇಟಿ ನೀಡಿ ಆರತಿ ಬೆಳಗಿ ದತ್ತನ ದರ್ಶನ ಪಡೆದುಕೊಂಡ ಜಿಲ್ಲಾಧಿಕಾರಿಗಳು ನಂತರ ದೇವಸ್ಥಾನ ಸುತ್ತ ನಡೆಯುತ್ತಿರುವ ಕಾಮಗಾರಿಗಳನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ನೆರೆ ರಾಜಗಳಿಂದ ಲಕ್ಷಾಂತರ ಸಂಖ್ಯೆಯಲ್ಲಿ ಬರುವ ಭಕ್ತಾದಿಗಳಿಗೆ ಇಲ್ಲಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಅಗತ್ಯ ಮೂಲ ಸೌಲಭ್ಯಗಳನ್ನು ಒದಗಿಸಬೇಕು. ಕ್ಷೇತ್ರದಾದ್ಯಂತ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಭಕ್ತಾದಿಗಳಿಗೆ ಯಾವುದೇ ರೀತಿಯ ತೊಂದ–ರೆ ಆಗದಂತೆ ದೇವಸ್ಥಾನ ಆಡಳಿತ ಮಂಡಳಿ ಕಾರ್ಯನಿರ್ವಹಿಸಬೇಕು ಎಂದರಲ್ಲದೆ ಪ್ರಗತಿಯಲ್ಲಿರುವ ವಿವಿಧ ಮೂಲಸೌಕರ್ಯ ಕಾಮಗಾರಿಗಳಿಗೆ ವೇಗ ನೀಡಿ ಕಾಲಮಿತಿಯಲ್ಲಿ ಪೂರೈಸಬೇಕು ಎಂದು ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಡಿ.ಸಿ ಅವರು ಗಾಣಗಾಪುರ್ ಬ್ರಿಜ್ ಕಮ್ ಬ್ಯಾರೇಜ್ ಗೆ ಭೇಟಿ ನೀಡಿ, ಅಲ್ಲಲ್ಲಿ ಗ್ರಿಲ್ ಮುರಿದಿರುವುದರಿಂದ ಕೂಡಲೆ ದುರಸ್ತಿ ಮಾಡುವಂತೆ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಇನ್ನು ಅಫಜಲಪೂರ ಹೋಗುವ ಮಾರ್ಗದಲ್ಲಿ ಅತನೂರ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ರೈತರಿಗೆ ಬಿತ್ತನೆ ಬೀಜ ಮತ್ತು ಅಫಜಲಪೂರ ಪಟ್ಟಣದಲ್ಲಿನ ಆರ್.ಎಸ್.ಕೆ ಕೇಂದ್ರಕ್ಕೆ ಭೇಟಿ ನೀಡಿ ರೈತರಿಗೆ ರಸಗೊಬ್ಬರ ವಿತರಣೆ ಮಾಡಿದಲ್ಲದೆ ಪಟ್ಟಣದ ಎರಡ್ಮೂರು ರಸಗೊಬ್ಬರ ಮಾರಾಟ ಅಂಗಡಿಗಲಿಗೆ ದಿಢೀರ್ ಭೇಟಿ ನೀಡಿ ದಾಸ್ತಾನು, ಮಾರಾಟ, ಪಿ.ಓ.ಎಸ್ ಅಪಡೇಟ್ ಮಾಡುತ್ತಿರುವ ಕುರಿತು ಖುದ್ದಾಗಿ ಪರಿಶೀಲಿಸಿದರು. ಡಿ.ಎ.ಪಿ., ಯೂರಿಯಾ ನಿಗದಿತ ದರಕ್ಕಿಂತ ಹಡಚ್ಚಿನ ದರ–ಕ್ಕೆ ಮಾರಾಟ ಮಾಡಿದರೆ ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ ಅಂಗಡಿ ಮಾಲೀಕರಿಗೆ ಎಚ್ಚರಿಕೆ ನೀಡಿದರು.

ನಂತರ ತಹಸಿಲ್ದಾರ್ ಕಚೇರಿ ಆವರಣದಲ್ಲಿ ಪುರಸಭೆ ಮತ್ತು ಕಂದಾಯ ಅಧಿಕಾರಿಗಳ ಸಭೆ ನಡೆಸಿದ ಜಿಲ್ಲಾಧಿಕಾರಿಗಳು, ಪಟ್ಟಣ ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಪುರಸಭೆಯ ಜವಾಬ್ದಾರಿಯಾಗಿದೆ. ಅದನ್ನು ಕಟ್ಟುನಿಟ್ಟಾಗಿ ಮಾಡಬೇಕು. ಇನ್ನು ಮಸತ್ರ ಇಲಾಖೆಯಾಗಿರುವ ಕಂದಾಯ ಇಲಾಖೆಯು ಜನಸ್ನೇಹಿಯಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಕಾರಣಕ್ಕೂ ಸಾರ್ವಜನಿಕರನ್ನು ಅನಗತ್ಯ ಕಚೇರಿಗೆ ಅಲೆದಾಡಿಸಬಾರದು ಎಂದು ಸಿಬ್ಬಂದಿಗಳಿಗೆ ಸೂಚನೆ ನೀಡಿದರು.

ಪ್ರೊಬೇಷನರ್ ಐ.ಎ.ಎಸ್. ಅಧಿಕಾರಿ ಶಿಖರ್ ಮೋಘಾ, ಕಲಬುರಗಿ ಉಪ ವಿಭಾಗದ ಸಹಾಯಕ ಆಯುಕ್ತೆ ಸಾಹಿತ್ಯಾ ಆಲದಕಟ್ಟಿ, ಅಫಜಲಪೂರ ತಹಶೀಲ್ದಾರ ಸಂಜೀವಕುಮಾರ್ ದಾಸರ್, ಶ್ರೀ ದತ್ತಾತ್ರೆಯ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಶಿವಕಾಂತಮ್ಮ ಸೇರಿದಂತೆ ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಜನರ ಮನ ರಂಜಿಸಿದ ತೊಗಲು ಗೊಂಬೆಯಾಟ, ಜನಪದ ಸಂಗೀತ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೊಪ್ಪಳ ಹಾಗೂ ಹಿಂದೂ ಧಾರ್ಮಿಕ ದತ್ತಿ ಇಲಾಖೆಯ ಶ್ರೀ ಕ್ಷೇತ್ರ ಹುಲಿಗೆಮ್ಮ ದೇವಿ ದೇವಸ್ಥಾನದ ಸಹಯೋಗದಲ್ಲಿ ಮಂಗಳವಾರ (ಜೂ. 9ರಂದು) ಹುಲಿಗಿ ಗ್ರಾಮದಲ್ಲಿ ಹಮ್ಮಿಕೊಂಡ ಕಲಾ ನಡಿಗೆ ಜನರ ಬಳಿಗೆ ವಿನೂತನ ಕಾರ್ಯಕ್ರಮದಲ್ಲಿ ತೊಗಲು ಗೊಂಬೆಯಾಟ ಮತ್ತು ಜನಪದ ಸಂಗೀತವು ಜನರ ಮನ ರಂಜಿಸಿತು.

ಕಲಾ ನಡಿಗೆ ಜನರ ಬಳಿಗೆ ವಿನೂತನ ಕಾರ್ಯಕ್ರಮಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ವೀರೇಶ ಶಿಲ್ಪಿ, ಗುರುನಾಥ ಪಾಯಸದವರು ಹಾಗೂ ರವಿ ಇನ್ನಿತರು ಉಪಸ್ಥಿತರಿದ್ದರು. ಕೇಶಪ್ಪ ಶಿಳ್ಳೆಖ್ಯಾತ ಅವರು ವಿರಾಟ ಪರ್ವ ಪ್ರಸಂಗ ತೊಗಲು ಗೊಂಬೆಯಾಟ ಹಾಗೂ ಫಕೀರಸಿದ್ಧಪ್ಪ ಹಾಗೂ ಸಂಗಡಿಗರು ಚೌಡಕಿ ಪದಗಳ ಗಾಯನ ಕಾರ್ಯಕ್ರಮವನ್ನು ಪ್ರಸ್ತುತಪಡಿಸಿದರು

# ಕಾಂಗ್ರೆಸ್ ಕಟ್ಟಾಳು ಅನಿಲ ಜಾಧವಗೆ ಎಮ್.ಎಲ್.ಸಿ ಮಾಡಿ: ಇಮ್ಯಾನುವೆಲ್ ಮಂದಕನಳ್ಳಿ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 10: ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಮುಖಂಡರು ಹಾಗೂ ಪಕ್ಷದ ಕಟ್ಟಾಳು ಅನಿಲ ಜಾಧವ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ನೇಮಕ ಮಾಡುವಂತೆ ಕರ್ನಾಟಕ ಕ್ರೈಸ್ತ ಹಿತರಕ್ಷಣ ಸಮಿತಿಯ ಜಿಲ್ಲಾಧ್ಯಕ್ಷ ಇಮ್ಯಾನುವೆಲ್ ಮಂದಕನಳ್ಳಿ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಕ್ರೈಸ್ತ ಸಮುದಾಯ ಈ ದೇಶ ಹುಟ್ಟಿದಾಗಿನಿಂದ ಕಾಂಗ್ರೆಸ್ ಪಕ್ಷದ ಪರವಾಗಿ ನಿಂತಿದೆ. ಪಕ್ಷದ ನಿಷ್ಠೆ ಪ್ರದರ್ಶಿಸಿದ ಸಮುದಾಯ ನಮ್ಮದು. ಆದರೆ, 2023ರ ಸಾರ್ವತ್ರಿಕ ವಿಧಾನ ಸಭೆ ಚುನಾವಣೆಯಲ್ಲಿ ಇಡೀ ಕಲ್ಯಾಣ ಕರ್ನಾಟಕ ಭಾಗದಲ್ಲಿ ನಮ್ಮ ಸಮುದಾಯದ ಒಬ್ಬರಿಗೂ ಟಿಕೇಟ್ ಕೊಡದೆ ನಿರಾಸೆ ಮಾಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.




ಅನಿಲ ಜಾಧವ ಕಲ್ಯಾಣ ಕರ್ನಾಟಕ ಭಾಗದ ನಿಷ್ಠಾವಂತ ಪಕ್ಷದ ಮುಖಂಡರಾಗಿದ್ದು, ಸೋನಿಯಾ ಗಾಂಧಿ ಯುತ್ ಬ್ರಿಗೇಡ್ ನ ಮುಖ್ಯಸ್ಥರಾಗಿ ಬಿಜೆಪಿ ವಿರೂದ್ಧ ಎಸ್.ಆಯ್.ಆರ್ ವಿರೋಧ, ಓಟ್ ಚೋರಿ ಅಭಿಯಾನ ಸೇರಿದಂತೆ ಕೇಸರಿ ಕಲಿಗಳ ವಿರೂದ್ಧ ನಿರಂತರ ಹೋರಾಟ ಮಾಡುವ ಅನಿಲ ಜಾಧವ ಅವರನ್ನು ಎಮ್. ಎಲ್.ಸಿ ಮಾಡಿದರೆ ಈ ಭಾಗದಲ್ಲಿ ಕಾಂಗ್ರೆಸ್ ಪಕ್ಷ ಇನ್ನಷ್ಟು ಶಕ್ತಿಶಾಲಿಯಾಗಬಲ್ಲದು ಎಂದರು.

ಕರ್ನಾಟಕ ಕ್ರೈಸ್ತ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ರಾಜಕುಮಾರ ಕೊಳಾರ್ ಮಾತನಾಡಿ, ಅನಿಲ ಜಾಧವ ಅವರಿಗೆ ಎಮ್.ಎಲ್.ಸಿ ಮಾಡಿ ನಮ್ಮ ಸಮಾಜಕ್ಕಾದ ಅನ್ಯಾಯ ಸರಿಪಡಿಸಬೇಕು. ಇಲ್ಲದಿದ್ದರೆ ಮುಂಬರುವ ಗ್ರಾಮ ಪಂಚಾಯತ, ತಾಲೂಕು ಪಂಚಾಯತ ಹಾಗೂ ಜಿಲ್ಲಾ ಪಂಚಾಯತ ಚುನಾವಣೆಗಳಲ್ಲಿ ತಕ್ಕ ಪಾಠ ಕಲಿಸಲಾಗುವುದೆಂದು ಎಚ್ಚರಿಸಿದರು.

ಕರ್ನಾಟಕ ದಲಿತ ಸೇನೆ ಜಿಲ್ಲಾಧ್ಯಕ್ಷ ಧನರಾಜ ಕೊಳಾರ್ ಮಾತನಾಡಿ, ಕ್ರೈಸ್ತ ಸಮಾಜಕ್ಕೆ ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಹೆಚ್ಚಿನ ಮನ್ನಣೆ ನೀಡುತ್ತದೆ ಎಂಬ ಭರವಸೆ ಇದೆ. ಅನಿಲ ಜಾಧವ ಅವರಿಗೆ ವಿಧಾನ ಪರಿಷತ್ ಗೆ ನೇಮಕ ಮಾಡಿದರ ಕಲ್ಯಾಣ ಕರ್ನಾಟಕ ಭಾಗದ ಕ್ರೈಸ್ತ ಸಮುದಾಯದ ಗೌರವ ಕೊಟ್ಟಂತಾಗುತ್ತದೆ ಎಂದವರು ತಿಳಿಸಿದರು.

ಕ್ರೈಸ್ತ ಮುಖಂಡರಾದ ಅರುಣ ಅಣದುರ, ಜೇಮ್ಸ್ ಕೊಳಾರ್ ಹಾಗೂ ಉಮೆಶ ಗಾಯಕವಾಡ ಪತ್ರಿಕಾಗೋಷ್ಠಿಯಲ್ಲಿದ್ದರು.

# ಬೀದರ್ ಜಿಲ್ಲೆಯ ರೈತರಿಗೆ 246 ಕೋಟಿ ರೂ. ಅತ್ಯಧಿಕ ಬೆಳೆ ವಿಮೆ ಪರಿಹಾರ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ10 : ಜೂ.09: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಮತ್ತು ಸಂಸತ್ ಸದಸ್ಯ ಸಾಗರ್ ಖಂಡ್ರೆ ಅವರ ಪ್ರಯತ್ನದ ಫಲವಾಗಿ 2025ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆ ಹಾನಿಗೆ ಒಳಗಾದ ಜಿಲ್ಲೆಯ ರೈತರಿಗೆ 246.9 ಕೋಟಿ ರೂ. ಅತ್ಯಧಿಕ ಬೆಳೆ ವಿಮಾ ಪರಿಹಾರ ಲಭಿಸಿದೆ. ಜಿಲ್ಲೆಯಲ್ಲಿ ಒಟ್ಟಾರೆ 202091 ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಂಡಿದ್ದು, 121077 ಹೆಕ್ಟೇರ್ ಪ್ರದೇಶ ವಿಮಾ ವ್ಯಾಪ್ತಿಗೆ ಒಳಪಟ್ಟಿತ್ತು. ಮುಂಗಾರು ಹಂಗಾಮಿನಲ್ಲಿ 24690.25 ಕ್ಲೇಮ್ ಗಳು ಬಂದಿದ್ದು, 11052 ಕ್ಲೇಮ್ ಗಳನ್ನು ಇತ್ಯರ್ಥಪಡಿಸಿರುವ ವಿಮಾ ಕಂಪನಿ 110 ಕೋಟಿ ರೂ. ಮೊತ್ತದ ಕ್ಲೇಮ್ ಹಣವನ್ನು ಈಗಾಗಲೇ ಪಾವತಿ ಮಾಡಿತ್ತು. ಇದರ ಹೊರತಾಗಿ 13638.21 ಕೋಟಿ ರೂ.ಗಳ ಕ್ಲೇಮ್ ವಿವಿಧ ಹಂತದಲ್ಲಿ ಬಾಕಿ ಉಳಿದಿತ್ತು. ಈ ಬಾಕಿಯನ್ನು ತ್ವರಿತವಾಗಿ ರೈತರಿಗೆ ನೀಡುವಂತೆ ಈಶ್ವರ ಖಂಡ್ರೆ ಮತ್ತು ಸಾಗರ್ ಖಂಡ್ರೆ ಅವರು ಕಂಪನಿಯೊಂದಿಗೆ ನಡೆಸಿದ ಸತತ ಸಭೆಯ ಹಿನ್ನೆಲೆಯಲ್ಲಿ ತೊಗರಿ, ಸೋಯಾಬಿನ್ ಉದ್ದು, ಹೆಸರು ಮತ್ತಿತರೆ ಬಿತ್ತನೆ ಮಾಡಿ, ಪ್ರಕೃತಿ ವಿಕೋಪದಿಂದ ನಷ್ಟಕ್ಕೆ ಒಳಗಾಗಿದ್ದ ಜಿಲ್ಲೆಯ ರೈತರಿಗೆ ವಿಮೆ ಪರಿಹಾರ ಜಮಾ ಪ್ರಕ್ರಿಯೆ ಆರಂಭಗೊಂಡಿದೆ. ಉಳಿದ ಸುಮಾರು 85 ಕೋಟಿ ರೂ. ಹಣವೂ ಶೀಘ್ರವೇ ಬಿಡುಗಡೆಯಾಗಲಿದೆ. ಈ ತಿಂಗಳ ಅಂತ್ಯದೊಳಗೆ ?51 ಕೋಟಿ ರೂ.ಗೂ ಅಧಿಕ ಪರಿಹಾರ ಜಿಲ್ಲೆಯ ಎಲ್ಲಾ ತಾಲೂಕಿನ ಅರ್ಹ ರೈತರ ಖಾತೆಗಳಿಗೆ ಹಂತ ಹಂತವಾಗಿ ಜಮಾ ಆಗಲಿದೆ. ರೈತರಿಗೆ ಸಕಾಲದಲ್ಲಿ ಮತ್ತು ವಿಳಂಬವಿಲ್ಲದೆ ನ್ಯಾಯಯುತವಾಗಿ ಬೆಳೆ ವಿಮೆ ಪರಿಹಾರ ದೊರಕಬೇಕು ಎಂದು ಸಚಿವ ಈಶ್ವರ ಖಂಡ್ರೆ ಹಾಗೂ ಸಂಸದ ಸಾಗರ ಖಂಡ್ರೆ ಪ್ರತಿಪಾದಿಸಿದ್ದರು. ರೈತರ ಸಮಸ್ಯೆಗಳ ಕುರಿತಂತೆ ತ್ವರಿತವಾಗಿ ಮೇಲ್ವಿಚಾರಣೆ ನಡೆಸಿ, ಅರ್ಹ ರೈತರಿಗೆ ಶೀಘ್ರ ಪರಿಹಾರ ದೊರಕುವಂತೆ ವಿಶೇಷ ಗಮನ ಹರಿಸಿದ್ದರು.

# ಶಿಶಿಕ್ಷು ಮೇಳದಲ್ಲಿ ಒಟ್ಟು 102 ವಿದ್ಯಾರ್ಥಿಗಳು, 3 ಉದ್ದಿಮೆದಾರರು ಭಾಗಿ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 10 : 14 ಪ್ರಧಾನ ಮಂತ್ರಿ ಹುಮನಾಬಾದನಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ರಾಷ್ಟ್ರೀಯ ಶಿಶಿಕ್ಷು ಮೇಳ" ವನ್ನು (PMNAM) ಆಯೋಜಿಸಲಾಗಿತ್ತು. ಶಿಶಿಕ್ಷು ಮೇಳದಲ್ಲಿ ಒಟ್ಟು 102 ವಿದ್ಯಾರ್ಥಿಗಳು ಹಾಗೂ 3 ಉದ್ದಿಮೆದಾರರು ಭಾಗವಹಿಸಿದೆ ಎಂದು ಹುಮನಾಬಾದ ಸತ್ಯದೀಪ್ತ ಪ್ರೈ ಲಿ ಯು ಎಸ್ ಎಸ್ 'ದಿ ಮ್ಯಾನೇಜರ್ ಪ್ರಸಾದ ಹೆಚ್ ಆರ್ ಅವರು ಹೇಳಿದರು.

ಹುಮನಾಬಾದ ತಾಲ್ಲೂಕಿನ ಜೂನ್ ಇತ್ತೀಚಿನ ನಡೆದ ರಾಷ್ಟ್ರೀಯ ಶಿಶಿಕ್ಷು ಮೇಳದಲ್ಲಿ ಶಿಶಿಕ್ಷು ಮೇಳದಲ್ಲಿ ಒಟ್ಟು 102 ವಿದ್ಯಾರ್ಥಿಗಳು ಹಾಗೂ 3 ಉದ್ದಿಮೆದಾರರು ಭಾಗಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ Apprenticeshipನ ಮಹತ್ವದ ಬಗ್ಗೆ ಮಾಹಿತಿ ನೀಡಿ, ಇಂತಹ ಮೇಳಗಳಲ್ಲಿ ಭಾಗವಹಿಸಿ ಸದುಪಯೋಗ ಪಡೆಯಬೇಕೆಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಪ್ರಭಾರೆ ಪ್ರಾಚಾರ್ಯರಾದ ಶ್ರೀ ನಾಗಭೂಷಣ ಆರ್ ಮಠ ಅವರು ಮಾತನಾಡಿ, ಮುಂದಿನ ಯಶಸ್ವಿ ಜೀವನಕ್ಕೆ ಸಿಕ್ಕ ಅವಕಾಶಗಳ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹುಮನಾಬಾದ ನಿಚಿನೋ ಪ್ರೈ ಲಿ ಮ್ಯಾನೇಜರ್ ಇಮ್ಯಾನ್ಯೂವೇಲ್ ಹೆಚ್.ಆರ್, ಹುಮನಾಬಾದ ಸತ್ಯದೀಪ್ತ ಪ್ರೈ ಲಿ ಕ್ಯಾಡ ಮ್ಯಾಕ್ಸ್ ಮ್ಯಾನೆಜರ್ ಉದ್ದಿಮೇದಾರ ಶರಣಪ್ಪ, ಚೇತನ್ ಉಪಸ್ಥಿತರಿದ್ದರು. ವಿವಿಧ ಕ್ಷೇತ್ರದ ಉದ್ದಿಮೆದಾರರು 34 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಂಡರು. ಶ್ರೀ ಭೀಮಶಾ ಕಿತಲ ಸ್ವಾಗತಿಸಿದರು. ಶ್ರೀಮತಿ ಅರುಣ ಜ್ಯೋತಿ ವಂದಿಸಿದರು ಹಾಗೂ ಶ್ರೀ ಗುಂಡೆರಾವ್ ಕುಲಕರ್ಣಿ ನಿರೂಪಿಸಿ ವಂದಿಸಿದರು.

# ಮತದಾರ ಪಟ್ಟಿ ಪರಿಷ್ಕರಣೆಗೆ ಪಟ್ಟಣದ ಸಾರ್ವಜನಿಕರು ಸಹಕರಿಸಿ: ನಾಗೇಶ್

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ಭಾರತದ ಚುನಾವಣಾ ಆಯೋಗ ಆಯೋಜಿಸಿರುವ ಮತದಾರರ ಸಮಗ್ರ ಪರಿಷ್ಕರಣೆಯು ಇದೇ ತಿಂಗಳಿಂದ ಆರಂಭಗೊಳ್ಳುತ್ತಿದ್ದು ಪಟ್ಟಣದಲ್ಲಿ ಶೇಕಡ 100ರಷ್ಟು ಮತದಾರರ ಪಟ್ಟಿ ಪರಿಷ್ಕರಿಸಿ ಶುದ್ಧವಾದ ಪಟ್ಟಿ ತಯಾರಿಸುವ ಉದ್ದೇಶವನ್ನು ಹೊಂದಲಾಗಿದೆ ಎಂದು ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ ನಾಗೇಶ್ ಹೇಳಿದರು. ಕುಕನೂರ ಪಟ್ಟಣ ಪಂಚಾಯಿತಿ ಕಾರ್ಯಾಲಯದ ಸಭಾಂಗಣದಲ್ಲಿ ಆಯೋಜಿಸಿದ್ದ ಸಭೆಯನ್ನು ಉದ್ದೇಶಿಸಿ ಮುಖ್ಯ ಅಧಿಕಾರಿ ನಾಗೇಶ್ ಮಾತನಾಡುತ್ತಾ ಪ್ರತಿ ವಾರ್ಡ್ಗಳಲ್ಲಿ ಸದಸ್ಯರು ಮತದಾನದ ಜಾಗೃತಿ ವಹಿಸಬೇಕು, ಜಿಲ್ಲಾಧಿಕಾರಿಗಳ ಆದೇಶದಂತೆ ಬಿ ಎಲ್ ಓ ಗಳಿಗೆ ಕಾರ್ಯನಿರ್ವಹಿಸುವಂತೆ ಸೂಚನೆ ಹಾಗೂ ತರಬೇತಿಯನ್ನು ನೀಡಲಾಗಿದ್ದು ತಿಂಗಳ ಕೊನೆಯಲ್ಲಿ ಕಾರ್ಯ ಪ್ರಾರಂಭಿಸಲಾಗುವುದು 18 ವರ್ಷ ತುಂಬಿದ ಪ್ರತಿಯೊಬ್ಬರು ಮತದಾನದಲ್ಲಿ ಪಾಲ್ಗೊಳ್ಳುವಂತೆ ಕ್ರಮ ಕೈಗೊಳ್ಳಬೇಕು 18 ವರ್ಷ ತುಂಬಿದವರು ಯಾರು ಮತದಾರ ಪಟ್ಟಿಯಿಂದ ಯಾರು ವಂಚಿತರಾಗದಂತೆ ನಿಗವಹಿಸಬೇಕೆಂದು ಹೇಳಿದರು. ಈಗಾಗಲೆ ಬಹುತೇಕವಾಗಿ ಮ್ಯಾಪಿಂಗ್ ಹಾಗೂ ಪ್ರೋಜನಿಂಗ್ ಕಾರ್ಯ ಮುಗಿದಿದೆ. ಸ್ಥಳಾಂತರ, ವಲಸೆ, ಮರಣ, ನಕಲು ಮತದಾರರ ಹೆಸರುಗಳು ಪಟ್ಟಿಯಲ್ಲುನುಸುಳದಂತೆ ಕಾಪಾಡುವುದರ ಜೊತೆಗೆ ಗೌಪ್ಯತೆ ಕಾಪಾಡಬೇಕು.

ಮ್ಯಾಪಿಂಗ್ ಆಗದವರ ಅಗತ್ಯ ದಾಖಲೆಗಳನ್ನು ಪಡೆದುಕೊಂಡು ಪೂರ್ಣಗೊಳಿಸಿ ಎಂದು ಹೇಳಿದರು.

ಈ ವೇಳೆಯಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಲೀಲಾವತಿ ಮುಧೋಳ, ಸ್ಥಾಯಿ ಸಮಿತಿ ಅಧ್ಯಕ್ಷ ಸಿರಾಜುದ್ದೀನ್ ಕರಮುಡಿ, ಪಟ್ಟಣ ಪಂಚಾಯತಿ ಸದಸ್ಯರು ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.



ಕಲಬುರಗಿ: ಜಿಲ್ಲೆಯಲ್ಲಿ ಕಳುವಾದ, ಮರೆತುಹೋದ, ಕಾಣೆಯಾದ 237 ಮೊಬೈಲುಗಳನ್ನು ಸಿಇಐಆರ್ ತಂತ್ರಾಂಶದ ಮೂಲಕ ಪತ್ತೆ ಹಚ್ಚಿ ಸಂಬಂಧಿಸಿದವರಿಗೆ ವಿತರಿಸುವ ಕಾರ್ಯಕ್ರಮ ನಗರದ ಪೊಲೀಸ್ ಭವನದಲ್ಲಿ ಜರುಗಿತು. ಎಸ್ಪಿ ಅಣ್ಣೂರು ಶ್ರೀನಿವಾಸಲು ಮತ್ತು ಪೊಲೀಸ್ ಇಲಾಖೆ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಪಾಯಕಾರಿ ಕ್ರೀಡೆಗಳಲ್ಲಿ ಅಲ್ಪ ವಯಸ್ಸಿನ ಮಕ್ಕಳು ಭಾಗವಹಿಸದಂತೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.10–ರಾಜ್ಯದ ಜಿಲ್ಲೆ, ತಾಲೂಕು ಹಾಗೂ ಗ್ರಾಮಗಳಲ್ಲಿ ನಡೆಸಲಾಗುವ ಜಲ್ಲಿ ಕಟ್ಟು, ಕಂಬಳ, ಮಂಜು ವಿರಟ್ಟು, ಗೂಳಿ ಕಾಳಗ, ಎತ್ತಿನ ಬಂಡಿ ಓಟ, ಟಗರು ಕಾಳಗ ಕಾರ್ಯಕ್ರಮಗಳಲ್ಲಿ ಮಕ್ಕಳ ಭಾಗವಹಿಸುವಿಕೆ/ ವೀಕ್ಷಣೆ ಅಪಾಯಕಾರಿಯಾಗಿದ್ದು, ಇಂತಹ ಅಪಾಯಕಾರಿ ಕ್ರೀಡೆಗಳಲ್ಲಿ ಅಲ್ಪ ವಯಸ್ಸಿನ ಮಕ್ಕಳು ಭಾಗವಹಿಸದಂತೆ ಮತ್ತು ಕಿರಿಯ ವಯಸ್ಸಿನ ಮಕ್ಕಳು ಹಾಗೂ 16 ವರ್ಷದೊಳಗಿನ ಮಕ್ಕಳು ವೀಕ್ಷಣೆಗಾಗಿ ಅಥವಾ ಆಟದ ಸ್ಥಳದಲ್ಲಿ ಬಾರದಂತೆ ನಿರ್ಬಂಧಿಸಬೇಕೆಂದು ಪೋಷಕರು ಹಾಗೂ ಸಾರ್ವಜನಿಕರಿಗೆ ಕಲಬುರಗಿ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

ಇಂತಹ ಆಟೋಟ ಸ್ಪರ್ಧೆಗಳಲ್ಲಿ ಪ್ರಾಣಿಗಳನ್ನು ಬಳಸುತ್ತಿದ್ದು, ಪ್ರಾಣಿಗಳು ಉತ್ತೇಜನಗೊಂಡು ಕೆಲವೊಮ್ಮೆ ಸಾರ್ವಜನಿಕರ ಮೇಲೆ ಹಲ್ಲೆ ಮಾಡುವ ಸಂದರ್ಭಗಳು ಉಂಟಾಗಿದ್ದು, ಇಂತಹ ಸಂದರ್ಭದಲ್ಲಿ ಮಕ್ಕಳು ತೀವ್ರ ರೀತಿಯ ಹಲ್ಲೆಗೆ ಒಳಗಾಗುತ್ತಿರುವುದು, ಕೆಲವೊಮ್ಮೆ ಮಾರಣಾಂತಿಕವಾಗಿಯೂ ಹಲ್ಲೆಗೊಳಗಾಗಿ ಸಾವು ಸಂಭವಿಸುವ ಸಂಭವವಿರುತ್ತದೆ ಎಂದು ಕಲಬುರಗಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಫಜಲಪುರ: ಲ್ಯಾಟರಲ್ ಸ್ಕೀಂ ಮೂಲಕ ಡಿಪ್ಲೋಮಾ 2ನೇ ವರ್ಷದ 3ನೇ ಸೆಮಿಸ್ಟರ್‌ಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.10:2026ನೇ ಶೈಕ್ಷಣಿಕ ವರ್ಷಕ್ಕೆ ಎರಡು ವರ್ಷಗಳ ಐ.ಟಿ.ಐ ಮತ್ತು ಎರಡು ವರ್ಷಗಳ ಪಿ.ಯು.ಸಿ. ವಿಜ್ಞಾನ/ ತಾಂತ್ರಿಕ ವಿಷಯಗಳಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಲ್ಯಾಟರಲ್ ಸ್ಕೀಂ ಮೂಲಕ ಡಿಪ್ಲೋಮಾ 2ನೇ ವರ್ಷದ 3ನೇ ಸೆಮಿಸ್ಟರ್ ಪ್ರವೇಶಕ್ಕಾಗಿ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ ಎಂದು ಅಫಜಲಪುರ ಸರ್ಕಾರಿ ಪಾಲಿಟೆಕ್ನಿಕ್‌ನ ಪ್ರಾಚಾರ್ಯರು ತಿಳಿಸಿದ್ದಾರೆ.

ಕೋರ್ಸ್‌ಗಳ ವಿವರ ಇಂತಿದೆ: ಮೆಕ್ಯಾನಿಕಲ್ ಇಂಜಿನಿಯರಿಂಗ್, ಸಿವಿಲ್ ಇಂಜಿನಿಯರಿಂಗ್, ಇಲೆಕ್ಟ್ರಾನಿಕ್ಸ್ ಆಂಡ್ ಕಮ್ಯುನಿಕೇಷನ್ ಇಂಜಿನಿಯರಿಂಗ ಹಾಗೂ ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್.

ಅರ್ಹ ಆಸಕ್ತ ವಿದ್ಯಾರ್ಥಿಗಳು ಮೇಲ್ಕಂಡ ಕೋರ್ಸ್‌ಗಳಿಗೆ 2026ರ ಜೂನ್ 20 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ತಾತ್ಕಾಲಿಕ ಮೆರಿಟ್ ಪಟ್ಟಿಯನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಜೂನ್ 23ರಂದು ಹಾಗೂ ಅಂತಿಮ ಮೆರಿಟ್ ಪಟ್ಟಿಯನ್ನು ಜೂನ್ 30ರಂದು ಪ್ರಕಟಿಸಲಾಗುತ್ತದೆ. ಮೆರಿಟ್ ಪಟ್ಟಿಯನುಸಾರ ಸೀಟುಗಳ ಲಭ್ಯತೆಯಂತೆ ಆಫ್‌ಲೈನ್ ಮೂಲಕ ಆಯ್ಕೆಯಾದ ವಿದ್ಯಾರ್ಥಿಗಳು 2026ರ ಜುಲೈ 1 ರಿಂದ 4 ರೊಳಗಾಗಿ ಶುಲ್ಕ ಪಾವತಿಸಿ ಪ್ರವೇಶ ಪಡೆದುಕೊಳ್ಳಬೇಕು. ಪ್ರವೇಶ ಸಮಯದಲ್ಲಿ ಶೈಕ್ಷಣಿಕ ಅರ್ಹತೆಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲೆಗಳನ್ನು ಸಲ್ಲಿಸಬೇಕು.

ಮೇಲಿನ ಅವಧಿಯ ನಂತರದಲ್ಲಿ ಸೀಟುಗಳು ಖಾಲಿ ಉಳಿದಲ್ಲಿ ಅಂತಹ ಸೀಟುಗಳನ್ನು ಪುನಃ ಮೆರಿಟ್ ಆಧಾರದ ಮೇಲೆ 2026ರ ಜುಲೈ 6 ರಿಂದ 10ವರೆಗೆ ಹಂಚಿಕೆ ಮಾಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಚಾರ್ಯರಾದ ಡಾ.ಪ್ರಭುದೇವ ಎಂ.ಎಸ್.–9449381159 ಹಾಗೂ ಪ್ರವೇಶ ತಂಡದ ಮುಖ್ಯಸ್ಥ ಸುರೇಶ ಶಟಗಾರ–9886012965 ಹಾಗೂ ಕುಲಸಚಿವ ಶಿವಶರಣಪ್ಪ ಗೌರ–9620182293 ಗೆ ಸಂಪರ್ಕಿಸಲು ಅಥವಾ ಸಂಸ್ಥೆಯ ಕಚೇರಿಯ ಅವಧಿಯಲ್ಲಿ ಖುದ್ದಾಗಿ ಸಂಪರ್ಕಿಸಲು ಕೋರಲಾಗಿದೆ.

# ಸತ್ಯ ಹೇಳಿದ್ದಕ್ಕೆ ಪ್ರಕರಣ ದಾಖಲಿಸಲಾಗಿದೆ ಹಿಂಪಡೆಯದಿದ್ದರೆ ಹೋರಾಟ: ಕಲ್ಲೂರ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಅವರ ವಿರುದ್ಧ ದಾಖಲಿಸಿರುವ ಪ್ರಕರಣವನ್ನು ತಕ್ಷಣವೇ ಹಿಂಪಡೆಯಬೇಕು. ಇಲ್ಲವಾದಲ್ಲಿ ಬಿಜೆಪಿ ಕಾರ್ಯಕರ್ತರು ಹಾಗೂ ಸಾರ್ವಜನಿಕರು ಹೋರಾಟ ನಡೆಸಬೇಕಾಗುತ್ತದೆ ಎಂದು ಬಿಜೆಪಿ ಓಬಿಸಿ ಮೋರ್ಚಾ ನಗರಾಧ್ಯಕ್ಷ ದೇವಿಂದ್ರ ದೇಸಾಯಿ ಕಲ್ಲೂರ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಳಂದ ಪಟ್ಟಣದಲ್ಲಿ ಪ್ರತಿಭಟನಾಕಾರರ ಮೇಲೆ ಕಲ್ಲು ತೂರಾಟ ನಡೆಸಿದವರ ವಿರುದ್ಧದ ಪ್ರಕರಣಗಳನ್ನು ಸರ್ಕಾರ ಹಿಂಪಡೆದಿರುವುದು ಖಂಡನೀಯ. ಅನ್ಯ ಕೋಮಿನವರ ಓಲೈಕೆ ಮತ್ತು ತುಷ್ಟೀಕರಣ ರಾಜಕಾರಣದ ಭಾಗವಾಗಿ ಸರ್ಕಾರ ಈ ಕ್ರಮ ಕೈಗೊಂಡಿದೆ ಎಂದು ಆರೋಪಿಸಿದರು.

ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಅವರು ತಮ್ಮ ಭಾಷಣದಲ್ಲಿ 1983–84ರ ಚುನಾವಣಾ ಸಂದರ್ಭದಲ್ಲಿ ಮಾಜಿ ಶಾಸಕ ಖಮರೂಲ್ ಇಸ್ಲಾಂ ಅವರು ನೀಡಿದ್ದ ಹೇಳಿಕೆಯನ್ನು ಉಲ್ಲೇಖಿಸಿ ಮಾತನಾಡಿದ್ದರು. ಆದರೆ ಸತ್ಯವನ್ನು ಹೇಳಿದ ಕಾರಣಕ್ಕೆ ಅವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ದೂರಿದರು. ಅಂದು ಮಾಜಿ ಕಾರ್ಮಿಕ ಸಚಿವರು ಖಮರೂಲ್ ಇಸ್ಲಾಂ ಅವರ ವಿರುದ್ಧ ಪ್ರಕರಣ ದಾಖಲಿಸಿದ್ದರು. ಬಳಿಕ ಪೊಲೀಸ್ ಇಲಾಖೆಯ ತನಿಖೆ ನಡೆದು, ಅಂದಿನ ಸರ್ಕಲ್ ಇನ್ಸ್ಪೆಕ್ಟರ್ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನೂ ಸಲ್ಲಿಸಿದ್ದರು ಎನ್ನಲಾಗಿದೆ.

# ಇಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.10–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ ಕೆ.ಇ.ಬಿ. ಕ್ವಾರ್ಟರ್ಸ್ ಫೀಡರ್ ವ್ಯಾಪ್ತಿಯಲ್ಲಿ ನಿರ್ವಹಣಾ ಕಾರ್ಯಕೈಗೊಳ್ಳಲಿರುವ ಪ್ರಯುಕ್ತ ಇದೇ ಜೂನ್ 11ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ. ಕೆ.ಇ.ಬಿ ಕ್ವಾರ್ಟರ್ಸ್ ಫೀಡರ್: ಶಾಂತಿ ನಗರ, ವಿದ್ಯಾನಗರ, ಅಶೋಕ ನಗರ, ಎಮ್.ಎಸ್.ಕೆ. ಮಿಲ್ ಜಿಡಿಎ, ಖಾದಿರ್ ಚೌಕ್, ವಡ್ಡರಗಲ್ಲಿ ಸುತ್ತಮುತ್ತಲಿನ ಪ್ರದೇಶಗಳು ಹಾಗೂ ಅಂಬೇಡ್ಕರ ಹಾಸ್ಟೇಲ್.

# ಗುರುಮಠಕಲ್ ರೈತ ಸಂಪರ್ಕ ಕೇಂದ್ರದಲ್ಲಿ ತೊಗರಿ ಬೀಜ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

2026–27ನೇ ಸಾಲಿನ ಒಂಕ ಯೋಜನೆಯಡಿ ತಾಲೂಕಿನ ತಾತಾಳಗೇರ ಗ್ರಾಮದ ರೈತರಿಗೆ ಉಖಉ–152 ತೊಗರಿ ಬಿತ್ತನೆ ಬೀಜಗಳನ್ನು ಗುರುಮಠಕಲ್ ರೈತ ಸಂಪರ್ಕ ಕೇಂದ್ರದಲ್ಲಿ ಸಹಾಯಕ ಕೃಷಿ ನಿರ್ದೇಶಕರಾದ ಸುರೇಶ್ ಅವರು ಬುಧವಾರ ವಿತರಿಸಿದರು.

ಈ ಸಂದರ್ಭದಲ್ಲಿ ರೈತರಿಗೆ ಉತ್ತಮ ಗುಣಮಟ್ಟದ ಬೀಜಗಳ ಬಳಕೆ, ತೊಗರಿ ಬೆಳೆ ನಿರ್ವಹಣೆ ಹಾಗೂ ಹೆಚ್ಚಿನ ಇಳುವರಿ ಪಡೆಯುವ ಕುರಿತು ಮಾಹಿತಿ ನೀಡಲಾಯಿತು. ಯೋಜನೆಯ ಸದುಪಯೋಗವನ್ನು ಪಡೆದು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವಂತೆ ರೈತರಿಗೆ ಸಲಹೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಸಿಬ್ಬಂದಿ ಹಾಗೂ ತಾತಾಳಗೇರ ಗ್ರಾಮದ ರೈತರು ಉಪಸ್ಥಿತರಿದ್ದರು.

# ಟಿ.ಎ. ನಾರಾಯಣಗೌಡರ ಜನ್ಮದಿನ ಅಂಗವಾಗಿ ಸಸಿ ನೆಟ್ಟು, ವಿದ್ಯಾರ್ಥಿಗಳಿಗೆ ಅಂಕಲಿಪಿ ವಿತರಣೆ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡರ 60ನೇ ಜನ್ಮದಿನದ ಅಂಗವಾಗಿ ಕರವೇ ಗುರುಮಠಕಲ್ ತಾಲೂಕು ಘಟಕದ ವತಿಯಿಂದ ಎಲ್ಹೇರಿ ಗ್ರಾಮದ ನವ ನಂದಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ವಿಶೇಷ ಕಾರ್ಯಕ್ರಮ ನಡೆಯಿತು.

ತಾಲೂಕು ಅಧ್ಯಕ್ಷ ಶರಣಬಸಪ್ಪ ಎಲ್ಲೇರಿ ಅವರ ನೇತೃತ್ವದಲ್ಲಿ ಸುಮಾರು 200 ಸಸಿಗಳನ್ನು ನೆಡಲಾಯಿತು. ಅಲ್ಲದೆ 200 ವಿದ್ಯಾರ್ಥಿಗಳಿಗೆ ಕನ್ನಡ ಅಂಕಲಿಪಿ ಹಾಗೂ ಪೆನ್ನುಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶರಣಬಸಪ್ಪ ಎಲ್ಲೇರಿ, ಕನ್ನಡ ನಾಡು, ನುಡಿ ಮತ್ತು ಕನ್ನಡಿಗರ ಹಿತಕ್ಕಾಗಿ ಟಿ.ಎ. ನಾರಾಯಣಗೌಡರು ಹಲವು ವರ್ಷಗಳಿಂದ ಹೋರಾಟ ಮಾಡುತ್ತಿದ್ದು, ಅವರ ಮಾರ್ಗದರ್ಶನದಲ್ಲಿ ಕಾರ್ಯನಿರ್ವಹಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು. ಕನ್ನಡ ಶಾಲೆಗಳ ಉಳಿವು ಹಾಗೂ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಎಲ್ಲರೂ ಶ್ರಮಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಸವರಾಜ ಗೌಡ ಶಿವರಾಜ್, ಸೋಮನಾಥ್ ರೆಡ್ಡಿ ಬೋರೆಡ್ಡಿ, ಶಂಕ್ರಪ್ಪ ಗೌಡ ಶಿವರಾಯ್, ಡಾ. ಸಿದ್ದಲಿಂಗ ರೆಡ್ಡಿ ಕಂದುಕೂರು, ಪ್ರಕಾಶ್ ಪಾಟೀಲ್ ಜೈಗ್ರಾಮ್, ಮೌನೇಶ್ ಮಾದ್ವಾರ್, ದೇವಸಿಂಗ್, ಜಗದೀಶ್ ನಸಲುವಾದಿ, ಶರಣು ಮೇಧ, ವೆಂಕಟೇಶ್ ಚಿಟ್ಕಂಪಳ್ಳಿ ಸೇರಿದಂತೆ ಕರವೇ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ವಿಕಲಚೇತನರ ಸಾಧನ ಸಲಕರಣೆಗಳ ಮಾಪನ ಶಿಬಿರ ಯಶಸ್ವಿ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಜೂ 10: ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಎಪಿಡಿ ಸಂಸ್ಥೆಯ ವತಿಯಿಂದ ಆಯೋಜಿಸಲಾದ ವಿಕಲಚೇತನರ ಸಾಧನ ಸಲಕರಣೆಗಳ ಮಾಪನ ಶಿಬಿರ ಮಂಗಳವಾರ ಯಶಸ್ವಿಯಾಗಿ ನಡೆಯಿತು.


ವಿಕಲಚೇತನರ ಅಗತ್ಯಗಳಿಗೆ ಅನುಗುಣವಾಗಿ ಸೂಕ್ತ ಸಾಧನಗಳನ್ನು ಒದಗಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾದ ಈ ಶಿಬಿರದಲ್ಲಿ ವಿಶೇಷ ಚೇತನ ಮಕ್ಕಳಿಗೆ ಹೆಚ್ಚಿನ ಪ್ರಾಮುಖ್ಯತೆ ನೀಡಲಾಯಿತು.

ಶಿಬಿರದಲ್ಲಿ ವೀಲ್‌ಚೇರ್, ಆಕ್ಸಿಲರಿ ಕ್ರಚ್‌ಗಳು, ಸಿಪಿ ಚೇರ್, ಕೃತಕ ಅಂಗಗಳು (ಆರ್ಟಿಫಿಷಿಯಲ್ ಲಿಂಬ್), ಕಾರ್ನರ್ ಚೇರ್, ವಾಕರ್, ಸ್ಟಿಕ್, ಗೇಟರ್ಸ್ ಸೇರಿದಂತೆ ವಿವಿಧ ಸಾಧನಗಳಿಗಾಗಿ ಮಾಪನ ಕೈಗೊಳ್ಳಲಾಯಿತು. ಜೊತೆಗೆ ತೀವ್ರ ವಿಕಲಚೇತನತೆ ಹೊಂದಿರುವ ಐದು ಜನರ ಮನೆಗಳಿಗೆ ಭೇಟಿ ನೀಡಿ, ಅವರ ಸುಲಭ ಸಂಚಾರ ಹಾಗೂ ಬಳಕೆಗೆ ಅನುಕೂಲವಾಗುವ ವಿಕಲಚೇತನ ಸ್ನೇಹಿ ಶೌಚಾಲಯಗಳ ನಿರ್ಮಾಣಕ್ಕಾಗಿ ಸ್ಥಳ ಪರಿಶೀಲನೆ ಮತ್ತು ಮಾಪನ ಕಾರ್ಯವೂ ನಡೆಸಲಾಯಿತು.

ಯದ್ಲಾಪುರ, ಎಲ್ಹೇರಿ, ಚಂಡರಿಕಿ ಹಾಗೂ ಮಧ್ವಾರ ಸೇರಿದಂತೆ ವಿವಿಧ ಗ್ರಾಮಗಳ ವಿಕಲಚೇತನರ ಮನೆಗಳಿಗೆ ಭೇಟಿ ನೀಡಿ, ಅವರ ವೈಯಕ್ತಿಕ ಅಗತ್ಯಗಳಿಗೆ ತಕ್ಕಂತೆ ಮಾಪನ ಕೈಗೊಳ್ಳುವುದು ಶಿಬಿರದ ವಿಶೇಷತೆಯಾಗಿತ್ತು. ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಮಕ್ಕಳು ಸೇರಿದಂತೆ ಒಟ್ಟು 21 ಮಂದಿ ವಿಕಲಚೇತನರು ಶಿಬಿರದ ಸೌಲಭ್ಯವನ್ನು ಪಡೆದುಕೊಂಡರು.ಈ ಸಂದರ್ಭದಲ್ಲಿ ಎಪಿಡಿ ಸಂಸ್ಥೆಯ ತಾಲೂಕು ಸಂಯೋಜಕರಾದ ವಿರೂಪಾಕ್ಷಿ ಮಾಲಿಪಾಟೀಲ್, ಬೆಂಗಳೂರಿನಿಂದ ಆಗಮಿಸಿದ್ದ ತಾಂತ್ರಿಕ ಸಿಬ್ಬಂದಿಗಳಾದ ರಶ್ಮಿತಾ, ಜೈವೇಲು ಹಾಗೂ ಕುಮಾರ, ಫಿಜಿಯೋಥೆರಪಿಸ್ಟ್‌ಗಳಾದ ಅತೀಸ್ ಕುಮಾರ್, ವೆಂಕಟೇಶ್, ಶಿಲ್ಪಾ, ಸುರೇಶ್ ಮತ್ತು ನಾಗಮಣಿ, ಫೆಸಿಲಿಟೇಟರ್‌ಗಳಾದ ಲಕ್ಷ್ಮೀ ಹಾಗೂ ಯಲ್ಲಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದು ಶಿಬಿರದ ಯಶಸ್ಸಿಗೆ ಸಹಕರಿಸಿದರು.

# ರಾಜಕೀಯದಲ್ಲಿ ಈಡಿಗರನ್ನು ಕಡೆಗಣಿಸಿದರೆ ಸಹಿಸಲಾಗದು : ಪ್ರಣವಾನಂದ ಸ್ವಾಮೀಜಿ

• ಮಲ್ಲಮ್ಮ ನುಡಿ ವಾರ್ತೆಗೋಕರ್ಣ



ರಾಜ್ಯದಲ್ಲಿ ಜನಸಂಖ್ಯೆಯಲ್ಲಿ ನಾಲ್ಕನೇ ಸಂಖ್ಯೆಯಲ್ಲಿರುವ ಈಡಿಗರನ್ನು ಮೊದಲ ಸಚಿವ ಸಂಪುಟದಲ್ಲಿ ಸ್ಥಾನ ನೀಡದಿರುವುದು ಖೇದಕರ. ಸರ್ಕಾರ ಈಡಿಗರನ್ನು ಕಡೆಗಣಿಸಿದರೆ ಈಡಿಗರು ಸುಮ್ಮನೆ ಕೂರುವುದಿಲ್ಲ. ಮುಂದಿನ ಸಚಿವ ಸಂಪುಟದಲ್ಲಿ ಇಬ್ಬರು ಈಡಿಗರಿಗೆ ಸಚಿವ ಸ್ಥಾನ ನೀಡಬೇಕು ಎಂದು ಶ್ರೀ ನಾರಾಯ–ಣಗುರು ಶಕ್ತಿಪೀಠದ ಶ್ರೀ ಪ್ರಣವಾನಂದ ಸ್ವಾಮೀಜಿ ಅವರು ಹೇಳಿದರು.

ಈ ಕುರಿತು ಬುಧವಾರ ಗೋಕರ್ಣದ ಪುಣ್ಯಶ್ರಮದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಸಮಾಜದ ಜಾಗ್ರತಿಗಾಗಿ ಈಗಾಗಲೇ ಸಾಕಷ್ಟು ಕಾರ್ಯಕ್ರಮಗಳನ್ನು ಮಾಡಲಾಗಿದೆ. ರಾಜ್ಯದ್ಯಂತ ರಾಷ್ಟ್ರೀಯ ಈಡಿಗ ಮಹಾಮಂಡಳಿ ತನ್ನ ಹಿಡಿತವನ್ನು ಹೊಂದಿದೆ. ಹೀಗಾಗಿ ಉತ್ತರ ಕನ್ನಡ ಜಿಲ್ಲೆಯಲ್ಲಿಯೂ ಕೂಡ ಸೂಕ್ತ ವ್ಯಕ್ತಿಯನ್ನು ಆಯ್ಕೆ ಮಾಡಿ ಇಡಲಾಗುವುದು ಎಂದರು.

ಗೋಕರ್ಣದ ಪುಣ್ಯಾಶ್ರಮದಲ್ಲಿ ರಾಷ್ಟ್ರೀಯ ಈಡಿಗ ಮಹಾಮಂಡಳಿಯ 2026– 27 ನೇ ಸಾಲಿನ ರಾಜ್ಯ, ಜಿಲ್ಲಾ, ತಾಲೂಕು ಮಟ್ಟದ ಪದಾಧಿಕಾರಿಗಳ ಆಯ್ಕೆ ಮತ್ತು 5 ನೇ ವರ್ಷದ ವಾರ್ಷಿಕ ಸಭೆ ಹಾಗೂ ಚಿಂತನ ಶಿಬಿರ ನಡೆಯಲಿದೆ. ರಾಜ್ಯದ ವಿವಿಧ ಜಿಲ್ಲಾ ಹಾಗೂ ತಾಲೂಕುಗಳಿಂದ ಪದಾಧಿಕಾರಿಗಳು ಆಗಮಿಸಲಿದ್ದಾರೆ. ಈ ಸಭೆಯಲ್ಲಿ ಸಮಾಜಕ್ಕೆ ಅಗತ್ಯವಿರುವ ನಿರ್ಣಯಗಳನ್ನು ತೆಗೆದುಕೊಳ್ಳಲಾಗುವುದು ಎಂದು ಪ್ರಣವಾನಂದ ಸ್ವಾಮೀಜಿಯವರು ಹೇಳಿದರು.

# ಜು. 11ರಂದು ರಾಷ್ಟ್ರೀಯ ಲೋಕ ಅದಾಲತ್: ನ್ಯಾ.ಸಿದ್ದರಾಮಪ್ಪ ಕಲ್ಯಾಣರಾವ್

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 10 : ವ್ಯಾಜ್ಯಪೂರ್ವ ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ಪ್ರಕರಣಗಳನ್ನು ತಕ್ಷಣ ಇತ್ಯರ್ಥಪಡಿಸುವ ಸಲುವಾಗಿ ರಾಯಚೂರು ನಗರ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಲ್ಲಿ ಜುಲೈ 11ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದ್ದು, ಇದರ ಸದುಪಯೋಗವನ್ನು ಸಾರ್ವಜನಿಕರು ಪಡೆಯಬೇಕೆಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ತಿಳಿಸಿದ್ದಾರೆ.ಜೂನ್ 10ರ ಬುಧವಾರದಂದು ನಗರದ ಜಿಲ್ಲಾ ನ್ಯಾಯಾಲಯದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ



ಅವರು ಮಾತನಾಡಿದರು.ಜುಲೈ 11ರ ಶನಿವಾರ ಬೆಳಿಗ್ಗೆ 10ಗಂಟೆಗೆ ಜಿಲ್ಲಾ ನ್ಯಾಯಾಲಯದಲ್ಲಿ ಹಾಗೂ ರಾಯಚೂರು ಜಿಲ್ಲೆಯ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್‌ನ್ನು ನಿಗದಿಪಡಿಸಲಾಗಿದೆ. ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಸಿವಿಲ್ ಮತ್ತು ಕ್ರಿಮಿನಲ್ (ರಾಜಿಯಾಗುವಂತಹ) ಮೊಕ್ಕದಮ್ಮೆಗಳನ್ನು, ಅಲ್ಲದೇ ಮೋಟಾರ ವಾಹನ ಕಾಯ್ದೆ, ಕುಟುಂಬ ನ್ಯಾಯಾಲಯದ ಪ್ರಕರಣಗಳು ಮತ್ತು ಎಲ್ಲಾ ಬಗೆಯ ಪ್ರಕರಣಗಳನ್ನು (ಕೇಸುಗಳನ್ನು) ಲೋಕ ಅದಾಲತ್ ಮುಖಾಂತರ ಇತ್ಯರ್ಥಗೊಳಿಸಲಾಗುತ್ತಿದ್ದು, ವಕೀಲರು, ಕಕ್ಷಿದಾರರು. ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳನ್ನು (ಕೇಸುಗಳನ್ನು) ರಾಷ್ಟ್ರೀಯ ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸಿಕೊಳ್ಳಲು ಸಾರ್ವಜನಿಕರಿಗೆ ಇದೊಂದು ಸದಾವಕಾಶವಾಗಿದೆ ಎಂದರು. ಎಲ್ಲಾ ವಕೀಲರು, ಕಕ್ಷಿದಾರರು, ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯಪೂರ್ವ ಎಲ್ಲಾ ಬಗೆ–ಯ ಕೇಸುಗಳನ್ನು ಲೋಕ ಅದಾಲತ್ ನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಇತ್ಯರ್ಥಪಡಿಸಿಕೊಳ್ಳುವಂತೆ ಹೇಳಿದರು.

# ಶೇ.50ರಷ್ಟು ದಂಡದ ಮೊತ್ತ ರಿಯಾಯಿತಿಗೆ ಅವಕಾಶ: ನ್ಯಾ.ಸಿದ್ದರಾಮಪ್ಪ ಕಲ್ಯಾಣರಾವ್

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 10 : ರಾಯಚೂರು ಜಿಲ್ಲೆಯಲ್ಲಿ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳಲ್ಲಿ ಕಾನೂನಾತ್ಮಕವಾಗಿ ವಿಧಿಸಲಾಗಿರುವ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯಿತಿ ನೀಡಿ, ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಸಾರ್ವಜನಿಕರಿಗೆ ಇದೇ ಜೂನ್ 21 ರಿಂದ ಜುಲೈ 10ರವರೆಗೆ ಸುವರ್ಣಾವಕಾಶ ಕಲ್ಪಿಸಲಾಗಿದೆ ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಹೇಳಿದರು.

ಜೂನ್ 10ರ ಬುಧವಾರ ದಂದು ನಗರದ ಜಿಲ್ಲಾ ನ್ಯಾಯಾಲಯದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಸಂಚಾರ ನಿಯಮ ಉಲ್ಲಂಘನೆಯಂತಹ ಅಪರಾಧಗಳು ಸಂಭವಿಸುತ್ತವೆ. ಅಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ದೊಡ್ಡದು ಮಾಡುವ ಬದಲು, ಸಾರ್ವಜನಿಕರಿಗೆ ಸುಲಭವಾಗಿ ಮುಕ್ತಾಯಗೊಳಿಸಿಕೊಳ್ಳಲು ಕರ್ನಾಟಕ ಸರ್ಕಾರದ ಜೊತೆ ಚರ್ಚಿಸಿ ಈ ರಿಯಾಯಿತಿ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಮೇ 2026 ಕ್ಕಿಂತ ಮೊದಲು ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್‌ಗಳಲ್ಲಿ ದಾಖಲಾಗಿ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಹಾಗೂ ಸಾರಿಗೆ ಇಲಾಖೆಯಲ್ಲಿ 1991 ರಿಂದ 2022 ರವರೆಗೆ ದಾಖಲಾಗಿರುವ ಪ್ರಕರಣಗಳಿಗೆ ಶೇ.50ರಷ್ಟು ರಿಯಾಯಿತಿ ಅನ್ವಯವಾಗಲಿದ್ದು, ಸಾರ್ವಜನಿಕರು ನಿಗದಿತ ದಂಡದ ಅರ್ಧದಷ್ಟು ಮೊತ್ತವನ್ನು ಪಾವತಿಸಿ ತಮ್ಮ ಪ್ರಕರಣಗಳನ್ನು ಮುಕ್ತಾಯಗೊಳಿಸಿಕೊಳ್ಳಬಹುದು ಎಂದರು.

6070 ಬಾಕಿ ಪ್ರಕರಣ: ರಾಯಚೂರಿನ ಪ್ರಾದೇಶಿಕ ಸಾರಿಗೆ ಇಲಾಖೆಯಲ್ಲಿ 2011–12ರಲ್ಲಿ 4 ಪ್ರಕರಣ, 2012–13ರಲ್ಲಿ 07 ಪ್ರಕರಣ, 2013–14ರಲ್ಲಿ 21ಪ್ರಕರಣ, 2014–15ರಲ್ಲಿ 34 ಪ್ರಕರಣ, 2015–16ರಲ್ಲಿ 21ಪ್ರಕರಣ, 2016–17ರಲ್ಲಿ 22 ಪ್ರಕರಣ, 2017–18ರಲ್ಲಿ 54 ಪ್ರಕರಣ, 2018–19ರಲ್ಲಿ 80 ಪ್ರಕರಣ, 2019–20ರಲ್ಲಿ 107 ಪ್ರಕರಣ, 2020–21ರಲ್ಲಿ 2946 ಪ್ರಕರಣ, 2021–22ರಲ್ಲಿ 2774 ಪ್ರಕರಣಗಳು ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 6070 ಪ್ರಕರಣಗಳು ಸಾರಿಗೆ ಇಲಾಖೆಯಲ್ಲಿ ಬಾಕಿ ಇವೆ ಎಂದರು.ಇದೇ ಸಂದರ್ಭದಲ್ಲಿ ರಾಯಚೂರಿನ ಪ್ರಾದೇಶಿಕ ಸಾರಿಗೆ ಅಧಿಕಾರಿ ಈರಣ್ಣ, ವಾರ್ತಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಜಿ.ಸುರೇಶ ಸೇರಿದಂತೆ ಇತರರು ಇದ್ದರು.

# ಶಿಕ್ಷಣದಿಂದ ಮಾತ್ರ ಬದಲಾವಣೆ ಸಾದ್ಯ




• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ಶಿಕ್ಷಣದಿಂದ ಮಾತ್ರ ಸಮಾಜದಲ್ಲಿ ಬದಲಾವಣೆ ಸಾದ್ಯಆದ್ದರಿಂದ ಪ್ರತಿಯೋಬ್ಬರು ಶಿಕ್ಷಣವಂತರಾಗಬೇಕು ,ಎಲ್ಲಾ ವೃತ್ತಿಗಳಲ್ಲಿ ಶಿಕ್ಷಕ ವೃತ್ತಿ ಅಪಾರವಾಗಿದೆ ಎಂದು ನಿವೃತ್ತ ಅಧಿಕಾರಿ ಗ್ಯಾನಪ್ಪ ಹುಡೇದ ಅವರು ಜೂ.8 ರಂದು ಜರುಗಿದ ತಾಲೂಕಿನ ಹುಲೇಗುಡ್ಡ ಗ್ರಾಮದಲ್ಲಿ ಸೇವಾ ನಿವೃತ್ತಿ ಹೊಂದಿರುವ ಸ.ಪ್ರ. ದ.ಕಾ.ಯಲಬುರ್ಗಾದ ಪ್ರಾಂಶುಪಾಲ ಕೆ.ಹೆಚ್. ಛತ್ರದ ಅವರ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಅವರು ತೂಕದ ವ್ಯಕ್ತಿತ್ವ,ಉತ್ತಮ ಗುಣಗಳನ್ನು ಅಳವಡಿಸಿಕೊಂಡಿದ್ದರು ಎಂದರು. ವಿದ್ಯಾರ್ಥಿಗಳ ಬಾಳಿನ ಬದುಕಿಗೆ ದಾರಿದೀಪವಾಗಿ ಸರಳ,ಬುದ್ದಿ ಜೀವಿಗಳಾಗಿ ಎಲ್ಲರೋಂದಿಗೆ ಒಂದು ಕುಟುಂಬವರಂತೆ ಸರಳ ಸ್ವಾಭಾವ ಇವರಲ್ಲಿ ಇತ್ತು ಎಂದು ತಾ.ಪಂ.ಮಾಜಿ ಸದಸ್ಯೆ ಸಾವಿತ್ರಿ ಗೋಲ್ಲರ ಮಾತನಾಡಿದರು.ಯಾದವ ಸಮಾಜದ ಗುರು ಡುಮ್ಮಯ್ಯ ಸಾನಿದ್ಯವಹಿಸಿದ್ದರು.

ವಿಧ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಛತ್ರದ ಅವರ ಸೇವೆ ,ಶ್ರಮ ಅದಿಕವಾಗಿದೆ ಇಂದು ಅವರ ನಿವೃತ್ತಿ ಸಂತಸದೊಂದಿಗೆ ವಿದ್ಯಾರ್ಥಿಗಳಿಗೆ ಬೇಸರವಾಗಿದೆ ಅವರ ಅವದಿಯಲ್ಲಿ ಅವರು ಮಾಡಿರುವ ಕಾರ್ಯ ಸಾಧನೆ ಮರೆಯಲು ಆಗುವದಿಲ್ಲ ಎಂದು ಮುಖಂಡ ವೀರನಗೌಡ ಪೊ.ಪಾಟೀಲ್ ಸಸಿಗೆ ನೀರು ಹಾಕಿ ಚಾಲನೆ ನೀಡಿ ಮಾತನಾಡಿದರು.ಈ ವೇಳೆ ರಮೇಶ ಚಿಕ್ಕಗೌಡ್ರ, ಯಂಕಪ್ಪ ಗೋಲ್ಲರ, ದೇವಪ್ಪ ಬಂಡ್ಲಿ, ಎಂ.ಎಫ್,ನಧಾಪ್,ಹುಲಗಪ್ಪ ಬಂಡಿವಡ್ಡರ,ಶರಣಪ್ಪ ಇಟಗಿ ಹಾಗು ವಿದ್ಯಾರ್ಥಿಗಳು ಅನಿಸಿಕೆ ವ್ಯಕ್ತಪಡಿಸಿ ಅವರು ನಡೆದು ಬಂದ ಜೀವನದ ಹಾದಿ ಬಗ್ಗೆ ಯುವಕರು,ಗ್ರಾಮದ ಹಿರಿಯರು ಮಾತನಾಡಿ ಪ್ರೀತಿಯಿಂದ ಸನ್ಮಾನಿಸಿ ಗೌರವಿಸಿದರು..ಸೀನಪ್ಪ ಪೂಜಾರ, ಕರಿಯಪ್ಪ ಗುರಿಕಾರ, ರೇವಣೆಪ್ಪ ಹಿರೇಕುರಬರ,ಹನುಮಂತಪ್ಪ ಭಜೇಂತ್ರಿ ಸೇರಿದಂತೆ ಇತರರು ಇದ್ದರು.

# ಜೂ 21 ರಂದು ವಿಶ್ವ ಯೋಗ ದಿನಾಚರಣೆ ಯಶಸ್ಸಿಗೆ ಜಿಲ್ಲಾಧಿಕಾರಿಗಳ ಕಟ್ಟುನಿಟ್ಟಿನ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ 10: ಸಾರ್ವಜನಿಕರಲ್ಲಿ ದೈಹಿಕ ಮತ್ತು ಮಾನಸಿಕ ಆರೋಗ್ಯದ ಜಾಗೃತಿ ಮೂಡಿಸುವ ಹಾಗೂ ಯೋಗವನ್ನು ದೈನಂದಿನ ಜೀವನದ ಭಾಗವಾಗಿಸಿಕೊಳ್ಳುವ ಉದ್ದೇಶದಿಂದ ಜಿಲ್ಲೆಯಲ್ಲಿ 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅತ್ಯಂತ ಯಶಸ್ವಿಯಾಗಿ ಆಯೋಜಿಸಲು ಜಿಲ್ಲಾಧಿಕಾರಿ ಮಹಮ್ಮದ್ ಇಕ್ರಮುಲ್ಲಾ ಶರೀಫ ಸೂಚಿಸಿದರು. ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಜೂನ್ 21 ರಂದು ಬೆಳಿಗ್ಗೆ 7 ಗಂಟೆಯಿಂದ 7:45 ರವರೆಗೆ ನಗರದ ಡಾ. ಚಂದ್ರಶೇಖರ್ ಪಾಟೀಲ್ ಕ್ರೀಡಾಂಗಣದಲ್ಲಿ ಬೃಹತ್ ಯೋಗ ಪ್ರದರ್ಶನ ಕಾರ್ಯಕ್ರಮಕ್ಕೆ ಬರುವ ಶಾಲಾ–ಕಾಲೇಜು ವಿದ್ಯಾರ್ಥಿಗಳು ಸಾರ್ವಜನಿಕರು ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿಗಳು ಬೆಳಿಗ್ಗೆ 6:30ರ ಒಳಗಾಗಿ ಕ್ರೀಡಾಂಗಣ ತಲುಪಿ ನಿಯೋಜಿತ ಜಾಗಗಳಲ್ಲಿ ಸಿದ್ಧರಿರಬೇಕು ಎಂದರು.

ಕ್ರೀಡಾಂಗಣದಲ್ಲಿ ಯೋಗಾಸನಕ್ಕೆ ಮ್ಯಾಟ್‌ಗಳ ಅಳವಡಿಕೆ, ಶುದ್ಧ ಕುಡಿಯುವ ನೀರಿನ ಸೌಲಭ್ಯ, ತುರ್ತು ಚಿಕಿತ್ಸೆಗಾಗಿ ಆಂಬುಲೆನ್ಸ್ ವ್ಯವಸ್ಥೆ ಹಾಗೂ ಸೂಕ್ತ ಪೊಲೀಸ್ ಭದ್ರತೆಯನ್ನು ಕಲ್ಪಿಸಬೇಕು. ಕ್ರೀಡಾಂಗಣದಲ್ಲಿ ಬೆಳೆದಿರುವ ಹುಲ್ಲನ್ನು ಸಣ್ಣದಾಗಿ ಕತ್ತರಿಸಿ ಇಡೀ ಆವರಣವನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಮಹಾನಗರ ಪಾಲಿಕೆ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ತೋಟಗಾರಿಕೆ ಇಲಾಖೆಯಿಂದ ಕ್ರೀಡಾಂಗಣದ ಸೌಂದರ್ಯೀಕರಣಕ್ಕಾಗಿ 50 ಅಲಂಕಾರಿಕ ಗಿಡಗಳ



ಕುಂಡಗಳನ್ನು ಒದಗಿಸುವಂತೆ ತಿಳಿಸಿದರು.

ಗಿನ್ನೆಸ್ ವಿಶ್ವ ದಾಖಲೆಯ ಪ್ರಯತ್ನ:

ಜೂನ್ 14 ರಂದು ಆನ್‌ಲೈನ್ ಮೂಲಕ ಯೋಗದ ಗಿನ್ನೆಸ್ ವಿಶ್ವ ದಾಖಲೆಯ ಮಹತ್ತರ ಪ್ರಯತ್ನವೊಂದು ನಡೆಯುತ್ತಿದ್ದು, ಜಿಲ್ಲೆಯಿಂದ ಗರಿಷ್ಠ ಸಂಖ್ಯೆಯ ನೋಂದಣಿ ದಾಖಲಾಗಬೇಕಿದೆ. ಇದಕ್ಕಾಗಿ ವೆಬ್ ಪೋರ್ಟಲ್ ಲಿಂಕ್ ಅನ್ನು ಎಲ್ಲಾ ಇಲಾಖೆಗಳ ಗ್ರೂಪ್‌ಗಳಲ್ಲಿ ಹಂಚಿಕೊಳ್ಳಬೇಕು. ವಿಶೇಷವಾಗಿ ಶಿಕ್ಷಣ ಇಲಾಖೆ (ಶಾಲೆಗಳು), ಸಮಾಜ ಕಲ್ಯಾಣ ಇಲಾಖೆ (ವಸತಿ ನಿಲಯಗಳು) ಮತ್ತು ಪೊಲೀಸ್ ಇಲಾಖೆಯ ಸಿಬ್ಬಂದಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು ಹಾಗೂ ಯೋಗ ಮಾಡುವಾಗ ತೆಗೆದ ಫೋಟೋಗಳನ್ನು ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಕಟ್ಟುನಿಟ್ಟಾಗಿ ಆದೇಶಿಸಿದರು.ಜೂನ್ 19 ರಂದು ಬೃಹತ್ 'ಯೋಗ ನಡಿಗೆ':

ಮುಖ್ಯ ಕಾರ್ಯಕ್ರಮದ ಮುನ್ನೋಡಿಯಾಗಿ ಜೂನ್ 19 ರಂದು ಬೆಳಿಗ್ಗೆ 9:30 ಕ್ಕೆ ನಗರದಲ್ಲಿ 'ಯೋಗ ನಡಿಗೆ' (ರನ್ ಫಾರ್ ಯೋಗ) ಆಯೋಜಿಸಲಾಗಿದೆ.

# ಕಾನೂನು ಪದವೀಧರರಿಗೆ ತರಬೇತಿ ಭತ್ಯೆಗೆ ಆಯ್ಕೆ ಮಾಡಲು ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 10: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2026–27 ನೇ ಸಾಲಿಗೆ ಹಿಂದುಳಿದ ವರ್ಗಗಳಿಗೆ ಸೇರಿದ ಪ್ರವರ್ಗ–1, 2ಎ, 3ಎ, ಮತ್ತು 3ಬಿ ವರ್ಗಕ್ಕೆ ಸೇರಿದ ಕಾನೂನು ಪದವೀಧರರಿಗೆ ತರಬೇತಿ ಭತ್ಯೆಗೆ ಆಯ್ಕೆ ಮಾಡುಲು ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಷರತ್ತುಗಳು ಮತ್ತು ನಿಬಂಧನೆಗಳು: ರಾಯಚೂರು ಜಿಲ್ಲೆಯ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರು. ತರಬೇತಿಯ ಅವಧಿಯಲ್ಲಿ ಮಾಹೆಯಾನ 4,000 ರೂ.ಗಳ ತರಬೇತಿ ಭತ್ಯೆಯನ್ನು ನೀಡಲಾಗುವುದು. ಅಭ್ಯರ್ಥಿಗಳ ವಾರ್ಷಿಕ ಕುಟುಂಬದ ಆದಾಯ ಪ್ರವರ್ಗ–1ಕ್ಕೆ 3.50 ಲಕ್ಷ ರೂ. ಹಾಗೂ ಪ್ರವರ್ಗ 2ಎ,3ಎ,3ಬಿ ವರ್ಗಕ್ಕೆ 2.50 ಲಕ್ಷ ರೂ.ಗಳಿಗೆ ಮೀರಬಾರದು.ತರಬೇತಿಗೆ ಅರ್ಜಿಯನ್ನು ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೆ ಹಿಂದೆ 2 ವರ್ಷದೊಳಗಾಗಿ ಕಾನೂನು ಪದವೀ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಹಾಗೂ ಬಾರ್ ಕೌನ್ಸಿಲ್‌ನಲ್ಲಿ ಹೆಸರು ನೊಂದಾಯಿಸಿರಬೇಕು. ಪ್ರವರ್ಗ–1ರ ಅಭ್ಯರ್ಥಿಗಳಿಗೆ 40 ವರ್ಷಗಳು ಮತ್ತು ಇತರ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ 38 ವರ್ಷ ವಯೋಮಿತಿಯಲ್ಲಿರಬೇಕು.ನಿಗದಿತ ಅರ್ಜಿ ನಮೂನೆಯಲ್ಲಿ ಅವಶ್ಯಕ ದಾಖಲೆಗಳು ಹಾಗೂ 2 ಭಾವಚಿತ್ರಗಳೊಂದಿಗೆ ಅರ್ಜಿಯನ್ನು ಜುಲೈ 10ರೊಳಗಾಗಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–295996ಗೆ ಅಥವಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಜಿಲ್ಲಾ ಆಡಳಿತ ಭವನ ಮೋದಲನೇ ಮಹಡಿ ಬಿ–2 ಕೊಠಡಿ ಯಕ್ಲಾಸಪೂರ ರಸ್ತೆ ರಾಯಚೂರು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ. 11, 12ರಂದು ಐಟಿಐ ಕ್ಯಾಂಪಸ್ ಸೆಲೆಕ್ಷನ್

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 10 : ರಾಯಚೂರಿನ ಮಾಣಿಕ ನಗರದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2026–27ನೇ ಸಾಲಿನ ಟೋಯೋಟಾ ಇಂಡಸ್ಟ್ರೀಸ್ ಇಂಜಿನ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ಇವರ ವತಿಯಿಂದ ಕ್ಯಾಂಪಸ್ ಸೆಲೆಕ್ಷನ್ ಕಾರ್ಯಕ್ರಮವನ್ನು ಜೂನ್ 11 ಹಾಗೂ 12ರ ಬೆಳಿಗ್ಗೆ 10ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಐಟಿಐ ಯಾವುದೇ ವೃತ್ತಿಯ ದ್ವಿತೀಯ ವರ್ಷದಲ್ಲಿ ತರಬೇತಿ ಪಡೆಯುತ್ತಿರುವ ಹಾಗೂ ಈಗಾಗಲೇ ಐಟಿಐ ಉತ್ತೀರ್ಣರಾದ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳು ಈ ತರಬೇತಿಯಲ್ಲಿ ಭಾಗವಹಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂ–ಖ್ಯೆ: 9035198134, 9538003397 ಅಥವಾ 8904784507 ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರಿನ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ದರ್ಜೆ –01ರ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 10 : ರಾಯಚೂರು ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಿಂದ 2026–27ನೇ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನಿರ್ವಹಣೆಯಾಗುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳಿಗೆ ಪ್ರವೇಶಕ್ಕಾಗಿ ಎಸ್.ಹೆಚ್.ಪಿ ತಂತ್ರಾಂಶದಡಿ ವಸತಿ ನಿಲಯದ ಪ್ರವೇಶಕ್ಕೆ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಅರ್ಜಿ ಸಲ್ಲಿಸಲು ಬೇಕಾದ ದಾಖಲಾತಿಗಳು: ಹೊಸದಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಎಸ್.ಎಸ್.ಪಿ ಐಡಿ ಖಾತೆಯನ್ನು ಸೃಜನೆ ಮಾಡಿಕೊಳ್ಳಬೇಕು. ಎಸ್.ಎಸ್.ಪಿ ಐಡಿ ಖಾತೆಯನ್ನು ಸೃಜನೆ ಮಾಡಿಕೊಳ್ಳುವಾಗ ವಿದ್ಯಾರ್ಥಿಯು ಆಧಾರ್ ಕಾರ್ಡನ್ನು ಬಳಸಿಕೊಂಡು ಖಾತೆಯನ್ನು ಸೃಜನೆ ಮಾಡಿಕೊಳ್ಳುವುದು (ವಿದ್ಯಾರ್ಥಿಯ ಬ್ಯಾಂಕ್‌ಗೆ ಆಧಾರ್ ಕಾರ್ಡ್ ಸೀಡಿಂಗ್ ಆಗಿರಬೇಕು). ಎಸ್.ಎಸ್.ಪಿ. ವಿದ್ಯಾರ್ಥಿಯ ಐ.ಡಿ ಸಂಖ್ಯೆ (ನವೀಕರಣ ವಿದ್ಯಾರ್ಥಿಗಳಿಗೆ). ವಿದ್ಯಾರ್ಥಿ ಅಥವಾ ಪಾಲಕರ ಮೊಬೈಲ್ ಸಂಖ್ಯೆ, ಇ–ಮೇಲ್ ಐಡಿ ವಿದ್ಯಾರ್ಥಿಯ ಸಂಪೂರ್ಣ ವಿಳಾಸ ಹೊಂದಿರುಬೇಕು. ಆರ್.ಡಿ. ಸಂಖ್ಯೆ ಹೊಂದಿರುವ ವಿದ್ಯಾರ್ಥಿಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ(ಚಾಲ್ತಿ ಇರುವ) ಪ್ರತಿ. ಕಾಲೇಜಿನಿಂದ ಪಡೆದ ವ್ಯಾಸಂಗ ಪ್ರಮಾಣ ಪತ್ರ ಪ್ರತಿ. ಎಸ್.ಎಸ್.ಎಲ್.ಸಿ. ನೋಂದಣಿ ಸಂ–ಖ್ಯೆ ಮತ್ತು ವಿಶ್ವವಿದ್ಯಾಲಯಗಳು ನೀಡುವ ನೋಂದಣಿ ಸಂಖ್ಯೆ ಹೊಂದಿರಬೇಕು. ಹಿಂದಿನ ಸಾಲಿನಲ್ಲಿ ತೇರ್ಗಡೆಯಾದ ಕೋರ್ಸಿನ ಅಂಕಪಟ್ಟಿಯ ಪ್ರತಿ ಮತ್ತು ರಜಿಷ್ಟರ್ ಸಂಖ್ಯೆಯೊಂದಿಗೆ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರ ವಸತಿ ನಿಲಯ ಪ್ರವೇಶಕ್ಕಾಗಿ ವೆಬ್‌ಸೈಟ್ ವಿಳಾಸ: https://https://shp.karnataka.gov.in/ ನ್ನು ಸಂಪರ್ಕಿಸಿ ಅರ್ಜಿಯನ್ನು ಜೂನ್ 30ರೊಳಗಾಗಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂ–ಖ್ಯೆ 080532–295603, 8762178819ಗೆ ಅಥವಾ ತಾಲೂಕಾ ಕಚೇರಿಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ರುಕ್ಮಣೀ ಬಾಯಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.10–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣವಿಭಾಗ–1ರ ವತಿಯಿಂದ 110/33/11ಕೆವಿ ಕಲಬುರಗಿ ದಕ್ಷಿಣ ವಿದ್ಯುತ್ ವಿತರಣಾ ಕೇಂದ್ರದ 33ಕೆವಿ ಮಾರ್ಗದ ಕಾಮಗಾರಿ ಕೈಗೊಂಡಿರುವ ಪ್ರಯುಕ್ತಸದರಿ ವಿತರಣಾ ಕೇಂದ್ರದಿಂದ ಹೊರಹೊಗುವ ಈ ಕೆಳಕಂಡ ಫೀಡರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳಲ್ಲಿಇದೇ ಜೂನ್ 11 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ ಸರಬರಾಜಿನಲ್ಲಿ ವ್ಯತ್ಯಯ.

# ಪರಿಸರ ದಿನಾಚರಣೆ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಗಂಗಾವತಿ ತಾಲೂಕಿನ ಡಣಾಪೂರ ಸರಕಾರಿ ಪ್ರೌಢ ಶಾಲೆ ಆವರಣದಲ್ಲಿ ಸಂದರ್ಭ ಲಾಲ್ ಬಹುಗಳ ಇಕೋ ಕ್ಲಬ್ ಹಾಗೂ ಶಿಕ್ಷಣ ಇಲಾಖೆ ನೇತೃತ್ವದಲ್ಲಿ ಸಸಿ ನೆಡುವ ಮೂಲಕ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.

ಈ ಸಂಧರ್ಭದಲ್ಲಿ ಶಾಲೆಯ ಮುಖ್ಯಶಿಕ್ಷಕರಾದ ಹನುಮಂತಪ್ಪ ಚವ್ಹಾಣ ಮಾತನಾಡಿ ಗಿಡಮರಗಳನ್ನು ಹೆಚ್ಚು ಬೆಳೆಸುವುದರಿಂದ ಶುದ್ಧವಾತವರಣ ಹಾಗೂ ಶುದ್ದ ಗಾಳಿ ಪಡಯಬಹುದು ಉತ್ತಮ ಪರಿಸರ ನಿರ್ಮಾಣಕ್ಕಾಗಿ ಗಿಡಮರಗಳನ್ನ ನೆಡೋಣ ಎಂದರು.

ಹನುಮೇಶ ಮಾತನಾಡಿ ಪ್ರಕೃತಿ ನಮಗೆ ಸಾಕಷ್ಟೂ ನೀಡಿದೆ ಆದರೆ ಪ್ರಕೃತಿಗೆ ನಾವು ಏನಾದೂ ನೀಡಬೇಕು ಅದಕ್ಕೊಸ್ಕರ ನಮಗೆ ಸಮಯ ಸಿಕ್ಕಾಗ ಎಲ್ಲಾ ಗಿಡ ನೆಡೋಣ ಹಾಗೂ ಶುಭ ಸಮಾರಂಭಕ್ಕೆ ಗಿಡಗಳನ್ನು ಉಡುಗೊರೆಯಾಗಿ ನೀಡೋಣ ಎಂದರು.

ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಂದ ನಾಲ್ಕು ಸಸಿಗಳನ್ನು ನೆಡುವ ಮೂಲಕ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು.

ಈ ವೇಳಾ ಡಣಾಪೂರ ಸರಕಾರಿ ಪ್ರೌಢ ಶಾಲೆ ಯ ಮುಖ್ಯ ಶಿಕ್ಷಕರಾದ ಹನುಮಂತಪ್ಪ ಚವ್ಹಾಣ ಶಾಲಾ ಶಿಕ್ಷಕರಾದ ಚಂದ್ರಶೇರಖರ ಜಾಪಳ ,ಕೋಟೆಪ್ಪ ಜಿ, ಸಿದ್ದಲಿಂಗೇಶ್ವರ, ಅಯ್ಯನಗೌಡ , ಚನ್ನಬಸಪ್ಪ , ಸೈಯಾದ ಸನವುಲ್ಲಾ ಖಾನ , ಮಾಲತೇಶ ,ಸುಮಲತಾ , ಗಂಗಮ್ಮ , ಗ್ರಾಮದ ಹಸಿರು ಬಳಗ ಸದಸ್ಯರಾದ ,ರಾಘವೇಂದ್ರ ,ನಿಂಗರಾಜ ಪಂಪಾ,ಗೂಡಪಾಷ,ಬಸವರಾಜ, ಮಂಜು ಶಿಕ್ಷಕಿಯರು ,ಶಾಲಾ ಮಕ್ಕಳು ಭಾಗಿ ಇದ್ದರು.

# ನಾಳೆ ಬಸವಕಲ್ಯಾಣದಲ್ಲಿ ಪಟ್ಟದ್ದೇವರ ಬ್ಯಾಂಕ್‌ನ ಶಾಖೆ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ



ನಗರದ ಹರಳಯ್ಯ ಚೌಕ್ ಸಮೀಪದ ಕರ್ನಾಟಕ ಬ್ಯಾಂಕ್ ಮೇಲಿನ ಕಾಂಪ್ಲೆಕ್ಸ್‌ನಲ್ಲಿ ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಡಾ.ಚನ್ನಬಸವ ಪಟ್ಟದ್ದೇವರ ಬ್ಯಾಂಕ್‌ನ ನೂತನ ಶಾಖೆ ಉದ್ಘಾಟನೆಗೊಳ್ಳಲಿದೆ.

ಡಾ.ಚನ್ನಬಸವಪಟ್ಟದ್ದೇವರುಬ್ಯಾಂಕ್‌ನ ಸಂಸ್ಥಾಪಕ ಗೌರವಾಧ್ಯಕ್ಷನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ.ಭಾಲ್ಕಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಅನುಭವ ಮಂಟಪದ ಸಂಚಾಲಕ ಶಿವಾನಂದ ಸ್ವಾಮೀಜಿ ದಿವ್ಯನೇತೃತ್ವವಹಿಸಲಿದ್ದಾರೆ.ಡಾ.ಚನ್ನಬಸವ ಪಟ್ಟದ್ದೇವರು ಬ್ಯಾಂಕ್‌ನ ಅಧ್ಯಕ್ಷ ಡಿ.ಕೆ.ಸಿದ್ರಾಮ ಅಧ್ಯಕ್ಷತೆ ವಹಿಸುವರು. ಉಪಾಧ್ಯಕ್ಷ ಶರಣಪ್ಪ ಬಿರಾದಾರ್, ಬಸವಕಲ್ಯಾಣ ಡಾ.ಚನ್ನಬಸವ ಪಟ್ಟದ್ದೇವರು ಪತ್ತಿನ ಸಹಕಾರ ಸಂಘದ ಸ್ಥಾನಿಕ ಕಮಿಟಿ ಅಧ್ಯಕ್ಷ ಬಾಬುರಾವ ಜಲ್ದೆ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ ಎಂದು ಡಾ.ಚನ್ನಬಸವ ಪಟ್ಟದ್ದೇವರು ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಣಪತಿ ಬಾವುಗೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿ.ಎನ್.ಕೇಶವರೆಡ್ಡಿ ಅವರ 91ನೇ ಹುಟ್ಟುಹಬ್ಬ



• ಮಲ್ಲಮ್ಮ ನುಡಿ ವಾರ್ತೆಚಿಕ್ಕಬಳ್ಳಾಪುರ

ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಹಾಗೂ ಸಂಸದ ಡಾ. ಕೆ.ಸುಧಾಕರ್ ಅವರ ತಂದೆ ಪಿ.ಎನ್.ಕೇಶವರೆಡ್ಡಿ ಅವರ 91ನೇ ಹುಟ್ಟುಹಬ್ಬವನ್ನು ತಾಲೂಕಿನ ಬುಧವಾರ ಸಂಭ್ರಮದಿಂದ ಆಚರಿಸಲಾಯಿತು.ಹುಟ್ಟುಹಬ್ಬದ ಅಂಗವಾಗಿ ಕೇಶವರೆಡ್ಡಿ ಅವರು ಮೊದಲು ಕುಟುಂಬದ ಆರಾಧ್ಯದೈವವಾದ ಚೆನ್ನಕೇಶವ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು ಬಳಿಕ ಪೇರೇಸಂದ್ರದ ಸ್ವಗೃಹದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ 91 ಕೆಜಿ ಕೇಕ್ ಕತ್ತರಿಸಿ ಸ್ನೇಹಿತರು, ಅಭಿಮಾನಿಗಳು ಹಾಗೂ ರಾಜಕೀಯ ಮುಖಂಡರಿಂದ ಶುಭಾಶಯ ಮತ್ತು ಸನ್ಮಾನ ಸ್ವೀಕರಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಕೇಶವರೆಡ್ಡಿ ಅವರು, ಜನರ ಸೇವೆಗೆ ಬರುವವರು ಸಾಮಾಜಿಕ ಕಳಕಳಿ ಹೊಂದಿರಬೇಕು ಆಗ ಮಾತ್ರ ಜನರ ಪ್ರೀತಿ ಮತ್ತು ವಿಶ್ವಾಸ ಗಳಿಸಲು ಸಾಧ್ಯ. ಅಭಿಮಾನಿಗಳನ್ನು ಕುಟುಂಬದ ಸದಸ್ಯರಂತೆ ಕಾಣಬೇಕು,ಸ್ವಾರ್ಥಕ್ಕಾಗಿ ಬಳಸಿಕೊಳ್ಳಬಾರದು ಎಂದು ಹೇಳಿದರು. ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ ತಾರತಮ್ಯ ಮತ್ತು ಜಾತಿ ಭೇದವಿಲ್ಲದೆ ಎಲ್ಲರನ್ನು ಒಟ್ಟಾಗಿ ಕರೆದೊಯ್ದಿರುವುದರಿಂದ ಕ್ಷೇತ್ರದಾದ್ಯಂತ ಅಪಾರ ಅಭಿಮಾನಿಗಳನ್ನು ಹೊಂದಿದ್ದೇನೆ.ಶಿಕ್ಷಕರಾಗಿಯೂ ಸೇವೆ ಸಲ್ಲಿಸಿದ್ದು,ನನ್ನಿಂದ ಶಿಕ್ಷಣ ಪಡೆದ ಹಲವಾರು ವಿದ್ಯಾರ್ಥಿಗಳು ಇಂದು ಉತ್ತಮ ಬದುಕು ಕಟ್ಟಿಕೊಂಡಿದ್ದಾರೆ.ನನ್ನ ಹುಟ್ಟುಹಬ್ಬಕ್ಕೆ ಶುಭಕೋರಿದ ಶಿಕ್ಷಕರು,ವಿದ್ಯಾರ್ಥಿಗಳು,ಸ್ನೇಹಿತರು ಹಾಗೂ ರಾಜಕೀಯ ಮುಖಂಡರ ಪ್ರೀತಿಗೆ ನಾನು ಸದಾ ಋಣಿಯಾಗಿರುತ್ತೇನೆ ಎಂದು ತಿಳಿಸಿದರು.ಬಳಿಕ ತಾಲ್ಲೂಕಿನ ಸುಲ್ತಾನಪೇಟೆಯ ಶ್ರೀ ಸಾಯಿ ದ್ವಾರಕಮಾಯಿ ವೃದ್ಧಾಶ್ರಮಕ್ಕೆ ಭೇಟಿ ನೀಡಿ ವೃದ್ಧರೊಂದಿಗೆ ಕೇಕ್ ಕತ್ತರಿಸಿ,ಸಿಹಿತಿಂಡಿ ಹಂಚಿ ಅವರ ಆಶೀರ್ವಾದ ಪಡೆದರು.

ಇದೇ ವೇಳೆ ಯುವ ಮುಖಂಡ ಗಿರೀಶ್ ಹರಿಸ್ಥಳ ಮಾತನಾಡಿ,ಕೇಶವರೆಡ್ಡಿ ಅಣ್ಣಾ ಅವರ ಸರಳ ಜೀವನ ಹಾಗೂ ಜನಪರ ಚಿಂತನೆ ಯುವ ಪೀಳಿಗೆಗೆ ಸ್ಫೂರ್ತಿದಾಯಕವಾಗಿದೆ.91ವರ್ಷ ವಯಸ್ಸಿನಲ್ಲಿಯೂ ಯುವಕರಂತೆ ಚುರುಕಾಗಿ ಕಾರ್ಯನಿರ್ವಹಿಸುತ್ತಿರುವ ಅವರು ನಮಗೆ ಆದರ್ಶ ವ್ಯಕ್ತಿತ್ವ.ಅವರಿಗೆ ದೇವರು ಆಯುರಾರೋಗ್ಯ ನೀಡಲಿ ಹಾಗೂ ಇನ್ನಷ್ಟು ಸೇವೆ ಮಾಡುವ ಶಕ್ತಿ ಕರುಣಿಸಲಿ ಎಂದು ಶುಭ ಹಾರೈಸಿದರು.ಈ ಸಂದರ್ಭದಲ್ಲಿ ಚೀಮುಲ್ ನಿರ್ದೇಶಕ ಕೆ.ವಿ. ನಾಗರಾಜ್,ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಚಿಕ್ಕಗೆರಿಗರೆಡ್ಡಿ,ಬಿಜೆಪಿ ಉಪಾಧ್ಯಕ್ಷ ಮರಳುಕುಂಟೆ ಕೃಷ್ಣಮೂರ್ತಿ,ಕೆ.ವಿ. ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಕೆ.ವಿ. ನವೀನ್ ಕಿರಣ್,ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಗಂಗರೇ ಕಾಲವೇ ಪ್ರಸಾದ್,ಜೆಡಿಎಸ್ ಗೌರವಾಧ್ಯಕ್ಷ ಕೆ.ಆರ್ ರೆಡ್ಡಿ,ಎಸ್. ಆರ್.ಎಸ್.ದೇವರಾಜ್,ಸೇರಿದಂತೆ ಹಲವಾರು ಮುಖಂಡರು ಉಪಸ್ಥಿತರಿದ್ದರು.

# ನರೇಂದ್ರ ಮೋದಿ ಆಡಳಿತದಲ್ಲಿ ಭಾರತ ಸಮಗ್ರ ಅಭಿವೃದ್ಧಿ: ಶಾಸಕ ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಔರಾದ



ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ರಾಜಕೀಯ ಇತಿಹಾಸದಲ್ಲಿ ಅತಿ ದೀರ್ಘಾವಧಿಗೆ ಪ್ರಜಾಸತ್ತಾತ್ಮಕವಾಗಿ ಸತತವಾಗಿ ಚುನಾಯಿತರಾದ ಪ್ರಧಾನಿಯಾಗಿ ಐತಿಹಾಸಿಕ ದಾಖಲೆ ನಿರ್ಮಿಸಿದ ಹಿನ್ನೆಲೆಯಲ್ಲಿ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಜೂನ್ 10ರಂದು ಪಟ್ಟಣದ ಉದ್ಭವಲಿಂಗ ಶ್ರೀ ಅಮರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಇದಕ್ಕೂ ಮುನ್ನ ಮಂದಿರ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಂಡು ಖುದ್ದಾಗಿ ಮಂದಿರ ಸ್ವಚ್ಛಗೊಳಿಸಿ ಗಮನ ಸೆಳೆದರು. ನಂತರ ಅಮರೇಶ್ವರ ದೇವರಿಗೆ ಪೂಜೆ, ಅರ್ಚನೆ, ಅಭಿಷೇಕ, ಹೋಮ–ಹವನ, ಗೋಪೂಜೆ ನೆರವೇರಿಸಿ ಪ್ರಧಾನಿಯವರ ಆರೋಗ್ಯ ಮತ್ತು ನಾಡಿನ ಏಳಿಗೆ ಹಾಗೂ ಔರಾದ(ಬಿ) ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಬಳಿಕ ಮಾತನಾಡಿದ ಶಾಸಕ ಪ್ರಭು ಬಿ.ಚವ್ಹಾಣ ಅವರು, ಪ್ರಧಾನಿ ನರೇಂದ್ರ ಮೋದಿಯವರು ಜನನಾಯಕ, ಜನಸೇವಕ ಹಾಗೂ ದೇಶಭಕ್ತಿಯ ಮೌಲ್ಯಗಳನ್ನು ಪ್ರತಿಪಾದಿಸುವ ನಾಯಕ. 140 ಕೋಟಿ ಭಾರತೀಯರ ಸೇವಕರೆಂದು ಗುರುತಿಸಿಕೊಂಡು ದೇಶದ ಅಭಿವೃದ್ಧಿ ಮತ್ತು ಜನಕಲ್ಯಾಣವನ್ನು ಆಡಳಿತದ ಕೇಂದ್ರಬಿಂದುವಾಗಿಸಿಕೊಂಡು ಕಾರ್ಯನಿರ್ವಹಿಸುತ್ತಿದ್ದಾರೆ.ಪಾಕಿಸ್ತಾನದ ವಿರುದ್ಧ ಸರ್ಜಿಕಲ್ ಸ್ಟ್ರೈಕ್ ನಡೆಸಿ ಭಾರತದ ಸೇನಾ ಶಕ್ತಿಯನ್ನು ಜಗತ್ತಿಗೆ ಪರಿಚಯಿಸಿದ್ದರು.ಯೋಗಾವನ್ನು ವಿಶ್ವಕ್ಕೆ ಪರಿಚಯಿಸಿದರು. ಅವರ ನೇತೃತ್ವದಲ್ಲಿ ದೇಶದ ಕೀರ್ತಿ ಪತಾಕೆ ಜಾಗತಿಕ ಮಟ್ಟದಲ್ಲಿ ಉತ್ತುಂಗಕ್ಕೆ ಏರಿದ್ದು, ಇಂದು ಭಾರತವನ್ನು ಇಡೀ ಜಗತ್ತು ತಲೆ ತಿರುಗಿಸಿ ನೋಡುವಂತಾಗಿದೆ ಎಂದು ಹೇಳಿದರು.

2014ರಿಂದ ದೇಶದಲ್ಲಿ ಮೂಲಸೌಕರ್ಯ, ಆರ್ಥಿಕತೆ, ತಂತ್ರಜ್ಞಾನ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಮಹತ್ತರ ಬದಲಾವಣೆಗಳು ನಡೆದಿವೆ. ರಾಷ್ಟ್ರೀಯ ಹೆದ್ದಾರಿಗಳ ವಿಸ್ತರಣೆ, ವಂದೇ ಭಾರತ್ ರೈಲುಗಳ ಆರಂಭ, ವಿಮಾನ ನಿಲ್ದಾಣಗಳ ಅಭಿವೃದ್ಧಿ, ಡಿಜಿಟಲ್ ಇಂಡಿಯಾ ಅಭಿಯಾನ, ಮೇಕ್ ಇನ್ ಇಂಡಿಂ–ಯಾ, ಆತ್ಮನಿರ್ಭರ ಭಾರತ ಅಭಿಯಾನ, ಜನಧನ್ ಯೋಜನೆ, ಆಯುಷ್ಮಾನ್ ಭಾರತ್, ಪ್ರಧಾನಮಂತ್ರಿ ಆವಾಸ್ ಯೋಜನೆ, ಜಲ ಜೀವನ್ ಮಿಷನ್, ಸ್ವಚ್ಛ ಭಾರತ ಅಭಿಯಾನ ಹಾಗೂ ರೈತರಿಗೆ ಪಿಎಂ–ಕಿಸಾನ್ ಯೋಜನೆ, ಪರಿಸರ ಸಂರಕ್ಷಣೆಗೆ ಆದ್ಯತೆ ಸೇರಿದಂತೆ ಅನೇಕ ಮಹತ್ವಾಕಾಂಕ್ಷಿ ಯೋಜನೆಗಳು ಜಾರಿಗೊಂಡಿವೆ.ದೇಶದಲ್ಲಿ ನೂತನ ಸಂಸತ್ ಭವನ ನಿರ್ಮಾಣ, ಜಮ್ಮು ಮತ್ತು ಕಾಶ್ಮೀರಕ್ಕೆ ಸಂಬಂಧಿಸಿದ 370ನೇ ವಿಧಿ ರದ್ದುಪಡಿಸುವ ನಿರ್ಧಾರ, ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ, ಕಾಶಿ ವಿಶ್ವನಾಥ ಕಾರಿಡಾರ್ ಅಭಿವೃದ್ಧಿ, ಗಂಗಾ ಅಭಿವೃದ್ಧಿ ಸೇರಿದಂತೆ ಹಲವು ಐತಿಹಾಸಿಕ ಕ್ರಮಗಳನ್ನು ಕೈಗೊಳ್ಳಲಾಗಿದೆ. 'ಸಬ್ ಕಾ ಸಬ್ ಕಾ ವಿಕಾಸ ಎಂಬ ಸಂಕಲ್ಪದೊಂದಿಗೆ ಕೆಲಸ ಮಾಡುತ್ತಿದ್ದು, ದೇಶದಲ್ಲಿ ಅಭಿವೃದ್ಧಿ, ಉತ್ತಮ ಆಡಳಿತ ಹಾಗೂ ಶಾಂತಿ–ಸುವ್ಯವಸ್ಥೆಗೆ ಆದ್ಯತೆ ನೀಡುತ್ತ ಯಾವುದೇ ಅಕ್ರಮಗಳಿಗೆ ಆಸ್ಪದ ನೀಡದೇ ಸ್ವಚ್ಛ ಮತ್ತು ನಿಷ್ಕಳಂಕ ಆಳ್ವಿಕೆ ನೀಡಿದ್ದಾರೆ. ವಿಶ್ವದ ನಂ.1 ಪ್ರಧಾನಿಯಂತೆ ಹೆಸರುವಾಸಿಯಾಗಿರುವ ಇಂತಹ ನಾಯಕತ್ವ ದೇಶಕ್ಕೆ ದೊರೆತಿರುವುದು ಹೆಮ್ಮೆಯ ಸಂಗತಿ. ಪ್ರಧಾನಿಯವರ ಆಯುರಾರೋಗ್ಯ ವೃದ್ಧಿಸಲಿ ಹಾಗೂ 2029ರಲ್ಲಿಯೂ ಅವರೇ ಪ್ರಧಾನಿಯಾಗಲಿ ಮತ್ತಷ್ಟು ಅಭಿವೃದ್ಧಿಯೊಂದಿಗೆ ದೇಶವನ್ನು ಉತ್ತುಂಗಕ್ಕೆ ಕೊಂಡೊಯ್ಯಲಿ ಎಂದು ಬೇಡಿಕೊಳ್ಳಲಾಗಿದೆ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷರಾದ ರಾಮಶೆಟ್ಟಿ ಪನ್ನಾಳೆ, ಜಿಲ್ಲಾ ಉಪಾಧ್ಯಕ್ಷ ಅರಹಂತ ಸಾವಳೆ, ಔರಾದ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ದಯಾನಂದ ಘೂಳೆ, ಮುಖಂಡರಾದ ವಸಂತ ಬಿರಾದಾರ, ಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಶಿವರಾಜ ಅಲ್ಮಾಜೆ, ಪ್ರಕಾಶ ಅಲ್ಮಾಜೆ, ಪ್ರತೀಕ ಚವ್ಹಾಣ, ಕೇರಬಾ ಪವಾರ, ಶ್ರೀನಿವಾಸ ಖೂಬಾ, ಪ್ರಕಾಶ ಅಲ್ಮಾಜೆ, ಗುಂಡು ಮುಧಾಳೆ, ಬಸವರಾಜ ಹಳ್ಳೆ, ಸಂದೀಪ ಪಾಟೀಲ, ಜಗನ್ನಾಥ ಚಿಟ್ಮೆ, ಸಂಜು ವಡೆಯರ್, ರವೀಂದ್ರ ರೆಡ್ಡಿ ಉಜನಿ, ಜಗದೀಶ ಪಾಟೀಲ, ಉದಯ ಸೋಲಾಪೂರೆ, ಯಾದು ಮೇತ್ರೆ, ಮಹಾದೇವ ಅಲ್ಮಾಜೆ, ಬಾಬು ಔರಾದೆ, ಪ್ರದೀಪ ಪವಾರ್, ಸೋನು ರಾಠೋಡ, ಆನಂದ ದ್ಯಾಡೆ, ರವಿ ಔರಾದೆ, ಅನೀಲ ಬಿರಾದಾರ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ಭಕ್ತರು ಉಪಸ್ಥಿತರಿದ್ದರು.

# ಜಾಗತಿಕ ಮಟ್ಟದಲ್ಲಿ ಪ್ರಧಾನಿ ಮೋದಿಯವರ ಸಾಧನೆ ಅಪಾರ: ಮಾಜಿ ಸಚಿವ ಹಾಲಪ್ಪ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ಪ್ರಧಾನಿಯಾಗಿ ಅತಿ ಹೆಚ್ಚು ದಿನಗಳ ಕಾಲ ಸೇವೆ ಸಲ್ಲಿಸಿದ ಐತಿಹಾಸಿಕ ಮೈಲಿಗಲ್ಲನ್ನು ತಲುಪಿದ ಹಿನ್ನೆಲೆಯಲ್ಲಿ, ಯಲಬುರ್ಗಾ ಮಂಡಲದ ವತಿಯಿಂದ ಕುಕನೂರು ಪಟ್ಟಣದ ಐತಿಹಾಸಿಕ ಶ್ರೀ ಮಹಾಮಾಯಾ ದೇವಸ್ಥಾನದಲ್ಲಿ ವಿಶೇಷ ಪೂಜೆ ಹಾಗೂ ಜನಕಲ್ಯಾಣಕ್ಕಾಗಿ ಪ್ರಾರ್ಥನೆ ಹಮ್ಮಿಕೊಳ್ಳಲಾಗಿತ್ತು.ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಸಚಿವರಾದ ಹಾಲಪ್ಪ ಆಚಾರ್ ಅವರು, ಜಾಗತಿಕ ಮಟ್ಟದಲ್ಲಿ ಪ್ರಧಾನಿ ಮೋದಿಯವರ ಸಾಧನೆಗಳು ಅಪಾರವಾಗಿವೆ. ಜಗತ್ತಿನ ಪ್ರಮುಖ ರಾಷ್ಟ್ರಗಳ ಸಾಲಿನಲ್ಲಿ ಭಾರತವನ್ನು ಮುಂಚೂಣಿಗೆ ತಂದ ಹೆಗ್ಗಳಿಕೆ ಮೋದಿಯವರದ್ದಾಗಿದೆ. ಅವರ ನಾಯಕತ್ವದಲ್ಲಿ ದೇಶವು ಸರ್ವತೋಮುಖ ಅಭಿವೃದ್ಧಿಯತ್ತ ಹೆಜ್ಜೆ ಇಡುತ್ತಿದ್ದು, ಇಂದು ಜಗತ್ತೇ ಭಾರತದತ್ತ ತಿರುಗಿ ನೋಡುವಂತೆ ಮಾಡಿದ್ದಾರೆ ಎಂದು ಶ್ಲಾಘಿಸಿದರು.?ಕಾರ್ಯಕ್ರಮದಲ್ಲಿ ಯುವ ಮುಖಂಡರಾದ ಮಂಜುನಾಥ್ ನಾಡಗೌಡರ್ ಅವರು ಮಾತನಾಡಿ, ಕಳೆದ 12 ವರ್ಷಗಳಲ್ಲಿ ಭಾರತವು ಸಾಧಿಸಿದ ಆತ್ಮನಿರ್ಭರತೆ (ಸ್ವಾವಲಂಬನೆ) ಮತ್ತು ದೇಶದ ಪ್ರಗತಿಯ ವಿವಿಧ ಆಯಾಮಗಳ ಬಗ್ಗೆ ಬೆಳಕು ಚೆಲ್ಲಿದರು. ರಕ್ಷಣೆ, ತಂತ್ರಜ್ಞಾನ ಹಾಗೂ ಮೂಲಸೌಕರ್ಯ ಸೇರಿದಂತೆ ಪ್ರತಿಯೊಂದು ವಲಯದಲ್ಲೂ ಭಾರತವು ಇಂದು ಸ್ವಾವಲಂಬಿಯಾಗುತ್ತಿದ್ದು, ಜಾಗತಿಕ ಮಟ್ಟದಲ್ಲಿ ದೇಶದ ಪ್ರತಿಷ್ಠೆ ಮುಗಿಲೆತ್ತರಕ್ಕೆ ಬೆಳೆದಿದೆ ಎಂದು ಹೆಮ್ಮೆಯಿಂದ ತಿಳಿಸಿದರು.?ಈ ಸಂದರ್ಭದಲ್ಲಿ ಮಂಡಲದ ಅಧ್ಯಕ್ಷರಾದ ಮಾರುತಿ ಗಾವರಾಳ, ಹಿರಿಯರಾದ ಶಿವಕುಮಾರ ನಾಗಲಾಪುರಮಠ, ಶರಣಪ್ಪ ಬಣ್ಣದಬಾವಿ, ಮುಕುಂದರಾವ ಕುಲಕರ್ಣಿ, ಗೋವಿಂದರಾವ ಕುಲಕರ್ಣಿ, ಸಿದ್ದು ಉಳಾಗಡ್ಡಿ, ಬಸವರಾಜ ಹಾಳಕೇರಿ, ಕರಬಸಯ್ಯ ಬಿನ್ನಾಳ, ಮಾರುತೇಶ ಹೂಗಾರ, ಕಳಕೇಶ ಹಟ್ಟಿಕಟಗಿ, ರಾಮನಗೌಡ ಅರಿಶಿನಬಿಡಿ, ಬಸವಣ್ಣ ಈಬೇರಿ, ಸೇರಿದಂತೆ ಪಕ್ಷದ ಪ್ರಮುಖರು, ಕಾರ್ಯಕರ್ತರು ಹಾಗೂ ಭಕ್ತಾದಿಗಳು ಉಪಸ್ಥಿತರಿದ್ದರು.

# ಹೊಸಲಿಂಗಪುರದಲ್ಲಿ ಅಂಗನವಾಡಿ ಮಕ್ಕಳ ಶಾಲಾ ಪ್ರವೇಶೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



: ಅಂಗನವಾಡಿ ಕೇಂದ್ರಗಳಲ್ಲಿ ಮೂರು ವರ್ಷ ಶಾಲಾ ಪೂರ್ವ ಶಿಕ್ಷಣ ಚಟುವಟಿಕೆಗಳನ್ನು ಕಲಿತು 2027–27ನೇ ಸಾಲಿನಲ್ಲಿ 1ನೇ ತರಗತಿಗೆ ದಾಖಲಾಗುತ್ತಿರುವ ಮಕ್ಕಳ ಶಾಲಾ ಪ್ರವೇಶೋತ್ಸವ ಕಾರ್ಯಕ್ರಮವನ್ನು ಕೊಪ್ಪಳ ಶಿಶು ಅಭಿವೃದ್ಧಿ ಯೋಜನೆಯ ಹೊಸಲಿಂಗಪುರ ಗ್ರಾಮದ 5 ಅಂಗನವಾಡಿ ಕೇಂದ್ರಗಳಲ್ಲಿ ಬುಧವಾರ (ಜೂ. 10ರಂದು) ನಡೆಯಿತು.

ಕೊಪ್ಪಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಅಮರೇಶ್ ಹಾವಿನ ಅವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿದರು. ಬಳಿಕ ಮಾತನಾಡಿ, ಬುನಾದಿ ಹಂತದ ಶಿಕ್ಷಣ ಬಹಳ ಮುಖ್ಯ ಆದ್ದರಿಂದ ಮೂರರಿಂದ ಆರು ವಯಸ್ಸಿನ ಮಕ್ಕಳ ದೈಹಿಕ, ಬೌದ್ಧಿಕ, ಮಾನಸಿಕ, ಬೆಳವಣಿಗೆಗೆ ಶಾಲಾ ಪೂರ್ವ ಶಿಕ್ಷಣ ಕಲಿಕೆ ತುಂಬಾ ಅವಶ್ಯಕತೆ ಇದೆ. ಈ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ, ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಕೊಪ್ಪಳ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಲಿಕೆ ಟಾಟಾ ಟ್ರಸ್ಟ್ ಕೊಪ್ಪಳ ಇವರ ಸಹಭಾಗಿತ್ವದಲ್ಲಿ ಜಿಲ್ಲೆಯಲ್ಲಿ ಶಾಲಾ ಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗುತ್ತಿದೆ ಎಂದು ಹೇಳಿದರು.

ಅಂಗನವಾಡಿ ಕೇಂದ್ರಗಳಲ್ಲಿ ಮೂರು ವರ್ಷ ಶಾಲಾ ಪೂರ್ವ ಶಿಕ್ಷಣ ಚಟುವಟಿಕೆಗಳನ್ನು ಕಲಿತು ಶಾಲಾ ಸನ್ನದ್ಧತೆಯೊಂದಿಗೆ 2027–27ನೇ ಸಾಲಿನಲ್ಲಿ ಪ್ರಾರ್ಥಮಿಕ ಶಾಲೆಗಳಿಗೆ 1ನೇ ತರಗತಿಗೆ ದಾಖಲಾಗುತ್ತಿರುವ ಮಕ್ಕಳ ಶಾಲಾ ಪ್ರವೇಶೋತ್ಸವ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ಕೊಪ್ಪಳ ಶಿಶು ಅಭಿವೃದ್ಧಿ ಯೋಜನೆಯ ಹೊಸಲಿಂಗಪುರ ಗ್ರಾಮದ 5 ಅಂಗನವಾಡಿ ಕೇಂದ್ರಗಳಿಂದ ಒಟ್ಟು 20 ಮಕ್ಕಳು ಹೊಸಲಿಂಗಪುರದ ಸರ್ಕಾರಿ ಪ್ರಾಥಮಿಕ ಶಾಲೆಗೆ ದಾಖಲಾಗುವ ಮಕ್ಕಳಿಗೆ ಬೀಳ್ಕೊಡುಗೆ ಸಮಾರಂಭದ ಮೂಲಕ ಶಾಲೆಗೆ ಪ್ರವೇಶೋತ್ಸವವನ್ನು ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ಕೊಪ್ಪಳ ಸಿಡಿಪಿಓ ರೋಹಿಣಿ ಕೊಟಗಾರ, ಪ್ರಾಥಮಿಕ ಶಾಲೆಯ ಮುಖ್ಯ ಉಪಾಧ್ಯಾಯರಾದ ನಾಗರತ್ನ, ಕಲಿಕೆ ಟಾಟಾ ಟ್ರಸ್ಟ್ ಕೊಪ್ಪಳ ಜಿಲ್ಲಾ ವ್ಯವಸ್ಥಾಪಕರಾದ ಅಶೋಕ್, ವಲಯ ಮೇಲ್ವಿಚಾರಕರಾದ ಸುಮಂಗಲ ಸಜ್ಜನ್ ಸೇರಿದಂತೆ ಹೊಸಲಿಂಗಪುರ ಗ್ರಾಮದ 5 ಅಂಗನವಾಡಿಗಳ ಕಾರ್ಯಕರ್ತೆಯರು, ಮಕ್ಕಳ ಪೋಷಕರು ಹಾಗೂ ಮಕ್ಕಳು ಭಾಗವಹಿಸಿದ್ದರು.

# ದೇವದಾಸಿ ಪದ್ಧತಿ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈ ಜೋಡಿಸಿ: ವಾಸಂತಿ ಉಪ್ಪಾರ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುವ ಅನಿಷ್ಟ ಪದ್ಧತಿಯಾದ ದೇವದಾಸಿ ಪದ್ಧತಿಯ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಪ್ರದಾನ ವ್ಯವಸ್ಥಾಪಕರಾದ ವಾಸಂತಿ ಉಪ್ಪಾರ ಅವರು ಕರೆ ನೀಡಿದ್ದಾರೆ.

ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಸಭಾಂಗಣದಲ್ಲಿ ಮಾಜಿ ದೇವದಾಸಿ ಮಹಿಳೆಯರೊಂದಿಗೆ ಇತ್ತೀಚೆಗೆ (ಜೂ. 8ರಂದು) ಹಮ್ಮಿಕೊಂಡಿದ್ದ ಸಂವಾದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೇವದಾಸಿ ಬಿಡುವ ಪದ್ಧತಿಯು ಅತ್ಯಂತ ಕೆಟ್ಟ ಸಾಮಾಜಿಕ ಪಿಡುಗು ಆಗಿದ್ದು, ಇದು ಮುಗ್ಧ ಮಹಿಳೆಯರ ಬದುಕನ್ನು ಕತ್ತಲೆಗೆ ನೂಕುತ್ತದೆ. ಈ ಅನಿಷ್ಠ ಪದ್ಧತಿಯನ್ನು ನಿರ್ಮೂಲನೆಗೆ ಸರ್ಕಾರ ಕಾನೂನು ಜಾರಿಗೆ ತಂದಿದ್ದು ಯಾವುದೇ ಮಹಿಳೆಯನ್ನು ದೇವದಾಸಿ ಪದ್ಧತಿಗೆ ಒಳಪಡಿಸಿದಲ್ಲಿ ಅದಕ್ಕೆ ಕಾರಣರಾದವರಿಗೆ, ಅದಕ್ಕೆ ಪ್ರೋತ್ಸಾಹ ನೀಡಿದವರಿಗೆ ಕಠಿಣ ಶಿಕ್ಷೆ ವಿಧಿಸಲಾಗುತ್ತದೆ. ಯಾವುದೇ ರೂಪದಲ್ಲಿ ದೇವದಾಸಿ ಪದ್ಧತಿಯನ್ನು ಆಚರಿಸುವದು ಕಾನೂನು ಪ್ರಕಾರ ಶಿಕ್ಷಾರ್ಹ ಅಪರಾಧ ಆಗಿರುತ್ತದೆ. ಹಾಗಾಗಿ ಮಾಜಿ ದೇವದಾಸಿಯರಾದ ನೀವುಗಳು ಯಾರೇ ಈ ಅನಿಷ್ಠ ಪದ್ಧತಿಯನ್ನು ಆಚರಿಸುವದು ಕಂಡು ಬಂದರೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡುವ ಮೂಲಕ, ಈ ಪದ್ಧತಿಯ ನಿರ್ಮೂಲನೆಗೆ ಕೈ ಜೋಡಿಸಬೇಕೆಂದರು.

ಸರ್ಕಾರವು ಮಾಜಿ ದೇವದಾಸಿಯರ ಸಮೀಕ್ಷೆಯನ್ನು ನಡೆಸಿದ್ದು, ಸರ್ವೆ ವರದಿಯ ಆಧಾರದ ಮೇಲೆ ಮಾಜಿ ದೇವದಾಸಿ ಮಹಿಳೆಯರ ಜೀವನ ಸುಧಾರಣೆಗೆ ಸರ್ಕಾರದ ಮಟ್ಟದಲ್ಲಿ ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಮಾಲೋಚನಾ ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಅಮರೇಶ್ ಹಾವಿನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅನ್ನಪೂರ್ಣ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೋಹಿಣಿ, ಮಹಿಳಾ ಅಭಿವೃದ್ಧಿ ನಿಗಮದ ನಿರೀಕ್ಷಕಿ ಪೂರ್ಣಿಮಾ ಹಾಗೂ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜೂ. 23 ರಂದು ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದಿಂದ ಒಂದು ವಿಶೇಷ ನೃತ್ಯ ರೂಪಕ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.10–ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರವು ಒಂದು ವಿಶೇಷ ನೃತ್ಯ ರೂಪಕವನ್ನು ಸಿದ್ಧಪಡಿಸಿದೆ. ಇದೊಂದು ವಿಶೇಷವಾದ ನೃತ್ಯ ರೂಪಕ ಕಾರ್ಯಕ್ರಮವನ್ನು 2026ರ ಜೂನ್ 23 ರಂದು ಸಂಜೆ 6.30ಕ್ಕೆ ಕಲಬುರಗಿ ಜಿಲ್ಲಾ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ಅಧ್ಯಕ್ಷರಾದ ಕಾ.ತ. ಚಿಕ್ಕಣ್ಣ ಅವರು ತಿಳಿಸಿದ್ದಾರೆ. ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರವು ಈ ಕಾರ್ಯಕ್ರಮಗಳನ್ನು ಹೆಚ್ಚಾಗಿ ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಪ್ರದರ್ಶನ ಮಾಡುವುದು ಮುಖ್ಯವೆಂದು ಭಾವಿಸಿದ್ದು, ಇದಕ್ಕಾಗಿ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಈ ಜಿಲ್ಲೆಗಳಲ್ಲಿ 2026ರ ಜೂನ್ 22 ರಿಂದ 27 ರವರೆಗೆ ಈ ಕಾರ್ಯಕ್ರಮವನ್ನು ಏರ್ಪಡಿಸಲು ನಿರ್ಧರಿಸಿದೆ. ಕನಕದಾಸರ ಮಹತ್ವದ ಕೀರ್ತನೆ ಮತ್ತು ಕಾವ್ಯ ಭಾಗವನ್ನು ಆಯ್ದು ಅವರ ತತ್ವಾದರ್ಶಗಳನ್ನು ಜನತೆಗೆ ತಲುಪಿಸುವುದೇ ಈ ಕಾರ್ಯಕ್ರಮದ ಉದ್ದೇಶ. ಇದಕ್ಕಾಗಿ ರಾಷ್ಟ್ರ ಮಟ್ಟದಲ್ಲಿ ಖ್ಯಾತಿ ಪಡೆದಿರುವ ಶ್ರೀಮತಿ ಸ್ನೇಹಾ ಕಪ್ಪಣ್ಣ ಅವರ ನೃತ್ಯ ಸಂಯೋಜನೆ, ಅಷ್ಟೇ ಪ್ರಸಿದ್ಧರಾಗಿರುವ ನೃತ್ಯ ರೂಪಕದ ಸಂಗೀತ ತಜ್ಞ ಡಾ. ಪ್ರವೀಣ್ .ಡಿ. ರಾವ್ ಅವರ ನೃತ್ಯ ಸಂಯೋಜನೆ ಒಳಗೊಂಡ ಆಕರ್ಷಕ ನೃತ್ಯ ರೂಪಕ ಇದಾಗಿದೆ ಎಂದು ಅವರು ತಿಳಿಸಿದ್ದಾರೆ. ಹದಿನೈದು–ಹದಿನಾರನೆಯ ಶತಮಾನದ ನಡುವೆ ಬಾಳಿದ ಸಂತಕವಿ ಕನಕದಾಸರು ಸಾಮಾಜಿಕ ಕಾಳಜಿ ಮತ್ತು ಧಾರ್ಮಿಕ ಚಿಂತನೆಗಳ ಮೂಲಕ ಮಹತ್ತನ್ನು ಸಾಧಿಸಿದ ಅನುಭಾವಿ, ತಪಸ್ವಿ. ಸಮಾಜದಲ್ಲಿರುವ ಜಾತಿ, ಕುಲ, ವರ್ಗ, ವರ್ಣ, ಮೌಢ್ಯ, ತಾರತಮ್ಯಗಳ ನಿರ್ಮೂಲನದ ಬಗ್ಗೆ ಭೋದಿಸಿದ; ಆದರ್ಶ ಸಮಾಜಕ್ಕೆ ಅಗತ್ಯವಾದ ಸಾಮರಸ್ಯ, ಸಹಬಾಳ್ವೆ, ಸಹಿಷ್ಣುತೆ, ಸೋದರತ್ವವನ್ನು ತನ್ನ ನಡೆ ಮತ್ತು ನುಡಿಗಳ ಮೂಲಕ ಪ್ರತಿಪಾದಿಸಿದ ದಾರ್ಶನಿಕ ಕವಿ. ಭಕ್ತಿಯನ್ನು ಜ್ಞಾನೋಪಾಸನೆಗೆ ಬಳಸಿದ, ಸಾಮಾಜೀಕರಣಗೊಳಿಸಿದ ಭಕ್ತಕವಿ. ಭಕ್ತರಾಗಿ, ದಾಸರಾಗಿ, ಕವಿಯಾಗಿ, ದಾರ್ಶನಿಕರಾಗಿ, ಸಮಾಜ ವಿಜ್ಞಾನಿಯಾಗಿ, ಜನಪದ ಕವಿಯಾಗಿ, ತತ್ವಜ್ಞಾನಿಯಾಗಿ ಕನಕದಾಸರದು ಬಹುತ್ವದ ವ್ಯಕ್ತಿತ್ವ. ತಮ್ಮ 04 ಕಾವ್ಯಗಳ ಮೂಲಕ, 350 ಕ್ಕೂ ಹೆಚ್ಚು ಕೀರ್ತನೆಗಳ ಮೂಲಕ ಕನ್ನಡ ಸಾಂಸ್ಕೃತಿಕ ಕ್ಷೇತ್ರಕ್ಕೆ ಅವರು ನೀಡಿದ ಕೊಡುಗೆ ಅಪೂರ್ವ; ಅನನ್ಯ.

ಈ ಎಲ್ಲಾ ಅಂಶಗಳನ್ನು ನೃತ್ಯ ರೂಪಕದ ಮೂಲಕ ಪ್ರಸಾರ ಮಾಡುವ ದೃಷ್ಟಿಯಿಂದ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರದ ವತಿಯಿಂದ ನಿರ್ಮಿಸಲಾಗಿದೆ.

# ಶಿಕ್ಷಕರ ಕಿರುಕುಳಕ್ಕೆ ಬೇಸತ್ತು ವಿದ್ಯಾರ್ಥಿ ಆತ್ಮಹತ್ಯೆ

**ಬೀದರ್:** ಮುಖ್ಯ ಶಿಕ್ಷಕರ ಕಿರುಕುಳಕ್ಕೆ ಬೇಸತ್ತು ಶಾಲೆಯ 4ನೇ ಮಹಡಿಯಿಂದ ಬಿದ್ದು ವಿದ್ಯಾರ್ಥಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೀದರ್‌ನ ಪ್ರತಾಪ್ ನಗರದ ಬಳಿ ನಡೆದಿದೆ.



ಶಾಂತಿನಗರದ ನಿವಾಸಿ ಸಮೀರ್(15) ಮೃತ ಬಾಲಕನಾಗಿದ್ದು, ಶಾಲೆಯಲ್ಲಿ ಈತ SSLC ವ್ಯಾಸಂಗ ಮಾಡುತ್ತಿದ್ದ. ಇಂದು ಬೆಳಗ್ಗೆ ಸ್ಕೂಲ್‌ಗೆ ಹೋಗಿ ನಾಲ್ಕನೇ ಮಹಡಿಯಿಂದ ಹಾರಿ ಸಾವನ್ನಪ್ಪಿದ್ದಾನೆ. ಆತ್ಮಹತ್ಯೆ ಮಾಡಿಕೊಂಡ ವಿಷಯವನ್ನು ಪೋಷಕರಿಗೆ ಹೇಳದೇ ವಿದ್ಯಾರ್ಥಿಯ ಮೃತದೇಹವನ್ನು ಶಾಲೆಯ ಆಡಳಿತ ಮಂಡಳಿ ಬ್ರಿಮ್ಸ್ ಆಸ್ಪತ್ರೆಯ ಶವಗಾರಕ್ಕೆ ಸಾಗಿಸಿದ್ದಾರೆ.

ಹೇಳದೇ ಕೇಳದೇ ಆಸ್ಪತ್ರೆಗೆ ರವಾನಿಸಿರುವುದು ಹಲವು ಅನುಮಾನಕ್ಕೆ ಕಾರಣವಾಗಿದೆ. ಈ ಕುರಿತು ನ್ಯೂ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 1ನೇ ತರಗತಿಯಿಂದಲೂ ಇದೇ ಶಾಲೆಯಲ್ಲಿ ಓದುತ್ತಿದ್ದ. ಹೆಚ್ಚಿನ ಅಂಕ ತೆಗೆದುಕೊಳ್ಳಬೇಕು. ಶಾಲೆಯಲ್ಲಿ ಕಸ ಗುಡಿಸುವ ಕೆಲಸ ಮಾಡಬೇಕು ಎಂದು ಮುಖ್ಯ ಶಿಕ್ಷಕರು ಕಿರುಕುಳ ನೀಡಿದ್ದಾರೆ. ಹೀಗಾಗಿ ಕಿರುಕುಳದಿಂದ ಬೇಸತ್ತು ಸಾವನ್ನಪ್ಪಿದ್ದಾನೆಂದು ಮೃತ ವಿದ್ಯಾರ್ಥಿಯ ಪೋಷಕರು ಆರೋಪಿಸಿದ್ದಾರೆ.

# ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಶಾಸಕ ಮೇಟಿ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಮುಂಗಾರು ಮಳೆ ಪ್ರಾರಂಭವಾಗಿದ್ದು, ಪ್ರವಾಹ ಪರಿಸ್ಥಿತಿ ಉಂಟಾದಲ್ಲಿ ಅದನ್ನು ಸಮರ್ಪವಾಗಿ ಎದುರಿಸಲು ಮುಂಜಾಗ್ರತವಾಗಿ ಎಲ್ಲ ರೀತಿಯ ಸಿದ್ದತೆ ಮಾಡಿಕೊಳ್ಳುವಂತೆ ಬಾಗಲಕೋಟೆ ಶಾಸಕ ಉಮೇಶ ಮೇಟಿ ಅಧಿಕಾರಿಗಳಿಗೆ ಸೂಚನೆ ನೀಡಿದರು.




ತಾಲೂಕಾ ಪಂಚಾಯತ ಸಭಾಭವನದಲ್ಲಿ ಬುಧವಾರ ಪ್ರಸಕ್ತ ಸಾಲಿನ ಪ್ರವಾಹ ಮುಂಜಾಗ್ರತಾ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕಳೆದ ವರ್ಷಗಳ ಪ್ರವಾಹ ಅನುಭವವನ್ನು ಗಮನದಲ್ಲಿಟ್ಟುಕೊಂಡು ಮುನ್ನಚ್ಚರಿಕೆ ಕ್ರಮ ಅನುಸರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕೃಷ್ಣಾನದಿಯ ಪ್ರವಾಹ ಸಂಭವಿಸಿದರೆ, ಬಾಗಲಕೋಟೆ ಮತಕ್ಷೇತ್ರ ವ್ಯಾಪ್ತಿಯ 9 ಗ್ರಾಮಳು ತುತ್ತಾಗುತ್ತಿವೆ. ಈ ಗ್ರಾಮಗಳಲ್ಲಿ ಮುನ್ನಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ತಿಳಿಸಿದರು.

ಪ್ರವಾಹ ಸಂದರ್ಭದಲ್ಲಿ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಅಗತ್ಯವಿರುವ ಪರಿಹಾರ ಕೇಂದ್ರಗಳು, ಕುಡಿಯುವ ನೀರು, ಆಹಾರ ಸಾಮಗ್ರಿ ಹಾಗೂ ಆರೋಗ್ಯ ಸೇವಗಳ ವ್ಯವಸ್ಥೆಯನ್ನು ಸಕಾಲದಲ್ಲಿ ಸಿದ್ದಪಡಿಸಿಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ತಾಲೂಕಾ ಆಡಳಿತ, ಪೊಲೀಸ್, ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಿ ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಲು ತಿಳಿಸಿದ ಅವರು ಮಳೆಯ ಪ್ರಮಾಣ ಹಾಗೂ ಜಲಾಶಯಗಳ ನೀರಿನ ಮಟ್ಟದ ಬಗ್ಗೆ ನಿರಂತರ ಮಾಹಿತಿ ಸಂಗ್ರಹಿಸುವಂತೆ ಸೂಚಿಸಿದರು.

ತಾಲೂಕಾ ವ್ಯಾಪ್ತಿಯಲ್ಲಿ ಆದ ಮಳೆಯ ಬಗ್ಗೆ ಮಾಹಿತಿ ಪಡೆದುಕೊಂಡರು. ಕಳೆದ 24 ಗಂಟೆಗಳಲ್ಲಿ 1.7 ಎಂಎಂ ಪೈಕಿ 7.8 ಎಂಎಂ ಮಳೆಯಾಗಿದೆ. ಜೂನ್ 1 ರಇಂದ 9 ವರೆಗೆ 30.1 ಎಂಎಂ ಪೈಕಿ 53.6 ಎಂಎಂ ದಷ್ಟು ಮಳೆಯಾಗಿದೆ. ಮಳೆಯಿಂದಾಗಿ 5 ಮನೆಗಳು ಭಾಗಶಃ ಹಾನಿಯಾಗಿವೆ. ಒಂದು ಆಕಳು ಮೃತಪಟ್ಟಿದೆ. ಹಾನಿಗೆ ವರದಿಯನ್ನಾದರಿಸಿ ಪರಿಹಾರ ವಿತರಣೆಗೆ ಕ್ರಮವಹಿಸಲಾಗುತ್ತಿದೆ ಎಂದು ತಹಶೀಲ್ದಾರ ವಾಸಯದೇವ ಸ್ವಾಮಿ ಸಭೆಗೆ ತಿಳಿಸಿದರು. ಅಲ್ಲದೇ ಪ್ರವಾಹ ಸಂದರ್ಭದಲ್ಲಿ ಮೇವು ಲಭ್ಯತೆ, ಅಗ್ನಿಶಾಮಕ ದಳ ಸಕ್ರಿಯವಾಗಿದೆ. ದಿನ 24 ಗಂಟೆಗಳ ಕಾಲ ಸಹಾಯವಾಣಿ ಕೇಂದ್ರವನ್ನು (08354-236240) ಸಹ ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ನಂತರ ಮತಕ್ಷೇತ್ರ ವ್ಯಾಪ್ತಿಯ ಕುಡಿಯುವ ನೀರಿನ ಬಗ್ಗೆ ಚರ್ಚೆ ಮಾಡಿದ ಅವರು ರಾಂಪೂರ, ನೀರಲಕೇರಿ, ಬೆಣ್ಣೂರ, ಗುಳಬಾಳ ಶಿರಗುಪ್ಪಿ ಸೇರಿದಂತೆ ಇತರೆ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗುತ್ತಿದ್ದು, ಸಮಸ್ಯೆ ಬಗೆಹಿಸುವ ಕೆಲಸವನ್ನು ಅಧಿಕಾರಿಗಳು ತುರ್ತಾಗಿ ಮಾಡಬೇಕು. ಅಗತ್ಯವಿದ್ದಲ್ಲಿ ಹೊಸ ಬೋರವೆಲ್ ಸಹ ಕೊರೆಯಿಸಲು ಸೂಚಿಸಿದರು. ಪೈಪನೈಲ್ ದುರಸ್ಥಿ ಇದ್ದಲ್ಲಿ ತಕ್ಷಣ ಕ್ರಮವಹಿಸಲು ತಿಳಿಸಿದರು.

ನಂತರ ಕೃಷಿ, ತೋಟಗಾರಿಕೆ, ಆರೋಗ್ಯ, ಶಿಕ್ಷಣ, ಲೋಕೋಪಯೋಗಿ ಇಲಾಖೆ, ಅರಣ್ಯ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಶಿಶು ಅಭಿವೃದ್ದಿ ಯೋಜನೆ, ಸಹಕಾರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸೇರಿದಂತೆ ಇತರೆ ಇಲಾಖೆಗಳ ಪ್ರಗತಿ ಪರಿಶೀಲನೆ ಮಾಡಿದರು. ಸಭೆಗೆ ಗೈರು ಹಾಜರಾದ ಹೆಸ್ಕಾಂ ಅಧಿಕಾರಿಗೆ ನೋಟಿಸ್ ನೀಡಲು ತಿಳಿಸಿದರು. ಅಧಿಕಾರಿಗಳು ಸರಿಯಾಗಿ ಕೆಲಸ ಮಾಡಿದರೆ ಮಾತ್ರ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಅಭಿವೃದ್ಧಿ ಕೆಲಸಗಳಿಗೆ ನನ್ನ ಸಹಕಾರ ಯಾವಾಗಲೂ ಇರುತ್ತದೆ. ಕೆಲಸದಲ್ಲಿ ಆಸಕ್ತಿ ಇಲ್ಲದವರು ವರ್ಗಾವಣೆ ಮಾಡಿಕೊಂಡು ಬೇರೆಡೆ ಹೋಗುವಂತೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕರಿಗೆ ತಹಶೀಲ್ದಾರ ಕಾರ್ಯಾಲಯ ಹಾಗೂ ತಾಲೂಕಾ ಪಂಚಾಯತ ವತಿಯಿಂದ ಸನ್ಮಾನ ಮಾಡಲಾಯಿತು. ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕರು ಆಗಿರುವ ತಾ.ಪಂ ಆಡಳಿತಾಧಿಕಾರಿ ಟಿ.ಎಸ್.ರುದ್ರೇಶಪ್ಪ, ಬಾಗಲಕೋಟೆ ತಹಶೀಲ್ದಾರ ವಾಸುದೇವ ಸ್ವಾಮಿ, ಹುನಗುಂದ ತಹಶೀಲ್ದಾರ ಪ್ರದೀಪ ಹಿರೇಮಠ, ಬಾಗಲಕೋಟೆ ತಾ.ಪಂ ಇಒ ಸುಭಾಷ ಸಂಪಗಾವಿ, ಹುನಗುಂದ ತಾ.ಪಂ ಇಒ ಮುರಳಿಧರ ದೇಶಪಾಂಡೆ ಸೇರಿದಂತೆ ವಿವಿಧ ತಾಲೂಕಾ ಮಟ್ಟದ ಅಧಿಕಾರಿಗಳು ತಾ.ಪಂ ಲೆಕ್ಕಾಧಿಕಾರಿ ರಾಜೇಶ ಚೌಧರಿ ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಶುಭ ಹಾರೈಕೆ




**ಗಂಗಾವತಿ:** ಸೇಂಟ್ ಪಾಲ್ಸ್ ಡಿ ಫಾರ್ಮಸಿ ಕಾಲೇಜು, ಗಂಗಾವತಿಯ ದ್ವಿತೀಯ ವರ್ಷದ ಡಿ.ಫಾರ್ಮ್ ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

**ಅಗ್ರ ಶ್ರೇಣಿಯ ಸಾಧಕರು:**

**ಗಾದಿಲಿಂಗಪ್ಪ– 872 ಅಂಕಗಳು (80%)**
**ಕೆ. ಪೂರ್ಣಿಮಾ– 848 ಅಂಕಗಳು (77%)**
**ಸಹನಾ– 848 ಅಂಕಗಳು (77%)**
**ಪೂಜಾ– 844 ಅಂಕಗಳು (77%)**
**ಪಿ. ಶ್ರುತಿ– 833 ಅಂಕಗಳು (76%)**
**ಲಲಿತಾ– 826 ಅಂಕಗಳು (75%)**
**ಪ್ರಿಯಾಂಕ ಕೆ.– 825 ಅಂಕಗಳು (75%)**
**ಬಸವರಾಜೇಶ್ವರಿ– 825 ಅಂಕಗಳು (75%)**

ಇದಲ್ಲದೆ, ಉಳಿದ ಎಲ್ಲಾ 46 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ (First Class) ಉತ್ತೀರ್ಣರಾಗಿ ಕಾಲೇಜಿಗೆ ಹೆಮ್ಮೆ ತಂದಿದ್ದಾರೆ: ಕಾಲೇಜು ಸತತ 7 ವರ್ಷದಿಂದ ಉತ್ತಮ ಫಲಿತಾಂಶ ನೀಡುತ್ತಿದೆ ವಿದ್ಯಾರ್ಥಿಗಳ ಈ ಸಾಧನೆ ಅವರ ಕಠಿಣ ಪರಿಶ್ರಮ, ಶಿಸ್ತು ಹಾಗೂ ಅಧ್ಯಾಪಕರ ಮಾರ್ಗದರ್ಶನದ ಪ್ರತಿಫಲವಾಗಿದೆ. ಈ ಯಶಸ್ಸಿಗೆ ಕಾರಣರಾದ ಎಲ್ಲಾ ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕ ವೃಂದವನ್ನು ಕಾಲೇಜು ಆಡಳಿತ ಮಂಡಳಿ ಅಭಿನಂದಿಸುತ್ತದೆ.

# ಶ್ರೀ ಪಂಚಮುಖಿ ಗಣೇಶ ದೇವಸ್ಥಾನದಲ್ಲಿ ವಿಶೇಷ ಪೂಜೆ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ದೇಶದ ಪ್ರಜಾಪ್ರಭುತ್ವ ಇತಿಹಾಸದಲ್ಲಿ ಅತಿ ಹೆಚ್ಚು ಅವಧಿಗೆ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಮಂತ್ರಿ ಎಂಬ ವಿಶಿಷ್ಟ ಗೌರವಕ್ಕೆ ಪಾತ್ರರಾದ ಶ್ರೀ ನರೇಂದ್ರ ಮೋದಿಜಿ ಅವರ ಸಾಧನೆಯನ್ನು ಸ್ಮರಿಸಿ, ಇಂದು ಹಗರಿಬೊಮ್ಮನಹಳ್ಳಿಯ ಶ್ರೀ ಪಂಚಮುಖಿ ಗಣೇಶ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಅವರ ಆಯುರಾರೋಗ್ಯ ಹಾಗೂ ದೇಶದ ಅಭಿವೃದ್ಧಿಗಾಗಿ ಪ್ರಾರ್ಥಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮಂಡಲ ಅಧ್ಯಕ್ಷ ಬೆಣಕಲ್ ಪ್ರಕಾಶ್ ಅವರು, "ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೇಶವನ್ನು ಅಭಿವೃದ್ಧಿಯ ಹೊಸ ಎತ್ತರಕ್ಕೆ ಕೊಂಡೊಯ್ದ ನಾಯಕರು. ಅವರ ದೂರದೃಷ್ಟಿಯ ಆಡಳಿತದಿಂದ ಭಾರತವು ವಿಶ್ವಮಟ್ಟದಲ್ಲಿ ತನ್ನದೇ ಆದ ಗುರುತನ್ನು ಮೂಡಿಸಿಕೊಂಡಿದೆ. ಬಡವರು, ರೈತರು, ಮಹಿಳೆಯರು ಹಾಗೂ ಯುವಕರ ಅಭಿವೃದ್ಧಿಗಾಗಿ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ" ಎಂದು ಹೇಳಿದರು. ಪುರಸಭೆ ಸದಸ್ಯ ಜೋಗಿ ಹನುಮಂತಪ್ಪ ಮಾತನಾಡಿ, "ಮೋದಿ ಅವರ ಆಡಳಿತದಲ್ಲಿ ಗ್ರಾಮೀಣ ಪ್ರದೇಶಗಳಿಗೂ ಅಭಿವೃದ್ಧಿಯ ಸ್ಪರ್ಶ ದೊರೆತಿದೆ. ಮೂಲಸೌಕರ್ಯ, ಕುಡಿಯುವ ನೀರು, ರಸ್ತೆ ಹಾಗೂ ಡಿಜಿಟಲ್ ಸೇವೆಗಳ ವಿಸ್ತರಣೆಗೆ ಅವರು ವಿಶೇಷ ಆದ್ಯತೆ ನೀಡಿದ್ದಾರೆ" ಎಂದು ತಿಳಿಸಿದರು.

ಪುರಸಭೆ ಸದಸ್ಯ ನವೀನ್ ಕುಮಾರ್ ಮಾತನಾಡಿ, "ಭಾರತವನ್ನು ಆತ್ಮನಿರ್ಭರ ರಾಷ್ಟ್ರವನ್ನಾಗಿ ರೂಪಿಸುವ ಸಂಕಲ್ಪದೊಂದಿಗೆ ಮೋದಿ ಅವರು ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ನಾಯಕತ್ವದಲ್ಲಿ ದೇಶವು ಆರ್ಥಿಕ ಹಾಗೂ ತಾಂತ್ರಿಕ ಕ್ಷೇತ್ರಗಳಲ್ಲಿ ಮಹತ್ವದ ಸಾಧನೆ ಮಾಡಿದೆ" ಎಂದು ಹೇಳಿದರು.

ವಿ. ಕನಕಪ್ಪ ಅವರು ಮಾತನಾಡಿ, "ನರೇಂದ್ರ ಮೋದಿ ಅವರು ಕೇವಲ ರಾಜಕಾರಣಿಯಲ್ಲ, ಜನರ ಆಶೋತ್ತರಗಳಿಗೆ ಸ್ಪಂದಿಸುವ ಪ್ರಭಾವಿ ನಾಯಕರು. ದೇಶದ ಭದ್ರತೆ, ಅಭಿವೃದ್ಧಿ ಮತ್ತು ಸಾಮಾಜಿಕ ನ್ಯಾಯಕ್ಕೆ ಅವರು ನೀಡುತ್ತಿರುವ ಆದ್ಯತೆ ಶ್ಲಾಘನೀಯ" ಎಂದು ಅಭಿಪ್ರಾಯಪಟ್ಟರು.

ನಗರ ಘಟಕದ ಅಧ್ಯಕ್ಷ ಮಂಜುನಾಥ್ ಹಿರೇಮಠ್ ಮಾತನಾಡಿ, "ಮೋದಿ ಅವರ ಆಡಳಿತವು ಪಾರದರ್ಶಕತೆ, ಪ್ರಾಮಾಣಿಕತೆ ಹಾಗೂ ಜನಸೇವೆಗೆ ಮಾದರಿಯಾಗಿದೆ. ವಿಶ್ವದ ಅನೇಕ ರಾಷ್ಟ್ರಗಳು ಭಾರತದ ನಾಯಕತ್ವವನ್ನು ಗೌರವದಿಂದ ನೋಡುತ್ತಿರುವುದು ಅವರ ಕಾರ್ಯವೈಖರಿಯ ಫಲವಾಗಿದೆ" ಎಂದು ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಡಿಜಿಟಲ್ ಇಂಡಿಯಾ, ಸ್ವಚ್ಛ ಭಾರತ ಅಭಿಯಾನ, ಆತ್ಮನಿರ್ಭರ ಭಾರತ, ಮೇಕ್ ಇನ್ ಇಂಡಿಯಾ, ಪಿಎಂ ಕಿಸಾನ್, ಜಲ್ ಜೀವನ ಮಿಷನ್ ಸೇರಿದಂತೆ ಹಲವು ಯೋಜನೆಗಳು ಯಶಸ್ವಿಯಾಗಿ ಜಾರಿಯಾಗಿವೆ. ದೇಶದ ಆರ್ಥಿಕ ಬೆಳವಣಿಗೆ, ಮೂಲಸೌಕರ್ಯ ಅಭಿವೃದ್ಧಿ ಮತ್ತು ಜಾಗತಿಕ ಮಟ್ಟದಲ್ಲಿ ಭಾರತದ ಪ್ರಭಾವವನ್ನು ಹೆಚ್ಚಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ಮುಖಂಡರು ಅಭಿಪ್ರಾಯಪಟ್ಟರು.


ಈ ಸಂದರ್ಭದಲ್ಲಿ ಎಸ್‌ಸಿ ಮೋರ್ಚಾ ಅಧ್ಯಕ್ಷ ಮರಿಯಪ್ಪ, ನಗರ ಘಟಕದ ಶಿವಯೋಗಿ ಸರ್, ಮಲ್ಲಯ್ಯ ಸ್ವಾಮಿ, ಮಂಜುನಾಥ್, ದೊಡ್ಡ ಬಸವರಾಜ್, ರಮೇಶ್ ಪೂಜಾರಿ, ಕೋಗಳಿ ಹನುಮಂತಪ್ಪ, ಕಾರ್ಯಾಲಯ ಕಾರ್ಯದರ್ಶಿ ಬ್ಯಾಟಿ ಸಂದೀಪ್, ಯುವರಾಜ್ ಗಡ್ಡಿ ಹಾಗೂ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

# 1539 ರಸಗೊಬ್ಬರ ಬ್ಯಾಗ್ ಜಪ್ತಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಮನ್ನಳ್ಳಿ ಗ್ರಾಮದಲ್ಲಿ ಒಟ್ಟು 9.35 ಲಕ್ಷಗಳ ರೂ. ಗಳ ಮಳಿಗೆ 1539 ರಸಗೊಬ್ಬರ ಬ್ಯಾಗಗಳನ್ನು ಜಪ್ತಿ ಮಾಡಲಾಗಿರುತ್ತದೆ. ಎಂದು ಬೀದರ ಜಂಟಿ ಕೃಷಿ ನಿರ್ದೇಶಕರು ದೇವಿಕಾ ಅವರು ತಿಳಿಸಿದ್ದಾರೆ.

2026ರ ಜೂನ್ 10ರ ಮಂಗಳವಾರ ರಂದು ಮೇ. ವೆಂಕಟೇಶ್ವರ ಫರ್ಟಿಲೈಜರ್ಸ, ಮನ್ನಳ್ಳಿಯಲ್ಲಿರುವ ರಸಗೊಬ್ಬರ ಮಾರಾಟ ಮಳಿಗೆಗೆ ಭೇಟಿ ನೀಡಿ ಪರಿಶೀಲನೆ ಕೈಗೊಂಡು ಹೆಚ್ಚಿನ ಬೆಲೆಗಳಿಗೆ ರಸಗೊಬ್ಬರ ಮಾರಾಟ ಮಾಡುತ್ತಿವುದು ಕಂಡು ಬಂದಲ್ಲಿ ಎಚ್ಚರಿಕೆ ನೀಡಿದ್ದಾರೆ.



ಪರಿಶೀಲನೆ ಸಮಯದಲ್ಲಿ ರೈತರಿಗೆ ರಸಗೊಬ್ಬರವು ನಿಗದಿತ ಬೆಲೆಗಿಂತ ಹೆಚ್ಚಿನ ಬೆಲೆಯಲ್ಲಿ ಮಾರಾಟ ಮಾಡಿರುವುದು ಕಂಡು ಬಂದಿರುತ್ತದೆ. ಇದು ರಸಗೊಬ್ಬರ ನಿಯಂತ್ರಣ ಆದೇಶ, 1983ರ ಅಟಚಿಣಾಜ 3(3) ಉಲ್ಲಂಘನೆಯಾಗಿರುತ್ತದೆ. ಅಲ್ಲದೇ ರಸಗೊಬ್ಬರ ಪರವಾನಿಗೆಯಲ್ಲಿ ಅನುಮತಿಸದೇ ಇರುವ ರಸಗೊಬ್ಬರವು ಮಾರಾಟ ಮಾಡುತ್ತಿರುವುದು ಈ ರಸಗೊಬ್ಬರ ಮಳಿಗೆಯಲ್ಲಿ ಕಂಡು ಬಂದಿರುತ್ತದೆ. ಇದು ರಸಗೊಬ್ಬರ ನಿಯಂತ್ರಣ ಆದೇಶ, 1983ರ ಅಟಚಿಣಾಜ 8 ಉಲ್ಲಂಘನೆಯಾಗಿರುತ್ತದೆ ಎಂದು ತಿಳಿಸಿದರು.

ಮೇ/ವೆಂಕಟೇಶ್ವರ ಫರ್ಟಿಲೈಜರ್ಸ, ಮನ್ನಳ್ಳಿ ರಸಗೊಬ್ಬರ ಮಾರಟ ಮಳಿಗೆಯಲ್ಲಿ ರಸಗೊಬ್ಬರ ನಿಯಂತ್ರಣ ಆದೇಶ, 1983ರ ಅಟಚಿಣಾಜ 3(3) ಮತ್ತು 8 ಉಲ್ಲಂಘನೆ ಮಾಡಿ ರಸಗೊಬ್ಬರ ಮಾರಾಟ ಮಾಡುತ್ತಿರುವ ಪ್ರಯುಕ್ತ ಮಳಿಗೆಯಲ್ಲಿರುವ 1539 ರಸಗೊಬ್ಬರ ಬ್ಯಾಗಗಳು ಜಪ್ತಿ ಮಾಡಲಾಗಿರುತ್ತದೆ. ಜಪ್ತಿ ಮಾಡಲಾದ ರಸಗೊಬ್ಬರವು ಒಟ್ಟು ರೂ. 9.35 ಲಕ್ಷಗಳ ಮೌಲ್ಯದಾಗಿರುತ್ತದೆ ಎಂದರು.

ಪರಿಶೀಲನೆ ಸಮಯದಲ್ಲಿ ಈ ಸಂದರ್ಭದಲ್ಲಿ ಬೀದರ, ಶ್ರೀ. ಮಛೇಂದ್ರನಾಥ ವಡ್ಡಿ (ಸಹಾಯಕ ಕೃಷಿ ನಿರ್ದೇಶಕರು (ಜಾರಿ ದಳ), ಶ್ರೀಮತಿ ಆರತಿ ಪಾಟೀಲ (ಸಹಾಯಕ ಕೃಷಿ ನಿರ್ದೇಶಕರು, ಬೀದರ) ಹಾಗೂ ಶ್ರೀ. ವಿಜಯಕುಮಾರ (ಕೃಷಿ ಅಧಿಕಾರಿ, ರೈ.ಸಂ.ಕೇಂ. ಮನ್ನಳ್ಳಿ) ಇವರನ್ನೊಳಗೊಂಡ ತಂಡವು ಉಪಸ್ಥಿತರಿದ್ದರು.

# ಬುದ್ಧಿಮಾಂಧ್ಯ ಮಕ್ಕಳಿಗೆ ಸಿಹಿ ವಿತರಣೆ




**ಗಂಗಾವತಿ:** ಶ್ರೀಮತಿ ಗಾಲಿ ಅರುಣಾಲಕ್ಷ್ಮಿ ಜನಾರ್ಧನ್ ರೆಡ್ಡಿ ಮೇಡಂ ಅವರ ಹುಟ್ಟುಹಬ್ಬದ ಅಂಗವಾಗಿ, ಸಾರ್ಥಕ ಸೇವಾ ಮನೋಭಾವ ಹೊಂದಿರುವ ಅರುಣಾಲಕ್ಷ್ಮಿ ಅಮ್ಮನವರ ಹೆಸರಿನಲ್ಲಿ ನಗರದ ಲಯನ್ಸ್ ಕ್ಲಬ್ ನಲ್ಲಿ ಇರುವ ಬುದ್ದಿಮಾಂಧ್ಯ ಮಕ್ಕಳ ಶಾಲೆಯಲ್ಲಿ ಕೇಕ್ ಕತ್ತರಿಸಿ ವಿವಿಧ ಹಣ್ಣುಗಳನ್ನು ವಿತರಿಸಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಜನಪ್ರಿಯ ಶಾಸಕರಾದ ಗಾಲಿ ಜನಾರ್ದನ್ ರೆಡ್ಡಿ ಅಭಿಮಾನಿಗಳು ಮತ್ತು ಬಿಜೆಪಿ ಪಕ್ಷದ ಗ್ರಾಮೀಣ ಮಂಡಲ ಉಪಾಧ್ಯಕ್ಷರಾದ ಶಿವಪ್ರಸಾದ್ ರೆಡ್ಡಿ,, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ್ ಹಿರೇಮಠ್, ಕಾರ್ಯದರ್ಶಿ ಕಾಶಿರಾವ್, ಯುವ ಮೋರ್ಚಾದ ಅಧ್ಯಕ್ಷರಾದ ವಿಶ್ವನಾಥ್ ಮಾಲಿಪಾಟೀಲ್, ಉಪಾಧ್ಯಕ್ಷರಾದ ಮಂಜುನಾಥ ಕಲಾಲ್, ಹನುಮೇಶ್, ನಗರ ಯುವ ಮೋರ್ಚಾದ ಅಧ್ಯಕ್ಷ ರಮೇಶ ಹೊಸಮಲಿ, ಖಜಾಂಚಿ ಗಣೇಶ್ ಹಾಗೂ ಮಂಜುನಾಥ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಬಿ.ನಾಗೇಂದ್ರಗೆ ಸಚಿವ ಸ್ಥಾನ ನೀಡಲು ಒತ್ತಾಯ; ಮೆರವಣಿಗೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಿ.ನಾಗೇಂದ್ರ ಅಭಿಮಾನಿಗಳ ಬಳಗ ಮತ್ತು ಕಾಂಗ್ರೆಸ್ ಪಕ್ಷದ ಅಭಿಮಾನಿಗಳು ಕಾರ್ಯಕರ್ತರು ಬಳ್ಳಾರಿ ನಗರದ ಕಾಗೆ ಪಾರ್ಕ್ ಯಿಂದ ಗಡಿಗಿ ಚೆನ್ನಪ್ಪ ವೃತ್ತದ ವರೆಗೆ ಸನ್ಮಾನ್ಯ ಬಿ.ನಾಗೇಂದ್ರರವರಿಗೆ ಸಂಪುಟ ದರ್ಜೆಯ ಸಚಿವ ಸ್ಥಾನವನ್ನು ನೀಡಬೇಕೆಂದು ಮಾನ್ಯ ನೂತನ ಮುಖ್ಯಮಂತ್ರಿಗಳಾದ ಸನ್ಮಾನ್ಯ ಡಿ.ಕೆ. ಶಿವಕುಮಾರ್ ರವರು ಹಾಗೂ ನಿಕಟಪೂರ್ವ ಮುಖ್ಯಮಂತ್ರಿಗಳಾದ ಸನ್ಮಾನ್ಯ ಸಿದ್ದರಾಮಯ್ಯನವರು ಹಾಗೂ ಕೇಂದ್ರದ ಕಾಂಗ್ರೆಸ್ ಪಕ್ಷದ ನಾಯಕರಿಗೂ ಈ ಬೃಹತ್ ಮೆರವಣಿಗೆಯ ಮುಖಾಂತರ ಸನ್ಮಾನ್ಯ ಬಿ.ನಾಗೇಂದ್ರರವರಿಗೆ ಮುಂಬರುವ ಪಟ್ಟಿಯಲ್ಲಿ ಸಚಿವ ಸ್ಥಾನವನ್ನು ನೀಡಬೇಕೆಂದು ಒತ್ತಾಯಿಸಿಕೊಳ್ಳಲಾಗುತ್ತದೆ.




ಮಾನ್ಯ ಕೇಂದ್ರ ಮತ್ತು ರಾಜ್ಯದ ಕಾಂಗ್ರೆಸ್ ಪಕ್ಷದ ವರಿಷ್ಠರು ಬಳ್ಳಾರಿ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಹಿತ ದೃಷ್ಟಿಯಿಂದ ಹಾಗೂ ಬಳ್ಳಾರಿ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗಾಗಿ ಸನ್ಮಾನ್ಯ ಬಿ.ನಾಗೇಂದ್ರರವರಿಗೆ ಸಚಿವ ಸ್ಥಾನವನ್ನು ನೀಡಿದರೆ ಕಾಂಗ್ರೆಸ್ ಪಕ್ಷದ ಬಲವರ್ಧನೆಗೆ ಮತ್ತು ಅಭಿವೃಧ್ಧಿಗೆ ತುಂಬಾ ಉಪಯುಕ್ತವಾಗುತ್ತದೆ. ಮುಂಬರ್ತಕ್ಕಂತ ಎಲ್ಲಾ ಸ್ಥಳೀಯ ಚುನಾವಣೆಗಳಾದ ತಾಲೂಕ ಪಂಚಾಯತಿ, ಜಿಲ್ಲಾ ಪಂಚಾಯತಿ ಹಾಗೂ ಮಹಾನಗರ ಪಾಲಿಕೆ ಚುನಾವಣೆ ಕಾಂಗ್ರೆಸ್ ಪಕ್ಷದ ಅಧಿಕಾರ ಚುಕ್ಕಾಣಿ ಹಿಡಿಯುವುದಕ್ಕೆ ನಾಗೇಂದ್ರ ಅವರಿಗೆ ಸಚಿವ ಸ್ಥಾನವನ್ನು ನೀಡಿದರೆ ತುಂಬಾ ಅನುಕೂಲವಾಗುತ್ತದೆ.

ಬಳ್ಳಾರಿ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರನ್ನು ಕಾರ್ಯಕರ್ತರನ್ನು ಪಕ್ಷದ ಅಭಿಮಾನಿಗಳನ್ನು ಜೊತೆಗೂಡಿ ಕೊಂಡೊಯ್ಯುವುದು, ಹಾಗೂ ಕಾರ್ಯಕರ್ತರ, ಮುಖಂಡರ ನೆಚ್ಚಿನ ನಾಯಕರಾಗಿ ಹೊರಹೊಮ್ಮಿದ್ದಾರೆ. ಎಲ್ಲರನ್ನೂ ಪ್ರೀತಿ ವಿಶ್ವಾಸ ಹಾಗೂ ಮನಸ್ಸನ್ನು ಗೆದ್ದಿರ್ತಕಂತ ಬಳ್ಳಾರಿಯ ಜನನಾಯಕರಾಗಿ ಜನರ ಮನಸ್ಸನ್ನು ಗೆದ್ದಿರ್ತಕ್ಕಂತ ಜನಮಾನಸದ ನಾಯಕರಾಗಿದ್ದಾರೆ. ನಾಗೇಂದ್ರರವರನ್ನು ಬಳ್ಳಾರಿ ಜಿಲ್ಲೆಯಲ್ಲಿ ಅಹಿಂದ ನಾಯಕ, ಅಭಿವೃದ್ಧಿಯ ಕಾಯಕ, ಪ್ರೀತಿಯ ನಾವೀಕ ಕಾಂಗ್ರೆಸ್ ಪಕ್ಷದ ಸೇವಕನಾಗಿ ಬಳ್ಳಾರಿ ಸಾರ್ವಜನಿಕರ ನಂಬಿಕೆಯನ್ನು ಗಳಿಸಿಕೊಂಡಿದ್ದಾರೆ.

ನಿಕಟ ಪೂರ್ವ ಮುಖ್ಯಮಂತ್ರಿಗಳು ಸನ್ಮಾನ್ಯ ಸಿದ್ದರಾಮಯ್ಯನವರು ಸಾರ್ವಜನಿಕ ಸಭೆಗಳಲ್ಲಿ ಬಿ.ನಾಗೇಂದ್ರರವರಿಗೆ ನಾನು ಸಚಿವ ಸ್ಥಾನವನ್ನು ಕೊಟ್ಟೆ ಕೊಡುತ್ತೇನೆ ಅನೇಕ ಸಭೆಗಳಲ್ಲಿ ಹೇಳಿದ್ದಾರೆ, ಇದೇ ರೀತಿಯಲ್ಲಿ ಸನ್ಮಾನ್ಯ ನೂತನ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ರವರು ಅನೇಕ ಬಾರಿ ಇದೇ ಮಾತನ್ನು ಪುನರುಚ್ಚಾರವನ್ನು ಮಾಡಿದ್ದಾರೆ.

ಆದ್ದರಿಂದ ಮಾನ್ಯ ವರಿಷ್ಠರಲ್ಲಿ ಬಿ. ನಾಗೇಂದ್ರ ಅಭಿಮಾನಿಗಳು ಮತ್ತು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಮುಖಂಡರ, ಹಾಗೂ ಅಭಿಮಾನಿಗಳು ಕಳಕಳಿಯ ಮನವಿ, ಬಳ್ಳಾರಿ ಜಿಲ್ಲೆಯಿಂದ ಸನ್ಮಾನ್ಯ ಬಿ. ನಾಗೇಂದ್ರರವರಿಗೆ ಸಚಿವ ಸ್ಥಾನವನ್ನು ನೀಡಬೇಕೆಂದು ವಂದನೆಗಳೊಂದಿಗೆ ಈ ಮೂಲಕ ಒತ್ತಾಯಿಸುತ್ತೇವೆ.

ಈ ಸಂದರ್ಭದಲ್ಲಿ ಸಂಗನಕಲ್ಲು ವಿಜಯಕುಮಾರ್, ವೈ ಶಿವಕುಮಾರ್, ಮಹಾನಗರ ಪಾಲಿಕೆ ಸದಸ್ಯರು ನಾಗಲಕೆರೆ ಗೋವಿಂದ, ಮುದಿ ಮಲ್ಲಯ್ಯ ನಾಗಭೂಷಣ ಗೌಡ, ಬಿ ಎಂ ಪಾಟೀಲ್, ಮಲ್ಲಿಕಾರ್ಜುನ, ಮಲ್ಲೇಶ್ವರಿ, ಕಾಂಗ್ರೆಸ್ ಪ್ರಚಾರ ಸಮಿತಿ ವೀರನಗೌಡ, ಅಮರಾಪುರ ಗಾದಿಲಿಂಗ, ಅಸುಂಡಿ ಹನುಮೇಶ್, ಅರುಣ್, ರಾಮಾಂಜನಿ, ಅಕ್ಕಿ ಶಿವಕುಮಾರ್, ದಿವಾಕರ್, ಮೀನಳ್ಳಿ ವೆಂಕಟೇಶಣ್ಣ, ಗಂಗಾಧರ, ದುರ್ಗಾ ಪ್ರಸಾದ್, ಕನಕ, ದಾರದಮಿಲ್ಲಾ ಲೋಕೇಶ್, ವೀರಸೇನಾ ರೆಡ್ಡಿ, ಶ್ರೀಶೈಲ, ಪೋಲಿಸ್ ಹೊನ್ನೂರಪ್ಪ, ಜೋಗಿನಾ ಚಂದ್ರಪ್ಪ, ಜೋಗಿನ ವಿಜಯ್ ಕುಮಾರ್, ಗಣೇಶ್, ಲಿಂಗರಾಜ್, ಹನುಮಂತ, ಭೀಮ, ಕೋಟೆ ರವಿಕುಮಾರ್, ಕೌಲ್ ಬಜಾರ್ ಮುಖಂಡರು, ಇನ್ನು ಮುಂತಾದ ಅನೇಕ ಮುಖಂಡರು ಹಾಗೂ ನೂರಾರು ಅಭಿಮಾನಿಗಳು ಕಾರ್ಯಕರ್ತರು ಉಪಸ್ಥಿತರಿದ್ದರು.

## ಬೇಡಿಕೆ ಈಡೇರಿಕೆಗೆ ಮನವಿ



**ಬೆಂಗಳೂರು:** ಶಾಸಕ ಗೋಪಾಲಕೃಷ್ಣ ಅವರನ್ನು ಕರ್ನಾಟಕ ದಿನಪತ್ರಿಕೆಗಳ ಸಂಘ ರಾಜ್ಯ ಸಮಿತಿ ಪದಾಧಿಕಾರಿಗಳು ಭೇಟಿಯಾಗಿ ಮನವಿ ಪತ್ರ ಸಲ್ಲಿಸಿದರು. ಈಗಾಗಲೇ ನೀಡುತ್ತಿರುವ ಜಾಹೀರಾತು ನೀತಿ 2013 ನೇಮ 2014ರ ಪ್ರಕಾರ ದರವನ್ನು ಪರಿಷ್ಕರಣೆ ಮಾಡಿ ಶೇ. 24 ರಷ್ಟು ಹೆಚ್ಚಿಸಬೇಕು ಎಂಬ ಇನ್ನಿತರ ಬೇಡಿಕೆಗಳ ಈಡೇರಿಕೆಗೆ ಮನವಿ ಮಾಡಲಾಯಿತು. ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರಿಗೆ ಶಿಫಾರಸ್ಸು ಮಾಡಲು ಕೋರಿದವು ಇದಕ್ಕೆ ಪ್ರತಿಕ್ರಿಯಿಸಿ ಈ ಕೂಡಲೇ ಪತ್ರ ಬರೆದು ಒತ್ತಾಯಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ದಿನಪತ್ರಿಕೆಗಳ ಸಂಘದ ರಾಜ್ಯಾಧ್ಯಕ್ಷರಾದ ಡಾ. ಜಿ ವೈ ಪದ್ಮ ನಾಗರಾಜ್, ಗೌರವ ಅಧ್ಯಕ್ಷರಾದ ಡಾ. ಬಿ ಸಮತಾ ದೇಶಮಾನೆ, ನಿರ್ಮಲ ಎಲಿಗಾರ್, ಉಪಾಧ್ಯಕ್ಷರಾದ ವಿ ಅನುಪ್ ಕುಮಾರ, ಪ್ರಧಾನ ಕಾರ್ಯದರ್ಶಿ ಚನ್ನಬಸವ ಬಾಗಲವಾಡ, ಖಜಾಂಚಿ ಖಾನ್ ಸಾಬ್ ಮೋಮಿನ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಪಕ್ಷ ಕಟ್ಟುವ ಕೆಲಸಕ್ಕೆ ಸನ್ನದ್ಧ


**ಬೆಂಗಳೂರು:** ನನ್ನ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ನಡುವಿನ ಬಾಂಧವ್ಯವು ರಾಜ್ಯಸಭೆ ಸ್ಥಾನವನ್ನು ಮೀರಿದ್ದು ಎಂದು ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ನೇರ ಮಾತುಗಳಲ್ಲಿ ಹೇಳಿದರು.



ಪಕ್ಷದ ರಾಜ್ಯ ಕಚೇರಿ ಜೆಪಿ ಭವನದಲ್ಲಿ ಕಿಕ್ಕಿರಿದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು ಮಾಜಿ ಪ್ರಧಾನಿಗಳು.

ಎಪ್ಪತ್ತು ವರ್ಷಗಳ ಸುದೀರ್ಘ ರಾಜಕೀಯ ಜೀವನ ಸವೆಸಿರುವ ನನಗೆ ರಾಜ್ಯಸಭೆ ಸದಸ್ಯನಾಗಬೇಕು ಎಂಬ ವ್ಯಾಮೋಹವಿಲ್ಲ. ಸುದೀರ್ಘ ರಾಜಕೀಯ ಜೀವನದಲ್ಲಿ ಅಧಿಕಾರಕ್ಕಿಂತ ಜನಸೇವೆಯೇ ಮುಖ್ಯವಾಗಿತ್ತು ಎಂಬುದನ್ನು ಅತ್ಯಂತ ವಿನಯಪೂರ್ವಕವಾಗಿ ಹೇಳಲು ಬಯಸುತ್ತೇನೆ ಎಂದರು. ಕಳೆದೆರಡು ದಿನಗಳಿಂದ ರಾಜ್ಯಸಭೆ ಸ್ಥಾನದ ವಿಚಾರದಲ್ಲಿ ತಮ್ಮ ಬಗ್ಗೆ ನಡೆಯುತ್ತಿರುವ ಚರ್ಚೆಗೆ ತೆರೆ ಎಳೆದ ಮಾಜಿ ಪ್ರಧಾನಿಗಳು; ಈ ಚರ್ಚೆ ಅನಗತ್ಯ. ಕೆಲವರು ಸುಖಾಸುಮ್ಮನೆ ಮಾತಾಡುತ್ತಿದ್ದಾರೆ. ಈ ವಿಚಾರದಲ್ಲಿ ನನಗೆ ಅಪಮಾನವಾಗಿದೆ ಎಂಬ ಹೇಳಿಕೆಗಳಿಗೆ ಯಾವುದೇ ಮಹತ್ವವನ್ನು ನಾನು ನೀಡುವುದಿಲ್ಲ. ಅದರಲ್ಲಿ ಯಾವುದೇ ಅರ್ಥವೂ ಇಲ್ಲ ಎಂದು ಹೇಳಿದರು. ನನ್ನ ಮತ್ತು ಪ್ರಧಾನಿ ಮೋದಿ ಅವರ ನಡುವೆ ಉತ್ತಮ ಬಾಂಧವ್ಯ ಇದೆ. ಒಂದು ರಾಜ್ಯಸಭೆ ಸ್ಥಾನ ಇಂತಹ ಉತ್ತಮ ಬಾಂಧವ್ಯವನ್ನು ಹಾಳು ಮಾಡುತ್ತದೆ ಎಂದು ಯಾರಾದರೂ ಭಾವಿಸಿದ್ದರೆ ಅದು ಅವರ ಮೂರ್ಖತನ. ಒಂದು ಕಾಲದಲ್ಲಿ ನಾನು ಮೋದಿಯವರನ್ನು ಕಟುವಾಗಿ ಟೀಕಿಸಿದ್ದೆ ಎಂಬುದು ನಿಜ. ಆದರೆ ಕಳೆದ ಹಲವು ವರ್ಷಗಳಿಂದ ನಾನು ಅವರನ್ನು ಬಹಳಷ್ಟು ಅರ್ಥ ಮಾಡಿಕೊಂಡಿದ್ದೇನೆ. ಅವರಲ್ಲಿ ವಿಶ್ವಾಸ ಇರಿಸಿದ್ದೇನೆ. ಅವರ ಒಳ್ಳೆಯ ಕೆಲಸಗಳನ್ನು ಹೃದಯಪೂರ್ವಕವಾಗಿ ಶ್ಲಾಘಿಸಿದ್ದೇನೆ ಎಂದು ಮಾಜಿ ಪ್ರಧಾನಿಗಳು ಒತ್ತಿ ಹೇಳಿದರು. ಇವತ್ತು ಒಂದು ವಿಷಯ ಇಟ್ಟುಕೊಂಡು ನನ್ನ ಬಗ್ಗೆ ಇಷ್ಟೆಲ್ಲಾ ಅನುಕಂಪದ ನಾಟಕ ಆಡುತ್ತಿರುವ ಕಾಂಗ್ರೆಸ್ ನಾಯಕರು ಹಿಂದೆಲ್ಲಾ ನನ್ನ ವಿಚಾರದಲ್ಲಿ ಹೇಗೆಲ್ಲಾ ನಡೆದುಕೊಂಡರು ಎಂಬುದು ಗೊತ್ತಿದೆ. ಇದರ ಬಗ್ಗೆ ಹೇಳುತ್ತಾ ಹೋದರೆ ಬಹಳಷ್ಟು ಹೇಳಬಹುದು. ನನಗೆ ಅದರ ಬಗ್ಗೆ ಆಸಕ್ತಿ ಇಲ್ಲ ಎಂದು ಅವರು ತಿಳಿಸಿದರು. ಪಕ್ಷದ ಗ್ರೇಟರ್ ಬೆಂಗಳೂರು ಅಧ್ಯಕ್ಷ ಹೆಚ್.ಎಂ.ರಮೇಶ್ ಗೌಡ, ಮಾಜಿ ಶಾಸಕರಾದ ಕೆ.ಎ.ತಿಪ್ಪೇಸ್ವಾಮಿ, ಚೌಡರೆಡ್ಡಿ ತೂಪಲ್ಲಿ, ದೊಡ್ಡನಗೌಡ ಪಾಟೀಲ್, ಜೆಡಿಎಸ್ ರಾಜ್ಯ ಕಾನೂನು ವಿಭಾಗದ ಅಧ್ಯಕ್ಷ ಎ.ಪಿ. ರಂಗನಾಥ್, ಸಾಮಾಜಿಕ ಜಾಲತಾಣ ವಿಭಾಗದ ಅಧ್ಯಕ್ಷ ಚಂದನ್ ಸೇರಿದಂತೆ ಪಕ್ಷದ ಹಲವಾರು ಮುಖಂಡರು ಹಾಜರಿದ್ದರು.

## ಮುಖ್ಯಾಧಿಕಾರಿಯ ನಕಲಿ ಸಹಿ ಆರೋಪ: ತನಿಖೆಗೆ ಆಗ್ರಹ



ಕರ್ನಾಟಕ ಸರ್ಕಾರ
ಪುರಸಭೆ ಕಾರ್ಯಾಲಯ, ಹುಮನಾಬಾದ ಜಿ॥ ಬೀದರ
TOWN MUNICIPAL COUNCIL HUMNABAD DIST: BIDAR
ವೆಬ್ ಸೈಟ : WWW.humnabadtown.mrc.gov.in ಇ-ಮೇಲ : itstaff_ulb_humnabad@yahoo.com
ಕಛೇರಿ ದೂರವಾಣಿ ಸಂಖ್ಯೆ : 08483-271722 ಹುಮನಾಬಾದ : 585330
ಸಂ:ಪುಸಹು/ಕ.ಪೂ.ಪ್ರ.ಪ/ /2026-27 ದಿನಾಂಕ: 23-04-2026

ಕಟ್ಟಡ ಪೂರ್ತಿಗೊಂಡ ಪ್ರಮಾಣ ಪತ್ರ
(Occupancy Certificate)

ಹುಮನಾಬಾದ ಪುರಸಭೆ ಆಸ್ತಿ ಸಂಖ್ಯೆ: 22-235/5 ... ಸಂಖ್ಯೆ: 25-549-622ರ ... HMC/CONST/142/2011-12 ದಿನಾಂಕ: 18-04-2011 ... ರೂ. 2000/- ... 95HBDOC22042026 ರಂತೆ ದಿನಾಂಕ: 22-04-2026 ... ಈ ಪ್ರಮಾಣ ಪತ್ರ ಮಂಜೂರು ಮಾಡಲಾಗಿದೆ.

**ಹುಮನಾಬಾದ್:** ಮುಖ್ಯಾಧಿಕಾರಿಗಳ ಸಹಿಯನ್ನು ನಕಲಾಗಿ ಬಳಸಿಕೊಂಡು ವಿದ್ಯುತ್ ಇಲಾಖೆಯಿಂದ NOC (ಅನಾಪತ್ತಿ ಪ್ರಮಾಣಪತ್ರ) ಪಡೆಯಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಕಾರಣವಾಗಿವೆ. ಈ ಪ್ರಕರಣವು ಆಡಳಿತಾತ್ಮಕ ವ್ಯವಸ್ಥೆಯಲ್ಲಿನ ಭದ್ರತಾ ಲೋಪಗಳನ್ನು ಮತ್ತೆ ಬೆಳಕಿಗೆ ತಂದಿದೆ.

ಸ್ಥಳೀಯ ಮೂಲಗಳ ಪ್ರಕಾರ, ಕೆಲವು ಅರ್ಜಿದಾರರು ಹಾಗೂ ಮಧ್ಯವರ್ತಿಗಳ ಸಹಾಯದಿಂದ ಅಧಿಕೃತ ಸಹಿಗಳನ್ನು ನಕಲು ಮಾಡಿ, ವಿದ್ಯುತ್ ಸಂಪರ್ಕ ಹಾಗೂ ಇತರ ಅನುಮತಿಗಳಿಗಾಗಿ ಅಗತ್ಯವಾದ ಓಔಅಗಳನ್ನು ಪಡೆದುಕೊಂಡಿರುವ ಶಂಕೆ ವ್ಯಕ್ತವಾಗಿದೆ. ಇದರಿಂದ ಸರ್ಕಾರಿ ದಾಖಲೆಗಳ ಪ್ರಾಮಾಣಿಕತೆಯ ಮೇಲೆ ಪ್ರಶ್ನೆ ಎದ್ದಿದೆ.

ಸಾರ್ವಜನಿಕರು ಈ ವಿಷಯದಲ್ಲಿ ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸುತ್ತಿದ್ದಾರೆ. "ಇಂತಹ ಲೋಪಗಳು ಮುಂದುವರೆದರೆ ಸರ್ಕಾರದ ವಿಶ್ವಾಸಾರ್ಹತೆ ಕುಸಿಯುತ್ತದೆ. ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಅಗತ್ಯ" ಎಂದು ಸ್ಥಳೀಯರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸಂಬಂಧಿತ ಇಲಾಖೆಗಳು ತಕ್ಷಣ ತನಿಖೆ ಆರಂಭಿಸಿ, ನಕಲಿ ಸಹಿ ಬಳಕೆ, ದಾಖಲೆ ಪರಿಶೀಲನೆ ಮತ್ತು ಓಔಅ ನೀಡುವ ಪ್ರಕ್ರಿಯೆಯ ಸಂಪೂರ್ಣ ಪರಿಶೀಲನೆ ನಡೆಸಬೇಕು ಎಂಬ ಆಗ್ರಹ ಹೆಚ್ಚಾಗಿದೆ. ಜೊತೆಗೆ ಡಿಜಿಟಲ್ ಸಹಿ ವ್ಯವಸ್ಥೆ ಬಲಪಡಿಸುವ ಅಗತ್ಯವೂ ಉಂಟಾಗಿದೆ ಎಂದು ಆಡಳಿತ ತಜ್ಞರು ಸೂಚಿಸುತ್ತಿದ್ದಾರೆ. ಇದೀಗ ಜನರ ನಿರೀಕ್ಷೆ ಒಂದೇ? ತಪ್ಪಿತಸ್ಥರ ಮೇಲೆ ಶೀಘ್ರ ಕ್ರಮ ಕೈಗೊಂಡು ಆಡಳಿತದಲ್ಲಿ ಪಾರದರ್ಶಕತೆ ಮತ್ತು ಶಿಸ್ತು ಪುನಃಸ್ಥಾಪನೆ ಆಗಬೇಕು.

# ಕಲಬುರಗಿ–ಬೆಂಗಳೂರು ವಿಮಾನಯಾನ ಪುನರಾರಂಭ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಕಲಬುರಗಿ–ಬೆಂಗಳೂರು ನಡುವೆ ಸ್ಟಾರ್ ಏರ್ ಸಂಸ್ಥೆಯಿಂದ ವಿಮಾನಯಾನ ಸೇವೆ ಬುಧವಾರದಿಂದ ಪುನರಾರಂಭವಾಗಿದ್ದು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯು ಲೋಹದ ಹಕ್ಕಿ ಹಾರಾಟಕ್ಕೆ ಆರ್ಥಿಕ ನೆರವು ನೀಡುವ ಮೂಲಕ ವಿಮಾನಯಾನ ಸೇವೆ ಮತ್ತೆ ಆರಂಭಕ್ಕೆ ಕಾರಣವಾಗಿದೆ.

ಬುಧವಾರ ಕಲಬುರಗಿ ವಿಮಾನ ನಿಲ್ದಾಣದಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಕರ್ನಾಟಕ ರೇಷ್ಮೆ ಉದ್ಯಮ ನಿಯಮಿತದ ಅಧ್ಯಕ್ಷರು ಹಾಗೂ ಕಲಬುರಗಿ ಉತ್ತರ ಶಾಸಕಿ ಕನೀಜ್ ಫಾತೀಮಾ ಮತ್ತು ಅಫಜಲಪೂರ ಶಾಸಕ ಎಂ.ವೈ.ಪಾಟೀಲ ಅವರು ಸಾಂಕೇತಿಕವಾಗಿ ಸ್ಟಾರ್ ಏರ್ ವಿಮಾನ ಸಂಚಾರಕ್ಕೆ ಇಲ್ಲಿ ಕೇಕ್ ಕತ್ತರಿಸಿದಲ್ಲದೆ ಮೊದಲ ದಿನದ ಟ್ರಿಪ್ ನಲ್ಲಿ ಪ್ರಯಾಣ ಮಾಡಲಿರುವ ಕೆ.ಕೆ.ಸಿ.ಸಿ.ಐ ಅಧ್ಯಕ್ಷ ಶರಣಬಸಪ್ಪ ಪಪ್ಪಾ ಅವರ ಕುಟುಂಬದ ಸದ್ಯಸರಿಗೆ ಪ್ರಯಾಣದ ಟಿಕೆಟ್ ವಿತರಿಸುವ ಮೂಲಕ ವಿಮಾನ ಸೇವೆಗೆ ಚಾಲನೆ ನೀಡಿದರು.

ಬೆಂಗಳೂರಿನಿಂದ 117 ಸಂಖ್ಯೆಯ 76 ಆಸನವುಳ್ಳ ಸ್ಟಾರ್ ಏರ್ ವಿಮಾನವು ಸುಮಾರು 74 ಜನ ಪ್ರಯಾಣಿಕರನ್ನು ಬೆಳಿಗ್ಗೆ 6.30ಕ್ಕೆ ಅಲ್ಲಿಂದ ಹೊರಟು 7.40ಕ್ಕೆ ಕಲಬುರಗಿ ವಿಮಾನ ನಿಲ್ದಾಣದಕ್ಕೆ



ಬಂದಿಳಿತು. ಅದೇ ರೀತಿ ಕಲಬುರಗಿಯಿಂದ 117 ಸಂಖ್ಯೆಯ ಸ್ಟಾರ್ ಏರ್ ವಿಮಾನವು ಬೆಳಿಗ್ಗೆ 8.10 ಗಂಟೆಗೆ 50 ಜನರನ್ನು ಹೊತ್ತಿಕೊಂಡು ಬೆಂಗಳೂರಿಗೆ ಹಾರಿತು. ಇದರಿಂದ ಮತ್ತೆ ಅಗಸದಲ್ಲಿ ಪ್ರಯಾಣಿಸುವ ಸೌಭಾಗ್ಯ ಸ್ಥಳೀಯರಿಗೆ ಒಲಿದು ಬಂದಿದೆ.

**ಪ್ರವಾಸೋದ್ಯಮ,ಹೂಡಿಕೆಗೆ ಸಹಕಾರಿ:** ಅತ್ತ ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬೆಂಗಳೂರು–ಕಲಬುರಗಿ ನಡುವಿನ ಮೊದಲ ಸ್ಟಾರ್ ಏರ್ ಹಾರಾಟಕ್ಕೆ ಕೇಕ್ ಕತ್ತರಿಸುವ ಮೂಲಕ ಚಾಲನೆ ನೀಡಿದ ಕೆ.ಕೆ.ಆರ್.ಡಿ.ಬಿ ಮಂಡಳಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಅವರು ಮಾತನಾಡಿ, ಪ್ರದೇಶದಲ್ಲಿನ ಪ್ರವಾಸೋದ್ಯಮ, ಆರ್ಥಿಕ ವಹಿವಾಟು, ಹೂಡಿಕೆಗೆ ವಿಮಾನ ಸೇವೆ ಪೂರಕವಾಗಿ ಸಹಕಾರಿಯಾಗಲಿದೆ ಎಂದರು.

ಕಳೆದ ಹಲವಾರು ತಿಂಗಳಿನಿಂದ ಕಲಬುರಗಿ, ಬೀದರಗೆ ಬೆಂಗಳೂರಿನಿಂದ ವಿಮಾನ ಸೇವೆ ಸ್ಥಗಿತಗೊಂಡಿತ್ತು. ಕಳೆದ ಮಾರ್ಚ್ ಮಾಹೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಸಚಿವರೆಲ್ಲರು ಸಭೆ ನಡೆಸಿ ಮತ್ತೆ ಬೆಂಗಳೂರು–ಕಲಬುರಗಿ, ಬೆಂಗಳೂರು–ಬೀದರ ನಡುವೆ ವಿಮಾನ ಸೇವೆ ಪ್ರಾರಂಭಿಸಲು ನಿರ್ಧರಿಸಿದ್ದರಿಂದ ಇದಕ್ಕೆ ಅಂದಾಜು ಮೊತ್ತ ಒಟ್ಟು 28.44 ಕೋಟಿ ರೂ. ತಗುಲಬಹುದೆಂದು ಅಂದಾಜಿಸಿತ್ತು. ಇದರಲ್ಲಿ ಮಂಡಳಿಯು ಶೇ.80ರಷ್ಟು ಅಂದರೆ ತಲಾ 22.76 ಕೋಟಿ ರೂ. ನೆರವು ನೀಡಿದ್ದು ಉಳಿದ ಶೇ.20ರಷ್ಟು ಮೊತ್ತ ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ಭರಿಸಲಿದೆ ಎಂದಿದ್ದಾರೆ.

**ಪ್ರಯಾಣಿಕರಿಂದ ಉತ್ತಮ ಸ್ಪಂದನೆ:** ಸ್ಟಾರ್ ಏರ್ ಸಂಸ್ಥೆಯ ಏರ್ಪೋರ್ಟ್ ಹೆಡ್ ಸಿ.ಎ.ಬೋಪಣ್ಣ ಮಾತನಾಡಿ ಕಲಬುರಗಿ–ಬೆಂಗಳೂರು ನಡುವೆ ವಿಮಾನಯಾನ ಸೇವೆಗೆ ಪ್ರಯಾಣಿಕರಿಂದ ಉತ್ತಮ ಸ್ಪಂದನೆ ಸಿಕ್ಕಿದೆ. ಮೊದಲ ದಿನವೇ ಬೆಂಗಳೂರಿನಿಂದ ಶೇ.90ರಷ್ಟು ಮತ್ತು ಕಲಬುರಗಿಯಿಂದ ಶೇ.65ರಷ್ಟು ಟಿಕೆಟ್ ಬುಕ್ ಆಗಿವೆ. ಪ್ರತಿ ಗಂಟೆಗೆ 850 ಕಿ.ಮೀ ಕ್ರಮಿಸುವ 76 ಮತ್ತು 88 ಆಸನ ಸಾಮರ್ಥ್ಯದ ಫಾಸ್ಟೆಸ್ಟ್ ಪ್ರಯಾಣಿಕ ಸ್ನೇಹಿ ವಿಮಾನಗಳು ಇಲ್ಲಿ ಸಂಚಾರ ಮಾಡಲಿವೆ. ಪ್ರಸ್ತುತ ನಮ್ಮ ಸಂಸ್ಥೆಯಲ್ಲಿ 9 ವಿಮಾನಗಳಿದ್ದು, ಮುಂದಿನ ಜುಲೈ, ಅಗಸ್ಟ್ ಮಾಹೆಯಲ್ಲಿ ಇನ್ನೆರಡು ವಿಮಾನ ಬರಲಿವೆ. ಕಲಬುರಗಿ–ಮುಂಬೈ ನಡುವೆ ವಿಮಾನ ಸೇವೆಗೆ ಬೇಡಿಕೆ ಇದ್ದು, ಪ್ರಸ್ತುತ ಮದ್ಯಪ್ರಾಚ್ಯದಲ್ಲಿ ಯುದ್ಧದ ಕಾರಣ ತೈಲ ಬೆಲೆ ಹೆಚ್ಚಳವಾಗಿದ್ದು, ಪರಿಸ್ಥಿತಿ ನಿಯಂತ್ರಣಕ್ಕೆ ಬಂದಲ್ಲಿ ಮುಂದೆ ಸೇವೆ ಆರಂಭಕ್ಕೆ ಯೋಚನೆ ಮಾಡಲಾಗುವುದು ಎಂದರು.

ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಮಾತನಾಡಿ ರಾಜ್ಯ ಸರ್ಕಾರ ಮತ್ತು ಕೆ.ಕೆ.ಆರ್.ಡಿ.ಬಿ ಮಂಡಳಿಯು ಹಲವಾರು ತಿಂಗಳಿನಿಂದ ಸ್ಥಗಿತಗೊಂಡಿದ್ದ ವಿಮಾನ ಸೇವೆ ಮರು ಆರಂಭಕ್ಕೆ ಕಾರಣವಾಗಿದೆ. ವಿಶೇಷವಾಗಿ ಮಂಡಳಿಯು ಆರ್ಥಿಕ ಸಹಾಯ ನೀಡಿದೆ. ವಾಯುಯಾನ ಸೇವೆ ಆರಂಭದಿಂದ ಮುಂದಿನ ದಿನದಲ್ಲಿ ಪ್ರದೇಶದಲ್ಲಿ ಪ್ರವಾಸೋದ್ಯಮ, ಹೂಡಿಕೆಗೆ ಸಹಕಾರಿಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಜಿಲ್ಲಾ ಪೊಲೀಸ್ ಅಧೀಕ್ಷಕ ಅಡ್ಡೂರು ಶ್ರೀನಿವಾಸುಲು, ಕಲಬುರಗಿ ವಿಮಾನ ನಿಲ್ದಾಣದ ನಿರ್ದೇಶಕ ಕಿಶೋರ ಕಿಲ್ಲಂಪಲ್ಲಿ, ಕಲಬುರಗಿ ತಹಶೀಲ್ದಾರ ಆನಂದಶೀಲ, ಸ್ಟಾರ್ ಏರ್ ಸಂಸ್ಥೆಯ ದಕ್ಷಿಣ ಭಾರತದ ಸೇಲ್ಸ್ ಮ್ಯಾನೇಜರ್ ಅಹ್ಮದ–ಸೊಹೇಲ್, ಏರ್‌ಪೋರ್ಟ್ ಎ.ಜಿ.ಎಂ ಕಿರಣ ಎಸ್.ಟಿ., ಕೆ.ಕೆ.ಸಿ.ಸಿ.ಐ ಗೌರವ ಕಾರ್ಯದರ್ಶಿ ಶಿವರಾಜ ಇಂಗಿನಶೆಟ್ಟಿ ಸೇರಿದಂತೆ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

# ಕೊಟ್ಟ ಮಾತು ಉಳಿಸಿಕೊಳ್ಳಲಿ, ಇಲ್ಲದಿದ್ದರೆ ಮುಂದಿನ ನಿರ್ಧಾರ ಕಠೋರ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಜಿಲ್ಲೆಯ ಇಂಡಿ ವಿಧಾನಸಭಾ ಕ್ಷೇತ್ರದ ಹಿರಿಯ ಶಾಸಕ ಯಶವಂತರಾಯಗೌಡ ಪಾಟೀಲ ಅವರು ಸಚಿವ ಸ್ಥಾನದ ಆಕಾಂಕ್ಷೆಕುರಿತು ಬಹಿರಂಗವಾಗಿ ಅಸಮಾಧಾನ ಹೊರಹಾಕಿದ್ದು, ಕಾಂಗ್ರೆಸ್ ಹೈಕಮಾಂಡ್ ಹಾಗೂ ರಾಜ್ಯ ನಾಯಕರಿಗೆ ನೇರ ಸಂದೇಶ ರವಾನಿಸಿದ್ದಾರೆ...

ವಿಜಯಪುರ ನಗರದಲ್ಲಿ ಬುಧವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು 2023ರ ವಿಧಾನಸಭಾ ಚುನಾವಣೆಯ ಪೂರ್ವದಲ್ಲಿ ತಮಗೆ ನೀಡಿದ್ದ ಭರವಸೆಯನ್ನು ನಾಯಕರು ಈಡೇರಿಸಬೇಕು ಎಂದು ಆಗ್ರಹಿಸಿದ್ದಾರೆ.

ಚುನಾವಣೆ ಪೂರ್ವದ ಒಪ್ಪಂದವನ್ನು ನೆನಪಿಸಿದ ಶಾಸಕರು 2023ರ ಚುನಾವಣೆಗಿಂತ ಮುಂಚಿತವಾಗಿ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಹಾಗೂ ಚುನಾವಣಾ ಸಮಿತಿಯ ಅಧ್ಯಕ್ಷರ ಸಮ್ಮುಖದಲ್ಲೇ



ಎಲ್ಲ ವಿಷಯಗಳನ್ನು ಚರ್ಚಿಸಿದ್ದರು. ಜಿಲ್ಲೆಯ ಸಚಿವರಾದ ಶಿವಾನಂದ ಪಾಟೀಲ ಹಾಗೂ ಎಂ.ಬಿ. ಪಾಟೀಲ ಅವರನ್ನು ಕರೆದು ಮುಖಾಮುಖಿಯಾಗಿ ಮಾತುಕತೆ ನಡೆಸಲಾಗಿತ್ತು. ಅಂದು ನಾಯಕರು ನನಗೆ ಕೊಟ್ಟ ಮಾತನ್ನು ಉಳಿಸಿಕೊಳ್ಳುತ್ತಾರೋ ಇಲ್ಲವೋ ಎಂಬುದು ಈಗ ಅವರಿಗೆ ಬಿಟ್ಟ ವಿಚಾರ, ಎಂದು ಮಾರ್ಮಿಕವಾಗಿ ಹೇಳಿದರು. ಡಿಕೆಶಿಗೆ ಸಿಕ್ಕ ನ್ಯಾಯ ನಮಗೇಕೆ ಇಲ್ಲ ಎಂದು ಪ್ರಶ್ನಿಸಿದ ಶಾಸಕ ಯಶವಂತರಾಯಗೌಡ ಪಾಟೀಲ್ ಹಿಂದೆ ಡಿ.ಕೆ. ಶಿವಕುಮಾರ್ ಅವರಿಗೆ ನೀಡಿದ್ದ ಮಾತಿನಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಡೆದು–ಕೊಂಡಿದ್ದಾರೆ. ಅದೇ ರೀತಿ ನನಗೂ ನೀಡಿರುವ ಭರವಸೆಯನ್ನು ನಾಯಕರು ಉಳಿಸಿಕೊಳ್ಳುತ್ತಾರೆ ಎಂಬ ವಿಶ್ವಾಸ ನನಗಿದೆ. ನಿಜ ಹೇಳಬೇಕೆಂದರೆ, ಅವರು ಕೊಟ್ಟ ಮಾತಿನ ಪ್ರಕಾರ ಕಳೆದ ಬಾರಿಯ ಸಂಪುಟ ವಿಸ್ತರಣೆಯಲ್ಲೇ ನನಗೆ ಸಚಿವ ಸ್ಥಾನ ಸಿಗಬೇಕಿತ್ತು. ಯಾರದೇ ಕೃಪಾಕಟಾಕ್ಷದಿಂದ ಸಚಿವನಾಗುವ ಆಶಯ ನನಗಿಲ್ಲ, ನಾಯಕರು ತಾವಾಡಿದ ಮಾತಿನಂತೆ ನಡೆದುಕೊಂಡರೆ ಸಾಕು, ಎಂದರು.

ಇಲ್ಲಿಯವರೆಗೆ ಇಂಡಿ ಕ್ಷೇತ್ರಕ್ಕೆ ಸಚಿವ ಸ್ಥಾನ ಸಿಗದೆ ಅನ್ಯಾಯವಾಗಿದೆ.

ಸ್ವಾತಂತ್ರ್ಯದ ನಂತರದಿಂದ ಇಂದಿನವರೆಗೂ ಇಂಡಿ ಮತಕ್ಷೇತ್ರಕ್ಕೆ ಸಚಿವ ಸ್ಥಾನ ಸಿಗದೇ ಇರುವ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿದರು.

ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ ವಿವಿಧ 7 ಚುನಾವಣೆಗಳಲ್ಲಿ ಜಯಗಳಿಸಿರುವುದನ್ನು ನೆನಪಿಸಿದ ಶಾಸಕ ಯಶವಂತರಾಯಗೌಡ ಪಾಟೀಲ್ 2013 ರಿಂದ 2023ರ ವರೆಗಿನ ವಿವಿಧ ಅವಧಿಗಳಲ್ಲಿ ನಾನು ಇತರರನ್ನು ಮಂತ್ರಿ ಮಾಡಲು ಬೆಂಬಲವಾಗಿ ನಿಂತಿದ್ದೇನೆ. ನಾನು ಎಂದಿಗೂ ಅಧಿಕಾರಕ್ಕಾಗಿ ರಾಜ–ಕಾರಣ ಮಾಡಿದವನಲ್ಲ, ಸಿದ್ಧಾಂತಕ್ಕಾಗಿ ರಾಜಕಾರಣ ಮಾಡುವವನು. ಆದರೆ, ಈ ಬಾರಿಯೂ ನನಗೆ ಸಚಿವ ಸ್ಥಾನ ಸಿಗದೇ ಹೋದರೆ, ಮುಂಬರುವ ದಿನಗಳಲ್ಲಿ ನನ್ನ ಹೇಳಿಕೆ ಹಾಗೂ ನಿರ್ಧಾರಗಳು ಅತ್ಯಂತ ಕಠೋರವಾಗಿರಲಿವೆ, ಎಂದು ಪಕ್ಷದ ವರಿಷ್ಠರಿಗೆ ಖಡಕ್ ಎಚ್ಚರಿಕೆ ನೀಡಿದರು.

# ಮರಗಿಡಗಳನ್ನು ಬೆಳೆಸಿ ಉಳಿಸಿ: ನ್ಯಾಯಾಧೀಶ ಯಶವಂತ ಆರ್.ತಾವರೆ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಪ್ರಕೃತಿ ನಮಗೆ ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ಶುದ್ಧ ನೀರು, ಗಾಳಿ, ಆಹಾರ ಸೇರಿದಂತೆ ಇನ್ನು ಅನೇಕ ಅಗತ್ಯ ವಸ್ತುಗಳನ್ನು ನೀಡುತ್ತಿದೆ. ಪರಿಸರವನ್ನು ನಾವು ರಕ್ಷಿಸಿದರೆ ಅದು ನಮ್ಮನ್ನು ರಕ್ಷಿಸುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಸ್ವ ಇಚ್ಛೆಯಿಂದ ಗಿಡ, ಮರಗಳನ್ನು ಬೆಳೆಸಿ, ಪರಿಸರ ಸಂರಕ್ಷಿಸಬೇಕೆಂದು ಬಸವಕಲ್ಯಾಣ ಪೀಠದ ಎರಡನೇ ಹೆಚ್ಚುವರಿ ಜಿಲ್ಲಾ ಸತ್ರ ನ್ಯಾಯಾಧಿಶರಾದ ಯಶವಂತ ಆರ್.ತಾವರೆ ತಿಳಿಸಿದರು.

ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ ಹುಮನಾಬಾದ ವಕೀಲರ ಸಂಘ ಹುಮನಾಬಾದ ಮತ್ತು ತಾಲೂಕು ಅರಣ್ಯ ಇಲಾಖೆ ಹುಮನಾಬಾದ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಹಾಗೂ ಕಾನೂನು ಅರಿವು ನೆರವು ಕಾರ್ಯಕ್ರಮದ ಅಂಗವಾಗಿ ಇತ್ತಿಚೇಗೆ ಗಿಡ ನೆಡುವ ಮೂಲಕ ಚಾಲನೆ ನೀಡಿ ಮಾತನಾಡಿ, ಪ್ರಕೃತಿಯಲ್ಲಿನ



ಏರುಪೇರುಗಳಿಂದ ಭೂಮಿಯ ತಾಪಮಾನ ಹೆಚ್ಚಾಗಿದ್ದು ಅದರಿಂದ ಪ್ರಾಕೃತಿಕ ಅಸಮತೋಲನ ಏರ್ಪಟ್ಟಿದೆ. ತಾಪಮಾನವನ್ನು ನಿಯಂತ್ರಿಸಿ ಪರಿಸರದ ಸಮತೋಲನವನ್ನು ಕಾಯ್ದುಕೊಳ್ಳಲು ಪ್ರತಿಯೊಬ್ಬರೂ ಮರಗಿಡಗಳನ್ನು ಬೆಳೆಸುವುದು ನಮ್ಮೆಲ್ಲರ ಕರ್ತವ್ಯ ಎಂದು ಭಾವಿಸಿ ಕಾಡನ್ನು ಉಳಿಸಿ, ಬೆಳೆಸಿ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು. ಆ ನ್ಯಾಯಾಲಯದ ಆವರಣದಲ್ಲಿ ಇಂದು ನೆಟ್ಟಿರುವ ಗಿಡಗಳನ್ನು ಸೂಕ್ತವಾಗಿ ಹಾರೈಕೆ ಮಾಡಿ ಅವುಗಳನ್ನು ಉಳಿಸಿ ಬೆಳೆಸಬೇಕೆಂದು ಸಿಬ್ಬಂದಿಗೆ ಸಲಹೆ ನೀಡಿದರು.

ಪರಿಸರ ಸಂರಕ್ಷಣೆ ಕೇವಲ ಕೆಲವರಿಗೆ ಮಾತ್ರ ಸೀಮಿತವಾಗಬಾರದು, ನಮಗೆ ಉತ್ತಮ ಆರೋಗ್ಯ ನೀಡುವಲ್ಲಿ ಗಿಡ– ಮರ ಗಳು ಬಹುಮುಖ್ಯ ಪಾತ್ರ ವಹಿಸಿವೆ. ಆದ್ದರಿಂದ ಪರಿಸರ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ ಎಂಬುದನ್ನು ಅರಿತು ಪ್ರತಿಯೊಬ್ಬರೂ ಮರ, ಗಿಡ, ಕಾಡನ್ನು ಉಳಿಸಿ, ಬೆಳೆಸುವುದರ ಮೂಲಕ ಪರಿಸರ ಸಂರಕ್ಷಣೆಗೆ ಪಣತೊಡಬೇಕಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಕಾಂತ ಕುರಣಿ, ಸಮಾಜಿಕ ವಲಯ ಅರಣ್ಯಾಧಿಕಾರಿ ಪ್ರಶಾಂತ ನಿಪ್ಪಾಣಿ, ಸಹಾಯಕ ಸರಕಾರಿ ಅಭಿಯೋಜಕರಾದ ರವಿಕುಮಾರ ಕಮತಾಣಾ, ವಕೀಲ ಸಂಘದ ತಾಲೂಕು ಅಧ್ಯಕ್ಷ ಮಂಜುನಾಥರೆಡ್ಡಿ, ಹಿರಿಯ ನ್ಯಾಯವಾದಿಗಳಾದ ಅಶೋಕ ಕೆ. ವರ್ಮಾ, ವಕೀಲರು ಉಪಸ್ಥಿತರಿದ್ದರು.

# ತ್ಯಾಗದ ಕೆರೆ; ಹಿರಿಯೂರು–ನೆರೆಯೂರಿನ ಅಮರ ಪ್ರೇಮಗಾಥೆ



ಕಥಾ–ಲೋಕ
● ವೀರಣ್ಣ ಕಲಕೇರಿ
ಕೆಂಭಾವಿ

ಹಿರಿಯೂರು ಮತ್ತು ನೆರೆಯೂರು ಎಂಬ ಅಕ್ಕಪಕ್ಕದ ಹಳ್ಳಿಗಳು. ಹಿರಿಯೂರಿನ ಮಣ್ಣಿನ ಮಗ ರಾಮು ಮತ್ತು ನೆರೆಯೂರಿನ ಲಕ್ಷ್ಮೀ, ಇವರಿಬ್ಬರ ಸ್ನೇಹ ಬಾಲ್ಯದಿಂದಲೂ ಇತ್ತು. ಬಡ ರೈತನ ಮಗನಾಗಿ ಹೊಲದ ಧೂಳಿನಲ್ಲಿ ಆಡುತ್ತಿದ್ದ ರಾಮು ಮತ್ತು ಶಿಕ್ಷಕನ ಮಗಳಾಗಿ ಅಕ್ಷರದ ಜಗತ್ತಿನಲ್ಲಿ ಬೆಳೆಯುತ್ತಿದ್ದ ಲಕ್ಷ್ಮೀ; ಇವರಿಬ್ಬರನ್ನು ಬೆಸೆದಿದ್ದು ಆ ಪ್ರದೇಶದ ಒಣಗಿದ ಭೂಮಿ ಮತ್ತು ರೈತರ ಕಣ್ಣೀರು. ಆ ಅವಳಿ ಹಳ್ಳಿಗಳ ರೈತರ ಹೋರಾಟದ ಬದುಕು ಇವರ ಮೇಲೆ ಗಾಢವಾದ ಪ್ರಭಾವ ಬೀರಿದ್ದು ಸತ್ಯ.

ಆ ದಿನಗಳಲ್ಲಿ ಆಗಸದಲ್ಲಿ ಮೋಡಗಳು ಕವಿದರೂ ಮಳೆ ಸುರಿಯದಿದ್ದಾಗ ಊರಿನ ಜಮೀನುಗಳೆಲ್ಲ ಬಣಗುಡುತ್ತಿದ್ದವು. "ಲಕ್ಷ್ಮೀ, ನಾನು ದೊಡ್ಡವನಾದ ಮೇಲೆ ಈ ಅವಳಿ ಹಳ್ಳಿಗಳ ನಡುವೆ ಕೆರೆ ಕಟ್ಟಿ ಎಲ್ಲಾ ಜಮೀನುಗಳಿಗೂ ನೀರುಣಿಸುವೆ ನೋಡು," ಎಂದು ರಾಮು ಬಾಲ್ಯದಲ್ಲೇ ಶಪಥ ಮಾಡುತ್ತಿದ್ದ. ಕಾಲ ಉರುಳಿತು. ಲಕ್ಷ್ಮೀಯ ತಂದೆಯ ನೌಕರಿ ಬೇರೆ ಊರಿಗೆ ವರ್ಗಾವಣೆಯಾಯಿತು. ಅವಳು ಉನ್ನತ ವ್ಯಾಸಂಗ ಮುಗಿಸಿ ಶಿಕ್ಷಕಿಯಾಗಿ ತನ್ನೂರಿಗೆ ಮರಳಿದಾಗ, ರಾಮು ತನ್ನ ಪೂರ್ವಜರ ಭೂಮಿಯಲ್ಲಿ ಬೆವರಿನ ಹನಿಗಳನ್ನು ಸುರಿಸುತ್ತಾ ಬೇಸಾಯ ಮಾಡುತ್ತಿದ್ದ.

ಲಕ್ಷ್ಮೀ ರಾಮುವನ್ನು ಕಂಡ ಮೊದಲ ದಿನವೇ ಹಳೆಯ ಸ್ನೇಹವು ಪ್ರೀತಿಯಾಗಿ ಅರಳಿತು. ಮುಂದೆ ಎಷ್ಟೇ ವಿರೋಧ ಬಂದರೂ ಅವೆಲ್ಲವನ್ನೂ ಮೀರಿ ಅವರಿಬ್ಬರು ಒಂದಾದರು. ಲಕ್ಷ್ಮೀಯ ಜ್ಞಾನ ಮತ್ತು ರಾಮುವಿನ ಶ್ರಮ ಒಂದಾದಾಗ, ರಾಮುವಿನ ಬಾಲ್ಯದ ಕನಸಾದ 'ಕೆರೆ ಕಟ್ಟುವ ಯೋಜನೆ'ಗೆ ಮರುಜೀವ ಬಂದಿತು.

ರಾಮುವಿನ ಭಗೀರಥ ಪ್ರಯತ್ನಕ್ಕೆ ಲಕ್ಷ್ಮೀ ಗಂಗೆ–ಯಂತೆ ಸಾಥ್ ನೀಡಿದಳು. ತನ್ನ ಸಂಬಳದ ಪೈಸೆ ಪೈಸೆಯನ್ನೂ ಕೆರೆಯ ನಿರ್ಮಾಣಕ್ಕೆ ನೀಡಿದಳು. ರಾಮು ಹಳ್ಳಿಯ ಯುವಕರ ಪಡೆ ಕಟ್ಟಿಕೊಂಡು ಹಗಲು–ರಾತ್ರಿ ಮಣ್ಣು ಹೊತ್ತನು. ಊರಿನವರು ಆಶ್ಚರ್ಯದಿಂದ ನೋಡುತ್ತಿರಲು, ಅಂತಿಮವಾಗಿ ಹಿರಿಯೂರು ಮತ್ತು ನೆರೆಯೂರುಗಳ ಮಧ್ಯೆ ಬೃಹತ್ ಕೆರೆ ಸಿದ್ಧವಾಯಿತು. ಆ ವರ್ಷ ವರುಣ ದೇವನೂ ಕೃಪೆ ತೋರಿದನು. ಕೆರೆ ತುಂಬಿ ತುಳುಕಿತು. ರಾಮು ಆ ಊರಿನ ಪಾಲಿಗೆ ನೀರು ತಂದ 'ಭಗೀರಥ'ನಾದರೆ, ಅವನಿಗೆ ಬೆನ್ನೆಲುಬಾಗಿ ನಿಂತ ಲಕ್ಷ್ಮೀ ಪವಿತ್ರ ಗಂಗೆಯಂತೆ ಕಂಡಳು. ಅವಳಿ ಹಳ್ಳಿಗಳು ಹಸಿರಿನಿಂದ ಕಂಗೊಳಿಸಿದವು. ಗ್ರಾಮಸ್ಥರು ನೆಮ್ಮದಿಯ ನಿಟ್ಟುಸಿರು ಬಿಟ್ಟರು. ರಾಮು ಮತ್ತು ಲಕ್ಷ್ಮೀಯ ಸಂಸಾರಕ್ಕೆ ಹೊಸ ಅತಿಥಿಯ ಆಗಮನದ ಸೂಚನೆಯೂ ಸಿಕ್ಕಿತು. ಅಂದರೆ, ಲಕ್ಷ್ಮೀಯ ಹೊಟ್ಟೆಯಲ್ಲಿ ಒಂದು ಪುಟ್ಟ ಜೀವ ಅಂಬೆಗಾಲಿಡಲು ಸಿದ್ಧವಾಗುತ್ತಿದೆ.

ಅದೊಂದು ಕರಾಳ ರಾತ್ರಿ ಹಿರಿಯೂರು–ನೆರೆಯೂರ ಜನರ ಜೀವನದೊಂದಿಗೆ ಚೆಲ್ಲಾಟವಾಡಿತು. ಆ ರಾತ್ರಿ ಆಕಾಶಕ್ಕೆ ತೂತು ಬಿದ್ದಂತೆ ಮಳೆ ಸುರಿಯಲಾರಂಭಿಸಿತು. ವಾರವಿಡೀ ಸುರಿದ ಮಳೆಗೆ ಕೆರೆ ತುಂಬಿ ನೀರು ಅಪಾಯದ ಮಟ್ಟ ಮೀರಿತು. ಕೆರೆಯ ಏರಿ (ಒಡ್ಡು) ಬಿರುಕು ಬಿಟ್ಟಿತು. ಈ ಸುದ್ದಿ ಯುವಕನೊಬ್ಬ ರಾಮುನ ಕಿವಿಗೆ ಹಾಕಿದ ತಕ್ಷಣ "ಲಕ್ಷ್ಮೀ, ಒಡ್ಡು ಬಿರುಕು ಬಿಟ್ಟಿದೆ, ಊರು ಮುಳುಗುತ್ತದೆ!" ಎಂದು ಚೀರುತ್ತಾ ರಾಮು ಹೊರಬಿದ್ದನು. ಊರಿನವರ ಜೊತೆ ಸೇರಿ ಮರಳಿನ ಮೂಟೆಗಳನ್ನು ಹಾಕುತ್ತಾ ಕೆರೆ ಉಳಿಸಲು ಹರಸಾಹಸ ಪಟ್ಟನು. ಆದರೆ ಪ್ರಕೃತಿಯ ರೌದ್ರಾವತಾರದ ಮುಂದೆ ಅವಳಿ ಹಳ್ಳಿಯ ಜನರ ಮನೋಬಲ ಸೋತಿತು. ಒಮ್ಮೆಲೆ ಒಡ್ಡು ಒಡೆಯಿತು. ದುಮ್ಮುಕ್ಕಿದ ನೀರಿನ ಸೆಳೆತಕ್ಕೆ ಸಿಲುಕಿದ ರಾಮು ನೀರಿನೊಂದಿಗೆ ಹರಿದು ಹೋದವ ಮರಳಿ ಬರಲೇ ಇಲ್ಲ. ಲಕ್ಷ್ಮೀಯ ಕಣ್ಣೆದುರೇ ಅವಳ ಜಗತ್ತಾಗಿದ್ದ ರಾಮು ಮರೆಯಾದನು.

ಮರುದಿನ ಊರು ಉಳಿಯಿತು, ಆದರೆ ರಾಮು ಮರಳಲಿಲ್ಲ. ಆಗ ಲಕ್ಷ್ಮೀಯ ಬದುಕು ದಿಕ್ಕು ತಪ್ಪಿದ ದೋಣಿಯಂತಾಯಿತು. "ನನ್ನ ರಾಮು ಇಲ್ಲದ ಈ ಬದುಕು ನನಗೇಕೆ?" ಎಂದು ಸಂಕಟಪಡುತ್ತಾ ಅವಳು ಅಂತಿಮ ನಿರ್ಧಾರಕ್ಕೆ ಬಂದಳು. ಅವಳು ಏನೂ ಯೋಚಿಸದೆ ಕೆರೆಯ ದಂಡೆಯತ್ತ ನಡೆದವು. ರಾಮು ಯಾವ ಮಣ್ಣಿನಲ್ಲಿ ಲೀನವಾದನೋ, ಅದೇ ಮಣ್ಣಿನಲ್ಲಿ ತಾನೂ ಲೀನವಾಗಬೇಕೆಂದು ನೀರಿಗೆ ಜಿಗಿಯಲು ಮುಂದಾದಳು. ಆದರೆ ಅದೇ ಕ್ಷಣ ಅವಳ ಗರ್ಭದಲ್ಲಿದ್ದ ಜೀವ ಅಲುಗಾಡಿತು. ಹೊಟ್ಟೆಯಲ್ಲಿದ್ದ ಮೊಗ್ಗು (ಮಗು) ತನ್ನ ಅಸ್ತಿತ್ವವನ್ನು ತಾಯಿ ಲಕ್ಷ್ಮೀಗೆ ನೆನಪಿಸಿತು.

ಅವಳಿಗೆ ತನ್ನಂತರಾಳದಿಂದ ಪಿಸುಮಾತು ಕೇಳಿಸಿತು: "ಅಮ್ಮಾ... ನಾನು ಇಲ್ಲಿಯೇ ಇದ್ದೇನೆ. ನನ್ನ ತಂದೆಯ ಕನಸು ನಿನ್ನೆದುರಿಗಿದೆ, ನಾನದನ್ನು ಕಾಣಬೇಕು ಎಂದಿತು." ಆಗ ಗಂಡ ರಾಮುವಿನ ಮಾತುಗಳು ಅವಳ ಕಿವಿಯಲ್ಲಿ ಮೊಳಗಿದಂತಾಯಿತು: "ಲಕ್ಷ್ಮೀ, ನಾವು ಇಲ್ಲದಿದ್ದರೂ ನಮ್ಮ ಸಾಕ್ಷಿಯಾಗಿ ಈ ಕೆರೆ ಇರಬೇಕು, ನಮ್ಮ ಊರು ಹಸಿರಾಗಿರಬೇಕು." ಎಂದು ರಾಮು ಆಗಾಗ ಹೇಳುತ್ತಿದ್ದ. ಈಗ ಲಕ್ಷ್ಮೀಗೆ ಅರ್ಥವಾಯಿತು. ರಾಮು ಸತ್ತಿಲ್ಲ, ಅವನು ಅವಳ ಒಡಲಿನಲ್ಲಿ ಬೀಜವಾಗಿ ಮೊಳಕೆಯೊಡೆಯುತ್ತಿದ್ದಾನೆ ಎಂದು. ಲಕ್ಷ್ಮೀ ಕಣ್ಣೀರು ಒರೆಸಿಕೊಂಡು ಕೆರೆ–ಯ ದಂಡೆಯಿಂದ ಹಿಂದೆ ಸರಿದಳು, ಮನೆಗೆ ವಾಪಸ್ಸಾದಳು. ಆಗ ಅವಳಲ್ಲಿ ದೃಢ ಸಂಕಲ್ಪ ಮೂಡಿತು. "ನನ್ನ ಗಂಡನ ತ್ಯಾಗ ವ್ಯರ್ಥವಾಗಲು ಬಿಡುವುದಿಲ್ಲ. ನಮ್ಮ ವಂಶದ ಕುಡಿಯನ್ನು ಈ ಹಳ್ಳಿಯ ವೀರ ಮಗನನ್ನಾಗಿ ಬೆಳೆಸುತ್ತೇನೆ," ಎಂದು ಪ್ರತಿಜ್ಞೆ ಮಾಡಿದಳು. ಮುಂದೆ ಲಕ್ಷ್ಮೀ ಗ್ರಾಮಸ್ಥರ, ಯುವಕರ ಸಹಾಯದೊಂದಿಗೆ ಮತ್ತೆ ಕೆರೆಯನ್ನು ದುರಸ್ತಿಗೊಳಿಸಿ, ಊರಿನ ಪಾಲಿಗೆ ಮರುಜೀವ ನೀಡಿದ ತಾಯಿಯಾದಳು. ಮಗುವಿನ ರೂಪದಲ್ಲಿ ರಾಮು ಮತ್ತೆ ಹುಟ್ಟಿಬಂದ ರವಿತೇಜನಾಗಿ, ಅವಳ ನಿರೀಕ್ಷೆಯಂತೆ ಹಳ್ಳಿಗಳಿಗೆ ಹೊಸ ಬೆಳಕು ತಂದನು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)